ಸಂಪುಟ: 04 ಸಂಚಿಕೆ: 256 ಪುಟಗಳು: 08 ಶುಕ್ರವಾರ 29 ನವೆಂಬರ್ 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ದೊಡ್ಡ ಗುರಿಯನ್ನು ಹೊಂದುವುದು, ನಿರಂತರವಾಗಿ ಜ್ಞಾನವನ್ನು ಪಡೆದುಕೊಳ್ಳುವುದು, ಪರಿಶ್ರಮ ಪಡುವುದು, ತಾಳ್ಮೆಯಿಂದಿರುವುದು ಈ ನಾಲ್ಕು ವಿಷಯಗಳನ್ನು ಅನುಸರಿಸಿದರೆ ನೀವು ಏನನ್ನಾದರೂ ಸಾಧಿಸಬಹುದು

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸಿಂಗಲ್ ಆಗಿ ಬರಲ್ಲ. ಬಣ ಬಡಿದಾಟ, ಹೈಕಮಾಂಡ್ ಬುಲಾವ್‌ಗೆ ಉತ್ತರ

• ಉದಯವಾಹಿನಿ, ವಿಜಯಪುರ

ರಾಜ್ಯ ಬಿಜೆಪಿಯಲ್ಲಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಟೀಂ, ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಬಣದ ನಡುವಿನ ಬಡಿದಾಟದ ಚೆಂಡು ಹೈಕಮಾಂಡ್ ಅಂಗಳಕ್ಕೆ ತಲುಪಿದ್ದು, ವರಿಷ್ಠರು ಯತ್ನಾಳ್ ಅವರನ್ನು ದೆಹಲಿಗೆ ಬರುವಂತೆ ಸೂಚನೆ ನೀಡಿದ್ದಾರೆ. ರಾಜ್ಯ ಬಿಜೆಪಿ ಬಣಗಳ ಬಡಿದಾಟ ವಿಚಾರವಾಗಿ ಚರ್ಚಿಸಲು ದೂರವಾಣಿ ಕರೆ ಮಾಡಿ ವರಿಷ್ಠರು ದೆಹಲಿಗೆ ಆಗಮಿಸುವಂತೆ ಯತ್ನಾಳ್ ಅವರಿಗೆ ಸೂಚಿಸಿದ್ದಕ್ಕೆ, ನಾನು ಒಬ್ಬನೇ ಬರಲ್ಲ. ತಂಡದ ಜೊತೆಗೆ ಬರುವೆ ಎಂದು ಯತ್ನಾಳ್ ಅವರು ಹೇಳಿದ್ದಾರೆಂದು ತಿಳಿದುಬಂದಿದೆ.

ಹೀಗಾಗಿ ಯತ್ನಾಳ್ ಅವರು ವಕ್ಫ್ ವಿರುದ್ಧದ ತಮ್ಮ ಪ್ರತ್ಯೇಕ ಹೋರಾಟವನ್ನು ಮೊಟಕುಗೊಳಿಸುತ್ತಾರೋ ಇಲ್ಲವೋ ಚಾಮರಾಜ ನಗರದವರೆಗೆ ತಮ್ಮ ಹೋರಾಟ ತಲುಪಿದ ನಂತರದ ದಿನಗಳಲ್ಲಿ ದೆಹಲಿಗೆ ಹೋಗುತ್ತಾರೋ ಎಂಬುವುದು ಕಾದು ನೋಡಬೇಕಿದೆ. ವಕ್ಫ್ ವಿರುದ್ಧದ ಪ್ರತ್ಯೇಕ ಹೋರಾಟದ ಮೂಲಕ, ಉಪ ಚುನಾವಣೆಯ ಸೋಲಿಗೆ ಬಿ.ಎಸ್.ಯಡಿಯೂರಪ್ಪ ಮತ್ತು ಅವರ ಪುತ್ರ ವಿಜಯೇಂದ್ರ ಕಾರಣ ಎಂದು ಯತ್ನಾಳ್ ಗುಡುಗಿದ್ದರು. ಅಲ್ಲದೇ ಪ್ರತ್ಯೇಕ ಹೋರಾಟ ಕೈಬಿಡಿ ಎಂದು ಬಿಎಸ್‌ವೈ ಹೇಳಿದ್ದಲ್ಲದೇ, ಯತ್ನಾಳ್ ನಡೆ-ನುಡಿಯಿಂದ ಪಕ್ಷಕ್ಕೆ ಮುಜುಗರ ಆಗುತ್ತಿದೆ ಎಂದು ವಿಜಯೇಂದ್ರ ಬಣದ ನಾಯಕರೂ ಯತ್ನಾಳ್ ವಿರುದ್ಧ ಗುಡುಗಿದ್ದರು.

## ಪ್ರಧಾನಿ ಮೋದಿಗೆ ಜೀವ ಬೆದರಿಕೆ ಮಾನಸಿಕ ಅಸ್ವಸ್ಥ ಮಹಿಳೆ ಬಂಧನ

• ಉದಯವಾಹಿನಿ ಮುಂಬೈ

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಬೆದರಿಕೆ ಕರೆ ಮಾಡಿದ ಆರೋಪದ ಮೇಲೆ ಮಾನಸಿಕ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದ 34 ವರ್ಷದ ಮಹಿಳೆಯನ್ನ ಮುಂಬೈ ಪೊಲೀಸರು ಬಂಧಿಸಿದ್ದಾರೆ ಎಂದು ಅಧಿಕಾರಿಗಳು ಗುರುವಾರ ಬಹಿರಂಗಪಡಿಸಿದ್ದಾರೆ. ನಗರದ ಪೊಲೀಸ್ ನಿಯಂತ್ರಣ ಕೊಠಡಿಗೆ ಬುಧವಾರ ಬೆದರಿಕೆ ಬಂದಿದ್ದು, ಮುಂಬೈನ ಪಶ್ಚಿಮ ಉಪನಗರವಾದ ಅಂಬೋಲಿಯಲ್ಲಿ ಅಧಿಕಾರಿಗಳು ಕರೆ ಬಂದಿದೆ ಎಂದು ಪತ್ತೆಹಚ್ಚಲಾಗಿದೆ. ವ್ಯವಹಾರ ಪ್ರಕರಣ ದಾಖಲಾಗಿದ್ದು, ಕರೆ ಮಾಡಿದವರನ್ನ ಪತ್ತೆಹಚ್ಚಲು ತಂಡವನ್ನು ಕಳುಹಿಸಲಾಗಿತ್ತು.

ಕರ್ನಾಟಕ ಮಹಿಳೆಯನ್ನು ವಿಚಾರಣೆಗಾಗಿ ವಶಕ್ಕೆ ತೆಗೆದುಕೊಳ್ಳಲಾಗಿದ್ದು, ಈ ಸಮಯದಲ್ಲಿ ಆಕೆಯ ಅಸ್ಥಿರ ಮಾನಸಿಕ ಸ್ಥಿತಿಯನ್ನ ತನಿಖೆ ಬಹಿರಂಗಪಡಿಸಿದೆ. ವರದಿಗಳ ಪ್ರಕಾರ, ಪ್ರಧಾನಿಯನ್ನ ಕೊಲ್ಲಲು ಯೋಜನೆ ರೂಪಿಸಲಾಗಿದೆ ಎಂದು ಮಹಿಳೆ ಹೇಳಿದ್ದಾಳೆ. ಅಧಿಕಾರಿಗಳು ನಂತರ ಕರೆಯನ್ನು ತಮಾಷೆ ಎಂದು ವರ್ಗೀಕರಿಸಿದ್ದು, ಆಕೆಗೆ ಯಾವುದೇ ಹಿಂದಿನ ಅಪರಾಧ ಇತಿಹಾಸವಿಲ್ಲ ಎಂದು ಗಮನಿಸಿದರು. ಘಟನೆಯ ಬಗ್ಗೆ ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪಗೆ ಹೈಕೋರ್ಟ್ ಬಿಗ್ ರಿಲೀಫ್

• ಉದಯವಾಹಿನಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರ ವಿರುದ್ಧ ಪೋಕ್ಸ್ ಪ್ರಕರಣ ದಾಖಲಾಗಿದ್ದು. ಈ ಒಂದು ಪ್ರಕಾರಣವನ್ನು ರದ್ದು ಮಾಡುವಂತೆ ಕೋರಿ ಯಡಿಯೂರಪ್ಪ ಅವರ ಅರ್ಜಿ ವಿಚಾರಣೆ ನಡೆದಿದ್ದು, ವಿಚಾರಣೆ ವೇಳೆ ಖುದ್ದು ಹಾಜರಾತಿಯನ್ನು ವಿಸ್ತರಿಸಿ, ವಿಚಾರಣೆಯನ್ನು ಡಿಸೆಂಬರ್ 2 ರಂದು ನಿಗದಿಪಡಿಸಿ ಕೋರ್ಟ್ ಆದೇಶ ಹೊರಡಿಸಿತು. ಪೋಕ್ಸ್ ಪ್ರಕರಣಕ್ಕೆ ಸಂಬಂಧಿಸಿದಂತೆ ಮಧ್ಯಂತರ ಆದೇಶ ಇರುವುದರಿಂದ ವಿಚಾರಣೆ ಸ್ಥಗಿತವಾಗಿದೆ ಪೋಕ್ಸ್ ಕೇಸ್ ಆಗಿರುವುದರಿಂದ ತುರ್ತು ವಿಚಾರಣೆ ಮಾಡಿ ಎಂದು ಮನವಿ ಮಾಡಿಕೊಳ್ಳಲಾಗಿತ್ತು. ಸರ್ಕಾರದ ಎಸ್.ಪಿ. ರವಿವರ್ಮ ಕುಮಾರ್ ಮನವಿ ಮಾಡಿಕೊಂಡಿದ್ದರು. ಈ ವೇಳೆ ಡಿಸೆಂಬರ್ 2ರ ಮಧ್ಯಾಹ್ನ 2:30 ಕ್ಕೆ ವಿಚಾರಣೆ ನಿಗದಿ ಪಡಿಸಿ ಹೈಕೋರ್ಟ್ ಆದೇಶಿಸಿದೆ. ಅಲ್ಲದೇ ಬಿಎಸ್ ಯಡಿಯೂರಪ್ಪ ಖುದ್ದು ಹಾಜರಾತಿಗೆ ವಿನಾಯಿತಿ ನೀಡಿದ್ದ ಆದೇಶ ಕೂಡ ವಿಸ್ತರಣೆಯಾಗಿದೆ.

## ಎ2 ಆರೋಪಿ ದರ್ಶನ್ ಜಾಮೀನು ಅರ್ಜಿ ಮುಂದೂಡಿದ ಹೈಕೋರ್ಟ್


• ಉದಯವಾಹಿನಿ ಬೆಂಗಳೂರು

ಬೆನ್ನಿನ ಶಸ್ತ್ರಚಿಕಿತ್ಸೆಯ ಮೇರೆಗೆ 6 ವಾರಗಳ ಮಧ್ಯಂತರ ಜಾಮೀನು ಪಡೆದು ಜೈಲಿನಿಂದ ಹೊರಗೆ ಬಂದಿರುವ ಆರೋಪಿ ದರ್ಶನ್ ಜಾಮೀನು ಅರ್ಜಿಯನ್ನು ಗುರುವಾರ ವಿಚಾರಣೆ ನಡೆಸಿದ ಹೈಕೋರ್ಟ್. ಇದೀಗ ಅರ್ಜಿ ವಿಚಾರಣೆಯನ್ನು ಮುಂದೂಡಿದೆ. ದರ್ಶನ್ ಪರ ಕೋರ್ಟಿನಲ್ಲಿ ವಕೀಲ ಸಿ.ವಿ. ನಾಗೇಶ್ ವಾದ ಮಂಡಿಸಿದ್ದು, ದರ್ಶನ್‌ಗೆ ಜಾಮೀನು ಮಂಜೂರು ಮಾಡಿ ಎಂದು ಮನವಿ ಮಾಡಿದರು.

ವಾದ ಆಲಿಸಿದ ನ್ಯಾಯಾಲಯ, ದರ್ಶನ್ ಸೇರಿ 6 ಆರೋಪಿಗಳ ಜಾಮೀನು ಅರ್ಜಿ ವಿಚಾರಣೆಯನ್ನು ನ.29ಕ್ಕೆ ಮುಂದೂಡಿದೆ. ರೇಣುಕಸ್ವಾಮಿಯನ್ನು ಬರ್ಬರವಾಗಿ ಹತ್ಯೆಗೈದ ಪ್ರಕರಣದಲ್ಲಿ ಎ1 ಆರೋಪಿ ಪವಿತ್ರಾ ಗೌಡ ಜಾಮೀನು ಅರ್ಜಿಯನ್ನು ಈ ಹಿಂದೆ ಕೋರ್ಟ್ ವಜಾಗೊಳಿಸಿತು. ಪ್ರಸ್ತುತ ಎ2 ಆರೋಪಿ ದರ್ಶನ್ ಮತ್ತು ಆತನ ಸಹಚರರ ಬೇಲ್ ಅರ್ಜಿ ವಿಚಾರಣೆಯನ್ನು ನಡೆಸುತ್ತಿರುವ ಹೈಕೋರ್ಟ್, ಸಿ.ವಿ. ನಾಗೇಶ್ ವಾದವನ್ನು ಆಲಿಸಿದ ನಂತರ ಮತ್ತೆ ವಿಚಾರಣೆಯನ್ನು ಮುಂದೂಡಿಕೆ ಮಾಡಿದೆ.

# ‘ಕೈ’ ಸಂಪುಟ ಸಂಚಲನ?

**ಎರಡು ವಿಚಾರಗಳ ಚರ್ಚೆ**



- ಸಂಪುಟ ಪುನಾರಚನೆ: ಕುತೂಹಲ ಕೆರಳಿಸಿದ ಸಿಎಂ ದೆಹಲಿ ಭೇಟಿ
- ದೆಹಲಿಯಿಂದ ಪಟ್ಟಿ ಬಂದರೆ ಎಲ್ಲಾ ಬದಲು: ಸತೀಶ ಜಾರಕಿಹೊಳಿ
- ದೆಹಲಿಯಲ್ಲಿ ಇಂದು ಮಹತ್ವದ ಮಾತುಕತೆ ನಡೆಯುವ ನಿರೀಕ್ಷೆಯಿದೆ
- ಸಿಎಂ ಮತ್ತು ಡಿಸಿಎಂ ದೆಹಲಿಗೆ ತೆರಳುತ್ತಿದ್ದಾರೆ. ದೆಹಲಿಯಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ.
- ಕೆಲವು ಸಚಿವರ ಕಾರ್ಯವೈಖರಿಯ ಬಗ್ಗೆ ಅಸಮಾಧಾನಗಳು ಇವೆ.
- ತನ್ವೀರ್ ಸೇಠ್ ಅಥವಾ ಎನ್ ಎ ಹ್ಯಾರಿಸ್ ಅವರಿಗೆ ಸಂಪುಟದಲ್ಲಿ ಅವಕಾಶ ಕಲ್ಪಿಸುವ ಸಾಧ್ಯತೆ ಇದೆ

## ಸಂಪುಟ ಪುನಾರಚನೆ ಚರ್ಚೆ ಮುನ್ನೆಲೆಗೆ



• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಕಾರಣದಲ್ಲಿ ಸಚಿವ ಸಂಪುಟ ಪುನಾರಚನೆಯ ಸುದ್ದಿಗಳು ಚರ್ಚೆಗೆ ಗ್ರಾಸವಾಗಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರು ದೆಹಲಿ ಯಾತ್ರೆ ಕೈಗೊಳ್ಳುತ್ತಿದ್ದು, ಸಂಪುಟ ವಿಸ್ತರಣೆಗೆ ಹೈಕಮಾಂಡ್ ಹಸಿರು ನಿಶಾನೆ ನೀಡುತ್ತದೆಯೇ ಇಲ್ಲವೇ ಸಂಪುಟ ಪುನಾರಚನೆ ಮುಂದಕ್ಕೆ ಹಾಕುತ್ತದೆ ಎಂಬುದು ಕುತೂಹಲ ಕೆರಳಿಸಿದೆ.

**ಬಜೆಟ್ ನಂತರವೇ ಸರ್ಜರಿ..!**

**ಸದ್ಯ ಸಂಪುಟ ಪುನಾರಚನೆಯ ಮಾತುಗಳು ಕೇಳಿ ಬರುತ್ತಿದ್ದರೂ ಮುಂದಿನ ಬಜೆಟ್ ಅಧಿವೇಶನದ ಬಳಿಕವೇ ಈ ನಿಟ್ಟಿನಲ್ಲಿ ಪ್ರಕ್ರಿಯೆಗಳು ಶುರುವಾಗುವ ಸಾಧ್ಯತೆ ಇಲ್ಲ. ಸದ್ಯ ಸರ್ಕಾರ ಆಡಳಿತಕ್ಕೆ ಬಂದು ಒಂದುವರೆ ವರ್ಷ ಆಗಿದೆಯಷ್ಟೇ, ಈ ಹಿನ್ನೆಲೆಯಲ್ಲಿ ಹೊಸ ವರ್ಷದ ಬಜೆಟ್ ಅಧಿವೇಶನ ಮುಗಿದ ಬಳಿಕ ಸಂಪುಟ ಪುನಾರಚನೆ ಪ್ರಯತ್ನಕ್ಕೆ ಹೈಕಮಾಂಡ್ ಮುಂದಾಗಲಿದೆ.**

ರಾಜ್ಯ ಕಾಂಗ್ರೆಸ್‌ನಲ್ಲಿ ಸಂಪುಟ ವಿಸ್ತರಣೆಯ ವಿಚಾರಕ್ಕೆ ರೆಕ್ಕೆ ಪುಕ್ಕ ಬಂದಿದ್ದು, ಈ ಬಾರಿ ಸಂಪುಟ ಪುನಾರಚನೆಯಾಗಲಿದೆ. 7-8 ಸಚಿವರನ್ನು ಕೈಬಿಟ್ಟು ಹೊಸಬರಿಗೆ ಅವಕಾಶ ಸಿಗಲಿದೆ ಎಂಬ ನಿರೀಕ್ಷೆಯನ್ನು ಸಚಿವಾಕಾಂಕ್ಷಿ ಶಾಸಕರು ಇಟ್ಟುಕೊಂಡಿದ್ದು, ಸಂಪುಟ ಪುನಾರಚನೆ ಮತ್ತೆ ಮುನ್ನೆಲೆಗೆ ಬಂದಿದೆ. ಸಿದ್ದರಾಮಯ್ಯ ಅವರು ಶುಕ್ರವಾರ ನಡೆಯಲಿರುವ ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯುಸಿ) ಸಭೆಯಲ್ಲಿ ಭಾಗವಹಿಸಲು ದೆಹಲಿಗೆ ತೆರಳುತ್ತಿದ್ದು, ಈ ವೇಳೆ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣು ಗೋಪಾಲ್ ಅವರನ್ನು ಡಿ.ಕೆ.ಶಿವಕುಮಾರ್ ಅವರ ಜೊತೆಗೂಡಿ ಭೇಟಿಯಾಗಿ ಸಚಿವ ಸಂಪುಟ ಪುನಾರಚನೆ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನದ ಬಗ್ಗೆ ಚರ್ಚೆ ನಡೆಸುವ ಸಾಧ್ಯತೆಗಳಿವೆ ಎಂದು ತಿಳಿದುಬಂದಿದೆ. ಉಪಚುನಾವಣೆಯಲ್ಲಿ ಕರ್ನಾಟಕದ ಎಲ್ಲಾ 3 ವಿಧಾನಸಭಾ ಸ್ಥಾನಗಳಲ್ಲೂ (ಶಿಗ್ಗಾಂವ್, ಸಂಡೂರು ಮತ್ತು ಚನ್ನಪಟ್ಟಣ) ಕಾಂಗ್ರೆಸ್ ಗೆಲುವು ಸಾಧಿಸಿದೆ. ಈ ಹಿನ್ನೆಲೆ ಮುಡಾ, ಅಬಕಾರಿ, ವಾಲ್ಮೀಕಿ ನಿಗಮ ಹಗರಣಗಳ ನಡುವಲ್ಲೂ ಗೆಲುವು ಸಾಧಿಸಿರುವುದು ಸಿದ್ದರಾಮಯ್ಯ ಅವರ ವಿಶ್ವಾಸ ಹೆಚ್ಚಿದೆ.

ಸಿಡಬ್ಲ್ಯುಸಿ ಸಭೆಯ ಬೆನ್ನಲ್ಲೇ ಸಿದ್ದರಾಮಯ್ಯ ಅವರು ಹೈಕಮಾಂಡ್ ಜೊತೆ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ, ನಾಲ್ವರು ಎಂಎಲ್‌ಸಿಗಳ ನಾಮನಿರ್ದೇಶನ ಮತ್ತು ಸಂಪುಟ ಪುನಾರಚನೆ ಕುರಿತು ಚರ್ಚೆ ನಡೆಸುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ. ಎಂಎಲ್‌ಸಿ ಹುದ್ದೆಗಳಿಗೆ ಅಭ್ಯರ್ಥಿಗಳ ಹೆಸರನ್ನು ಈಗಾಗಲೇ ಅಂತಿಮಗೊಳಿಸಲಾಗಿದ್ದು, ಕಾಂಗ್ರೆಸ್ ವರಿಷ್ಠರ ಒಪ್ಪಿಗೆಗಾಗಿ ಕಾಯುತ್ತಿದ್ದಾರೆ ಎಂದು ಬಲ್ಲ ಮೂಲಗಳು ತಿಳಿಸಿವೆ. ಕೆಪಿಸಿಸಿ ಅಧ್ಯಕ್ಷರ ವಿಷಯದಲ್ಲಿ ಸಿದ್ದರಾಮಯ್ಯ ಅವರ ಬಹುಕಾಲದ ಆಪ್ತ ಮತ್ತು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಮುಂಚೂಣಿಯಲ್ಲಿದ್ದಾರೆ. ಹಾವೇರಿ ಸಂಸದ ಹಾಗೂ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರ ಪುತ್ರ ಭರತ್ ಬೊಮ್ಮಾಯಿ ವಿರುದ್ಧ ಪಕ್ಷದ ಅಭ್ಯರ್ಥಿ ಯಾಸೀರ್ ಅಹಮದ್ ಖಾನ್ ಪಠಾಣ್ ಗೆಲುವಿನಲ್ಲಿ ಸತೀಶ್ ಪ್ರಮುಖ ಪಾತ್ರ ವಹಿಸಿದ್ದರು. ಈ ಎರಡೂ ವಿಚಾರಗಳ ಬಗ್ಗೆ ಸಿದ್ದರಾಮಯ್ಯ ಅವರು ಹೈಕಮಾಂಡ್ ನಾಯಕರ ಜತೆ ಚರ್ಚೆ ನಡೆಸುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ. ಇದಲ್ಲದೆ, ಸಚಿವ ಸಂಪುಟ ಪುನಾರಚನೆಯ ವಿಷಯವೂ ಚರ್ಚೆಯ ಸಂದರ್ಭದಲ್ಲಿ ಪ್ರಸ್ತಾಪವಾಗಬಹುದು ಎಂದು ಮೂಲಗಳು ತಿಳಿಸಿವೆ. ನವದೆಹಲಿ ಪ್ರವಾಸದ ವೇಳೆ ಸಿಎಂ ಸಿದ್ದರಾಮಯ್ಯ ಹಲವು ಕೇಂದ್ರ ಸಚಿವರನ್ನೂ ಭೇಟಿ ಮಾಡುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.






**ಕೆಪಿಸಿಸಿಗೆ ನೂತನ ಸಾರಥಿ ಚರ್ಚೆ**

ಸಂಪುಟ ಪುನಾರಚನೆಯ ಜತೆ ಜತೆಗೆ ಕೆಪಿಸಿಸಿಗೆ ನೂತನ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆಯೂ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ, ಡಿ.ಕೆ. ಶಿವಕುಮಾರ್ ವರಿಷ್ಠರೊಡನೆ ದೆಹಲಿ ಭೇಟಿ ಸಂದರ್ಭದಲ್ಲಿ ಚರ್ಚೆ ನಡೆಸುವರು ಎಂದು ಹೇಳಲಾಗಿದೆ. ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಎರಡು ಹುದ್ದೆ ನಿಭಾಯಿಸುತ್ತಿದ್ದು, ಈ ಹಿಂದೆಯ ಸ್ವತಃ ಡಿ.ಕೆ. ಶಿವಕುಮಾರ್ ರವರೇ ಕೆಪಿಸಿಸಿ ಅಧ್ಯಕ್ಷರ ಹುದ್ದೆ ತೊರೆಯುವ ಮಾತುಗಳನ್ನು ಆಡಿದ್ದರು. ಆದರೆ ವರಿಷ್ಠರ ಒತ್ತಾಯದ ಮೇರೆಗೆ ಅವರು ಕೆಪಿಸಿಸಿ ಅಧ್ಯಕ್ಷರ ಹುದ್ದೆಯಲ್ಲೂ ಮುಂದುವರೆದಿದ್ದು, ಈಗ ರಾಜ್ಯದಲ್ಲಿ ಉಪಚುನಾವಣೆಗಳು ಮುಗಿದಿದ್ದು, ಸ್ಥಳೀಯ ಸಂಸ್ಥೆಗಳ ಚುನಾವಣೆ ಹೊತ್ತಿಗೆ ಪಕ್ಷಕ್ಕೆ ಹೊಸ ಅಧ್ಯಕ್ಷರನ್ನು ನೇಮಕ ಮಾಡುವುದು ಸೂಕ್ತ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

**ಶಿಕ್ಷಣ ಸಚಿವರ ಬಗ್ಗೆಯೂ ಅಸಮಾಧಾನ**



ಇನ್ನು ಶಿಕ್ಷಣ ಸಚಿವ ಮಧು ಬಂಗಾರಪ್ಪ ಬಗ್ಗೆಯೂ ಕೆಲವು ಶಾಸಕರಲ್ಲಿ ಅಸಮಾಧಾನ ಇದೆ. ಅಷ್ಟೇ ಅಲ್ಲದೆ, ಈಡಿಗ ಸಮುದಾಯದ ಮಧು ಬಂಗಾರಪ್ಪ ಅವರ ಬದಲಾಗಿ ಮತ್ತೊಬ್ಬ ಈಡಿಗ ಸಮುದಾಯಕ ನಾಯಕರಿಗೆ ಸಚಿವ ಸ್ಥಾನ ಕೊಡುವ ಸಾಧ್ಯತೆ ಇದೆ. ಈ ನಿಟ್ಟಿನಲ್ಲಿ ಹೈಕಮಾಂಡ್ ಯಾವ ನಡೆಯನ್ನು ಅನುರಿಸುತ್ತದೆ ಎಂಬುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

## ಬಳ್ಳಾರಿಯಲ್ಲಿ ಬಾಣಂತಿಯರ ಸರಣಿ ಸಾವು ಪ್ರಕರಣ

• ಉದಯವಾಹಿನಿ ಬೆಂಗಳೂರು

**ತನಿಖೆಗೆ ತಜ್ಞರ ಸಮಿತಿ ರಚಿಸಿದ ಸರ್ಕಾರ**

ಬಳ್ಳಾರಿ ಬಿಮ್ಸ್ ಆಸ್ಪತ್ರೆಯಲ್ಲಿ ಬಾಣಂತಿಯರ ಸರಣಿ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ತಜ್ಞರ ಸಮಿತಿ ರಚನೆ ಮಾಡಿದೆ. ಡಾ.ಸವಿತಾ, ಡಾ.ಭಾಸ್ಕರ್, ಡಾ.ಹರ್ಷ ಅವರನ್ನೊಳಗೊಂಡ ತಜ್ಞರ ಸಮಿತಿಯನ್ನು ರಚನೆ ಮಾಡಿದ್ದು, ಬಳ್ಳಾರಿ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ತನಿಖೆ ನಡೆಸುವಂತೆ ಸೂಚಿಸಲಾಗಿದೆ. ಶೀಘ್ರವೇ ತನಿಖೆ ನಡೆಸಿ ವರದಿ ನೀಡುವಂತೆ ಸರ್ಕಾರ ಆದೇಶ ನೀಡಿದೆ. ಬಳ್ಳಾರಿ ಬಿಮ್ಸ್ ಆಸ್ಪತ್ರೆಗೆ ಹೆರಿಗೆಗೆಂದು ದಾಖಲಾಗಿದ್ದ ಐವರು ಮಹಿಳೆಯರು, ಹೆರಿಗೆ ಬಳಿಕ ಸಾವನ್ನಪ್ಪಿದ್ದರು. ವೈದ್ಯರ ನಿರ್ಲಕ್ಷ್ಯ ಅವ್ಯವಸ್ಥೆಯೇ ಬಾಣಂತಿಯರ ಸಾವಿಗೆ ಕಾರಣ ಎಂದು ಕುಟುಂಬದವರು ಆರೋಪಿಸಿದ್ದರು. ಬಾಣಂತಿಯರ ಸರಣಿ ಸಾವಿನಿಂದ ಜಿಲ್ಲೆಯ ಜನರು ಆತಂಕಕ್ಕೀಡಾಗಿದ್ದು ಎಚ್ಚೆತ್ತ ರಾಜ್ಯ ಸರ್ಕಾರ ಪ್ರಕರಣನದ ತನಿಖೆಗೆ ತಜ್ಞರ ತಂಡ ರಚನೆ ಮಾಡಿದೆ.

## ವಿಜಯೇಂದ್ರ ವಿರುದ್ಧ ವಿಡಿಯೋ ಬಾಂಬ್ ಸಿಡಿಸಿದ ಯತ್ನಾಳ್

• ಉದಯವಾಹಿನಿ, ಬೆಂಗಳೂರು



ವಕ್ಫ್ ವಿಚಾರಕ್ಕೆ ಸಂಬಂಧಪಟ್ಟಂತೆ ಬಿಜೆಪಿಯ ಒಂದು ತಂಡ ಈಗಾಗಲೇ ಬೀದರ್ ನಿಂದ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದೆ. ಈ ವೇಳೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಬಿವೈ ವಿಜಯೇಂದ್ರ ವಿರುದ್ಧ ಹೊಸದೊಂದು ಬಾಂಬ್ ಸಿಡಿಸಿದ್ದು, ಡಿಕೆ ಶಿವಕುಮಾರ್ ಬಳಿಗೆ ಹೋಗಿ ವಿಜಯೇಂದ್ರ 20 ಪತ್ರಕ್ಕೆ ಸಹಿ ಹಾಕಿಸಿಕೊಂಡು ಬಂದಿರುವ ವಿಡಿಯೋ ನನ್ನ ಬಳಿ ಇದೆ ಎಂದು ಸ್ಫೋಟಕ ಹೇಳಿಕೆ ನೀಡಿದರು. ವಿಜಯಪುರ ಜಿಲ್ಲೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೋಗಿ ಡಿಕೆಶಿ ಬಳಿ 20 ಪತ್ರಕ್ಕೆ ಸಹಿ ಹಾಕಿಸಿಕೊಂಡಿದ್ದರು.

ಆ ವಿಡಿಯೋ ನನ್ನ ಬಳಿ ಇದೆ. ನಾನು ಕಾಂಗ್ರೆಸ್ ಜೊತೆಗೆ ಕೈ ಜೋಡಿಸುವ ಕೆಲಸ ಮಾಡಲ್ಲ. ಪಕ್ಷಕ್ಕೆ ದ್ರೋಹ ಮಾಡುವುದಿಲ್ಲ. ಕೆಲವರೆಲ್ಲ ರಾತ್ರಿ ಡಿಕೆ ಶಿವಕುಮಾರ್, ಸಿದ್ಧರಾಮಯ್ಯ ಮನೆಗೆ ಹೋಗುತ್ತಾರೆ ಎಂದು ವಾಗ್ದಾಳಿ ನಡೆಸಿದರು.

ನಾನು ಯಾರ ಮನೆಗೆ ಹೋಗಿ ಕೆಲಸ ಮಾಡಿಕೊಡಿ ಎಂದು ಕೇಳುವ ವ್ಯಕ್ತಿಯಲ್ಲ. ಅದಕ್ಕೆ ನನ್ನ ಮೇಲೆ ಕೇಸ್‌ಗಳ ಮೇಲೆ ಕೇಸ್ ಹಾಕುತ್ತಲೇ ಇದ್ದಾರೆ. ನನ್ನ ಮೇಲೆ ಕೇಸ್ ಹಾಕಿ ಬ್ಲ್ಯಾಕ್‌ಮೇಲ್ ಮಾಡಲು ಸಾಧ್ಯವಿಲ್ಲ. ನಾನು ಯಾರಿಗೂ ಹೆದರುವುದಿಲ್ಲ. ನಾನೇ ದೂರು ಕೊಡಲು ಹೇಳಿದ್ದೇನೆ.

ಯಾರ ದೂರಿಗೂ ನಾನು ಹೆದರುವುದಿಲ್ಲ. ಯತ್ನಾಳ್‌ನ್ನು ಮುಟ್ಟುವುದು ಅಷ್ಟೊಂದು ಸಲೀಸಲ್ಲ ನನ್ನ ಜೊತೆಗೆ ರಾಜ್ಯದ ಜನರಿದ್ದಾರೆ. ನನ್ನ ಜೊತೆಗೆ ದೆಹಲಿ ನಾಯಕರಿದ್ದಾರೆ ಎಂದು ಖಡಕ್ ವಾರ್ನ್ ಮಾಡಿದರು.

## ರಾಜ್ಯದ ಜನತೆಗೆ 30,000 ಬೆಲೆಯ ಈ ಚುಚ್ಚುಮದ್ದು ಉಚಿತವಾಗಿ ನೀಡಿಕೆ

• ಉದಯವಾಹಿನಿ ಬೆಂಗಳೂರು

ಡಾ. ಪುನೀತ್ ರಾಜ್ಕುಮಾರ್ ಹೃದಯಜ್ಯೋತಿ ಯೋಜನೆಯ ಎರಡನೇ ಹಂತದಲ್ಲಿ 'ಟೆನೆಕ್ಟ್ ಪ್ಲಸ್' ಚುಚ್ಚುಮದ್ದನ್ನು ತಾಲ್ಲೂಕು ಹಾಗೂ ಜಿಲ್ಲಾ ಆಸ್ಪತ್ರೆಗಳಿಗೆ ಪೂರೈಕೆ ಮಾಡಲಾಗಿದೆ. ಈ ಚುಚ್ಚುಮದ್ದು ಒಂದು ಬಾಟಲಿಗೆ 30 ಸಾವಿರ ದರ ಇದ್ದು, ಉಚಿತವಾಗಿ ನೀಡಲಾಗುತ್ತಿದೆ.

ವ್ಯವಹಾರ ಕರ್ನಾಟಕ ಹೃದಯಾಘಾತಕ್ಕೆ ಒಳಗಾದವರಿಗೆ ಇಸಿಜಿ ಪರೀಕ್ಷೆ ನಡೆಸಿ, ಚುಚ್ಚುಮದ್ದು ಅಗತ್ಯವಿದ್ದಲ್ಲಿ ನೀಡಲಾಗುತ್ತಿದೆ.

ತೃತೀಯ ಹಂತದ ಚಿಕಿತ್ಸೆಗೆ 'ಹಬ್ ಆಸ್ಪತ್ರೆ'ಗಳಾಗಿ ನೋಂದಾಯಿತವಾಗಿರುವ ಜಯದೇವ ಹೃದ್ರೋಗ ಸಂಸ್ಥೆ ಸೇರಿ ವಿವಿಧ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಿಗೆ ಇದೇ ಚುಚ್ಚುಮದ್ದುಗಳಿಗೆ ರವಾನಿಸಲಾಗುತ್ತಿದೆ. ಡಾ. ಪುನೀತ್ ರಾಜ್‌ಕುಮಾರ್ ಹೃದಯಜ್ಯೋತಿ ಯೋಜನೆಯಡಿ ಕಳೆದ ಒಂದು ತಿಂಗಳಲ್ಲಿ 348 ಮಂದಿಯ ಜೀವ ರಕ್ಷಿಸಲಾಗಿದೆ. ಹಬ್ ಮತ್ತು ಸ್ಪೋಕ್ ಮಾದರಿಯಲ್ಲಿ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗಿದೆ. 3 ಲಕ್ಷಕ್ಕೂ ಅಧಿಕ ಮಂದಿಗೆ ಇಸಿಜಿ ಪರೀಕ್ಷೆ ಮಾಡಿಸಲಾಗಿದೆ.

## ಬೆಂಗಳೂರು ಉಗ್ರ ಕೃತ್ಯಗಳಿಗೆ ಬೆಂಬಲ ನೀಡ್ತಿದ್ದ ಭಯೋತ್ಪಾದಕ ರವಾಂಡಾದಲ್ಲಿ ಅರೆಸ್ಟ್ ಭಾರತಕ್ಕೆ ಹಸ್ತಾಂತರ

• ಉದಯವಾಹಿನಿ ಬೆಂಗಳೂರು



ಬೆಂಗಳೂರು ಕಾರಾಗೃಹದ ಭಯೋತ್ಪಾದನೆ ಸಂಚಿನ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್ಐಎ) ಗುರುವಾರ ಭಯೋತ್ಪಾದಕ ಸಂಘಟನೆ ಲಷ್ಕರ್-ಎ- ತೈಬಾ (ಎಲ್ಇಟಿ) ದೊಂದಿಗೆ ನಂಟು ಹೊಂದಿರುವ ತಲೆಮರೆಸಿಕೊಂಡಿದ್ದ ಆರೋಪಿ ಸಲ್ಮಾನ್ ರೆಹಮಾನ್ ಖಾನ್ನನ್ನು ರುವಾಂಡದಿಂದ ಬಂಧಿಸಿದೆ.

ರುವಾಂಡಾ ತನಿಖಾ ಬ್ಯೂರೋ (ಆರ್‌ಬಿಐ), ಇಂಟರ್‌ಪೋಲ್ ಮತ್ತು ರಾಷ್ಟ್ರೀಯ ಕೇಂದ್ರೀಯ ಬ್ಯೂರೋಗಳ ಸಮನ್ವಯದಲ್ಲಿ ನಡೆಸಿದ ಕಾರ್ಯಾಚರಣೆ ಜಾಗತಿಕ ಭಯೋತ್ಪಾದನೆಯನ್ನು ಎದುರಿಸಲು ಏಜೆನ್ಸಿಯ ಪ್ರಯತ್ನಗಳಲ್ಲಿ ಮಹತ್ವದ ಪ್ರಗತಿಯನ್ನು ಸಾಧಿಸಿದೆ. ನವೆಂಬರ್ 27 ರಂದು ರುವಾಂಡಾದ ಕಿಗಾಲಿಯಲ್ಲಿ ಬಂಧಿತರಾದ ಸಲ್ಮಾನ್‌ನನ್ನು ಇಂದು ಮುಂಜಾನೆ ಭಾರತಕ್ಕೆ ಹಸ್ತಾಂತರಿಸಲಾಗಿದೆ. ಬೆಂಗಳೂರಿನ ಎನ್‌ಐಎ ವಿಶೇಷ ನ್ಯಾಯಾಲಯ ಹೊರಡಿಸಿದ ಜಾಮೀನು ರಹಿತ ವಾರಂಟ್ ಆಧಾರದ ಮೇಲೆ ಇಂಟರ್‌ಪೋಲ್ ಹೊರಡಿಸಿದ ರೆಡ್ ನೋಟಿಸ್ ನಂತರ ಆತನನ್ನು ಹಸ್ತಾಂತರಿಸಲಾಗಿದೆ.

ಬೆಂಗಳೂರು ಕೇಂದ್ರ ಕಾರಾಗೃಹದ ಭಯೋತ್ಪಾದನೆ ಮತ್ತು ನೇಮಕಾತಿ ಪ್ರಕರಣದ ಭಾಗವಾಗಿ, ಸಲ್ಮಾನ್ ನನ್ನು ಎನ್‌ಐಎ, ಆರ್‌ಐಬಿ, ಇಂಟರ್‌ಪೋಲ್ ಮತ್ತು ಎನ್‌ಸಿಬಿಗಳ ನೆರವಿನೊಂದಿಗೆ ನವೆಂಬರ್ 27 ರಂದು ಬಂಧಿಸಲಾಗಿದೆ.

ಗುರುವಾರ ಬೆಳಗ್ಗೆ ಭಾರತಕ್ಕೆ ಕರೆತರಲಾಗಿದೆ ಎಂದು ಎನ್‌ಐಎ ತಿಳಿಸಿದೆ.

## ವಿಮ್ಸ್ ಪ್ರಕರಣದ ತನಿಖೆ ನಡೆಸಿ ವರದಿ ಸಲ್ಲಿಸಲು ಜಮೀರ್ ಸೂಚನೆ

• ಉದಯವಾಹಿನಿ ಬೆಂಗಳೂರು

ಬಳ್ಳಾರಿಯ ವಿಮ್ಸ್ ನಲ್ಲಿ ಕೂಡ್ಲಿಗಿ ಮೂಲದ ಬಾಣಂತಿ ಸಾವು ಪ್ರಕರಣ ಬಗ್ಗೆ ತನಿಖೆ ನಡೆಸಿ ವರದಿ ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಡಿಸಿಗಳಿಗೆ ಸೂಚನೆ ನೀಡಿದ್ದಾರೆ. ಈ ಕುರಿತು ಡಿಸಿ ಪ್ರಶಾಂತ್ ಕುಮಾರ್ ಮಿಶ್ರ ಅವರ ಬಳಿ ಮಾಹಿತಿ ಪಡೆದ ಸಚಿವರು ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಮುನ್ನೆಚ್ಚರಿಕೆ ವಹಿಸುವಂತೆ ನಿರ್ದೇಶನ ನೀಡಿದರು. ಈ ಹಿಂದೆ ಜಿಲ್ಲಾ ಆಸ್ಪತ್ರೆಯಲ್ಲಿ ಸಂಭವಿಸಿದ್ದ ನಾಲ್ಕು ಬಾಣಂತಿಯರ ಸಾವು ಪ್ರಕರಣಕ್ಕೂ ಈ ಘಟನೆಗೆ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಕೂಡ್ಲಿಗಿ ತಾಲ್ಲೂಕು ಗುಡೇಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಮಹಾಲಕ್ಷ್ಮಿ ಎಂಬುವರು ವಿಮ್ಸ್ ಗೆ ಇದೇ 24 ರಂದು ದಾಖಲಾಗಿ 26 ರಂದು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ. ಈ ಬಗ್ಗೆ ಆರೋಗ್ಯ ಅಧಿಕಾರಿಗಳಿಂದ ವರದಿ ಪಡೆಯಲಾಗಿದೆ. ಮುಂದೆ ಇಂತಹ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು ಎಂದು ಡಿಸಿಗಳು ಸಚಿವರಿಗೆ ತಿಳಿಸಿದರು.


## ಯತ್ನಾಳ್ ತಂಡದ ಹೋರಾಟ ಹಾಗೂ ಬಿಜೆಪಿ ಭಿನ್ನಮತದ ಬಗ್ಗೆ 2 ಪತ್ರ ಬರೆದರೂ ಹೈಕಮಾಂಡ್ ನಿಂದ ಕ್ರಮವಿಲ್ಲ

• ಉದಯವಾಹಿನಿ, ಬೆಂಗಳೂರು

**ವಕ್ಫ್ ವಿರುದ್ಧ ಬಸನಗೌಡ ಪಾಟೀಲ್ ಯತ್ನಾಳ ನಡೆಸುತ್ತಿರುವ ಹೋರಾಟಕ್ಕಿಂತ ಪಕ್ಷದ ನಾಯಕರ ನಡುವಿನ ಭಿನ್ನಮತವೇ ಹೆಚ್ಚು ಸದ್ದು ಮಾಡುತ್ತಿದೆ. ಇದು ಸರಿಯಲ್ಲ**
**- ಡಿ.ವಿ. ಸದಾನಂದಗೌಡ**

ರಾಜ್ಯ ಬಿಜೆಪಿ ದಕ್ಷಿಣ ಭಾರತದ ಹೆಬ್ಬಾಗಿಲು ಎಂದು ಕರೆಯುತ್ತಾರೆ. ಆದರೆ ರಾಜ್ಯ ಬಿಜೆಪಿಯಲ್ಲಿನ ಬಿನ್ನಮತ, ಬಣ ರಾಜಕೀಯದಿಂದಾಗಿ ಇಂದು ಪಕ್ಷಕ್ಕೆ ಈ ಸ್ಥಿತಿ ಬಂದಿರುವುದು ದುರಂತ ಎಂದು ಮಾಜಿ ಸಿಎಂ, ಬಿಜೆಪಿ ಹಿರಿಯ ನಾಯಕ ಡಿ.ವಿ. ಸದಾನಂದಗೌಡ ಕಳವಳ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತ ನಾಡಿದ ಡಿ.ವಿ.ಸದಾನಂದಗೌಡ, ರಾಜ್ಯ ಬಿಜೆಪಿಯಲ್ಲಿನ ಅಸಮಾಧಾನ, ಭಿನ್ನಮತಗಳ ಬಗ್ಗೆ ಆರಂಭಿಕ ದಿನಗಳಲ್ಲಿಯೂ ನಾನು ಬಿಜೆಪಿ ವರಿಷ್ಠರಿಗೆ ಪತ್ರ ಬರೆದಿದ್ದೆ, ಇತ್ತೀಚೆಗೆ ನಡೆಯುತ್ತಿರುವ ಬೆಳವಣಿಗೆ ಬಗ್ಗೆಯೂ ಪತ್ರ ಬರೆದಿದೆ.

ಆದರೆ ಎರಡೂ ಪತ್ರಗಳಿಗೂ ವರಿಷ್ಠರಿಂದ ಯಾವುದೇ ಉತ್ತರ ಬಾರದಿರುವುದು ಬೇಸರ ತಂದಿದೆ ಎಂದಿದ್ದಾರೆ. ಪಕ್ಷದ ಕೋರ್ ಕಮಿಟಿ ಅಧ್ಯಕ್ಷನಾಗಿ ಯತ್ನಾಳ್ ತಂಡದ ಹೋರಾಟ, ಬಿಜೆಪಿಯಲ್ಲಿನ ಭಿನ್ನಮತಗಳ ವಿಚಾರವಾಗಿ ಎರಡು ಪತ್ರ ಬರೆದರೂ ಹೈಕಮಾಂಡ್ ನಿಂದ ಯಾವುದೇ ಕ್ರಮ ಜರುಗಿಸದಿರುವುದು ಹಾಗೂ ಪಕ್ಷಕ್ಕೆ ಇಂದು ಈ ಸ್ಥಿತಿ ಬಂದಿರುವುದು ಬಹಳ ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.



# ರಾಜ್ಯ ಅಬಕಾರಿ ಹಗರಣದ ಆಡಿಯೋ ಬಿಡುಗಡೆ, 50% ರಿಯಾಯಿತಿ ಭ್ರಷ್ಟಾಚಾರ


### ▶▶ ದಾಖಲೆ ನೀಡಿದರೆ ರಾಜೀನಾಮೆ ನೀಡುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು, ಈಗ ಅವರು ರಾಜೀನಾಮೆ ನೀಡಲಿ: ಆರ್.ಅಶೋಕ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಅಬಕಾರಿ ಇಲಾಖೆಯು ಅಧಿಕಾರಿಗಳೇ ಸಚಿವರಿಗೆ ಹಣ ನೀಡಬೇಕೆಂದು ಲಂಚ ಕೇಳುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿತ್ತು ಇದರ ಬೆನ್ನಲ್ಲೆ ಶೇ. 50ರಷ್ಟು ರಿಯಾಯಿತಿ ವಿಚಾರ ವಾಗಿ ಲಂಚ ಕೇಳಿದ ಧ್ವನಿ ಮುದ್ರಣ ಬಿಡುಗಡೆ ಆಗಿದೆ. ಈ ಕುರಿತು ವಿಪಕ್ಷ ನಾಯಕ ಆರ್.ಅಶೋಕ್ ಅವರು ಗುರುವಾರ ಸುದ್ದಿಗಾರರಿಗೆ ಮಾಹಿತಿ ನೀಡಿದ್ದಾರೆ.

ಉತ್ತರ ಕರ್ನಾಟಕ ಭಾಗದ ಶಾಸಕರೊಂದಿಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಆರ್.ಅಶೋಕ್ ಅವರು, ರಾಜ್ಯ ಅಬಕಾರಿ ಇಲಾಖೆಯಲ್ಲಿ ಪರವಾನಗಿಗೆ ಅರ್ಜಿ ಸಲ್ಲಿಸಿದಾಗ ಲಂಚ ಕೇಳಿದ ಧ್ವನಿಮುದ್ರಣ ಈಗ ಬಿಡುಗಡೆಯಾಗಿದೆ. ಕಾಂಗ್ರೆಸ್ ಕಾರ್ಯಕರ್ತ ಆಗಿರುವುದರಿಂದ 50% ರಿಯಾಯಿತಿ ಎಂದು ಅಧಿಕಾರಿ ಹೇಳಿದ್ದಾರೆ. ಇದು ಈಗ ಜಗಜ್ಜಾಹೀರಾಗಿದ್ದು ಈ ಭ್ರಷ್ಟಾಚಾರದ ವಿರುದ್ಧವೂ ಬಿಜೆಪಿ ಹೋರಾಟ ಮಾಡಲಿದೆ. ಇಲಾಖೆ ವ್ಯಾಪ್ತಿಯಲ್ಲಿ ನಡೆದ ಭ್ರಷ್ಟಾಚಾರ ಕುರಿತು ಇಷ್ಟು ಸಾಕ್ಷಿ ಇದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ತೆರೆದ ಪುಸ್ತಕ ಎಂದು ಹೇಳುತ್ತಿದ್ದಾರೆ. ದಾಖಲೆ ನೀಡಿದರೆ ರಾಜೀನಾಮೆ ನೀಡುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು. ಈಗ ಅವರು ರಾಜೀನಾಮೆ ನೀಡಲಿ ಎಂದು ಆಗ್ರಹಿಸಿದರು. ಇತ್ತೀಚೆಗೆ ಅಬಕಾರಿ ಇಲಾಖೆ ಅಧಿಕಾರಿಗಳೇ ಸಚಿವರಿಗೆ ಹಣ ನೀಡಬೇಕೆಂದು ಲಂಚ ಕೇಳುತ್ತಿದ್ದಾರೆ.

ಈ ಕಿರುಕುಳದಿಂದ ಬೇಸತ್ತಿದ್ದೇವೆ. ಈ ರಾಷ್ಟ್ರೀಯ ಈ ಸಂಬಂಧ ರಾಜ್ಯಾದ್ಯಂತ ಮದ್ಯ ಬಂದ್ ಮಾಡಿ ಪ್ರತಿಭಟಿಸಲಾಗುವುದು ಎಂದು ರಾಜ್ಯ ಮದ್ಯ ಮಾರಾಟಗಾರರ ಸಂಘಟ ಧಾರವಾಡ ಹೇಳಿತ್ತು. ಕೊನೆಗೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ ನಡೆದ ಬಳಿಕ ಸಂಘವು ನಾವು ಯಾರ ವಿರುದ್ಧ ದೂರು ಕೊಟ್ಟಿಲ್ಲ ಎಂದು ಹೇಳಿ, ಪ್ರತಿಭಟನೆ ವಾಪಾಸ್ ಪಡೆದಿತ್ತು. ಇದೀಗ ಆರ್. ಅಶೋಕ್ ಅವರು ಇದೇ ವಿಚಾರ ಪ್ರಸ್ತಾಪಿಸಿ ಧ್ವನಿ ಮುದ್ರಣ ಕುರಿತು ಹೇಳಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಉತ್ತರ ಕರ್ನಾಟಕಕ್ಕೆ ಏನೂ ಸಿಕ್ಕಿಲ್ಲ ಎಂಬುದು ಸ್ಪಷ್ಟವಾಗಿದೆ. ಈ ಬಗ್ಗೆ ನಾನೂ ಸೇರಿದಂತೆ ಉತ್ತರ ಕರ್ನಾಟಕದ ಎಲ್ಲಾ ಶಾಸಕರು ಮಾತನಾಡಲಿದ್ದೇವೆ ಎಂದರು. ಸರ್ಕಾರಿ ಆಸ್ಪತ್ರೆಗಳಲ್ಲಿ ಶುಲ್ಕ ಏರಿಕೆಯಾಗಿದೆ. ಆಸ್ಪತ್ರೆಗಳೇ ವಸೂಲಿ ಕೇಂದ್ರಗಳಾಗಿವೆ. ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸಾವಿನ ಕುರಿತು ವರದಿ ತರಿಸಿಕೊಳ್ಳುತ್ತೇನೆ ಎಂದು ಹೇಳಿದರು.



**ಸಮಸ್ಯೆಗಳ ಸರಮಾಲೆ ಬಿಚ್ಚಿಟ್ಟ ಆರ್.ಅಶೋಕ್ ಸಾರಿಗೆ ಇಲಾಖೆ ನೌಕರರು ಬಂದ್ ಮಾಡುತ್ತೇವೆ ಎಂದು ಹೇಳಿದ್ದಾರೆ. ಅಬಕಾರಿ ಇಲಾಖೆ ಗುತ್ತಿಗೆದಾರರು ಕೂಡ ಬಂದ್ ಮಾಡಲು ಮುಂದಾಗಿದ್ದರು. ಈ ನಡುವೆ ರಸ್ತೆ ಅಭಿವೃದ್ಧಿ, ಆಸ್ಪತ್ರೆ ನಿರ್ಮಾಣ, ಬೆಳೆಹಾನಿ ಪರಿಹಾರ ಯಾವುದಕ್ಕೂ ಹಣ ಇಲ್ಲ. ಕಲ್ಯಾಣ ಕರ್ನಾಟಕಕ್ಕೆ ಆದ್ಯತೆ ನೀಡಲು ಕಲಬುರ್ಗಿಯಲ್ಲಿ ಸಚಿವ ಸಂಪುಟ ಸಭೆ ನಡೆಸಲಾಗಿತ್ತು. ಆದರೆ ಈವರೆಗೆ ಯಾವುದೇ ಯೋಜನೆಯ ಕಾರ್ಯಾದೇಶವಾಗಿಲ್ಲ**
**-ಆರ್.ಅಶೋಕ್, ವಿಪಕ್ಷ ನಾಯಕ**

**ಕಾಂಗ್ರೆಸ್ ಹೇಳಿದ್ದು ಏನು, ಉತ್ತರ ಕರ್ನಾಟಕಕ್ಕೆ ನೀಡಿದ್ದೇನು?**

**ಕಾಂಗ್ರೆಸ್ ಸರ್ಕಾರ ಹಣ ಇದೆ ಎಂದು ಹೇಳುತ್ತಲೇ ಇದೆ. ಆದರೂ ಉತ್ತರ ಕರ್ನಾಟಕಕ್ಕೆ ಯಾವುದೇ ಅನುದಾನ ನೀಡಿಲ್ಲ. ಎಷ್ಟು ಹೂಡಿಕೆ ಬಂದಿದೆ, ಎಷ್ಟು ಬೆಳೆಹಾನಿ ಪರಿಹಾರ ಸಿಕ್ಕಿದೆ. ನೀರಾವರಿ ಯೋಜನೆಗೆ ಎಷ್ಟು ಅನು ದಾನ ನೀಡಲಾಗಿದೆ ಎಂಬ ಬಗ್ಗೆ ಉತ್ತರ ಕರ್ನಾಟಕದ ಬಿಜೆಪಿ ಶಾಸಕರು ಚರ್ಚೆ ಮಾಡಿದ್ದಾರೆ. ನಂಜುಂಡಪ್ಪ ವರದಿಗೆ ಚಾಲನೆ ನೀಡುತ್ತೇವೆ ಎಂದು ಸರ್ಕಾರ ಹೇಳಿ ವರ್ಷವಾಗುತ್ತಾ ಬಂದಿದೆ ಎಂಬುದು ಕೂಡ ಚರ್ಚೆಯಾಗಿದೆ. ಇದನ್ನು ಸದನದಲ್ಲಿ ಪ್ರಶ್ನಿಸುವ, ಮಾತನಾಡುವ ಬಗ್ಗೆ ಶಾಸಕರು ಹೇಳಿದ್ದಾರೆ. ಕಾಂಗ್ರೆಸ್ ಹೇಳಿದ್ದು ಏನು, ಉತ್ತರ ಕರ್ನಾಟಕಕ್ಕೆ ನೀಡಿದ್ದೇನು? ಎಂಬ ಬಗ್ಗೆ ಶಾಸಕರೇ ಮಾತನಾಡಲಿದ್ದಾರೆ ಎಂದು ವಿವರಿಸಿದರು.**

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,735/Gram24ct ₹7,090/Gram22ct | ಬೆಳ್ಳಿ: ₹89.50/Gram



## ಸಿದ್ದಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಬಾಂಗ್ಲಾ :ಚಿನ್ಮಯಕೃಷ್ಣದಾಸ್ಗೆ ಜೈಲು

ಬಾಂಗ್ಲಾದ ಹಿಂದು ಸಂಘಟನೆಯ ಮುಖಂಡ ಸಂನ್ಯಾಸಿ ಚಿನ್ಮಯ ಕೃಷ್ಣ ದಾಸ್ ಅವರನ್ನು ಜೈಲಿಗೆ ಕಳಿಸಲಾಗಿದೆ. 2024 ರ ಆಗಸ್ಟ್ನಲ್ಲಿ ಷೇಕ್ ಹಸೀನಾ ಉಚ್ಚಾಟಣೆಯ ದಂಗೆಯೊಂದಿಗೆ ಆರಂಭಗೊಂಡ ಹಿಂದು, ಹಿಂದುಧಾರ್ಮಿಕ ಸಂಘಟನೆ ಮೇಲಿನ ದೌರ್ಜನ್ಯ ವಿರೋಧಿಸಿ ನಡೆದ ರ್ಯಾಲಿಯೊಂದರಲ್ಲಿ ಇಸ್ಕಾನ್ನ ಧಾರ್ಮಿಕ ಧ್ವಜವನ್ನು ಬಾಂಗ್ಲಾ ದೇಶದ ಧ್ವಜಕ್ಕಿಂತ ಎತ್ತರ ಹಾರಿಸಲಾಗಿತ್ತು ಎಂದು ದೇಶದ್ರೋಹದ ಆರೋಪ ಹೊರಿಸಲಾಗಿದೆ. ದಾಸ್ ಅವರನ್ನು ಜೈಲಿಗೆ ಕಳಿಸಿರುವುದನ್ನು ಭಾರತ ಸರ್ಕಾರ, ಇಸ್ಕಾನ್, ಷೇಕ್ ಹಸೀನಾ ವಿರೋಧಿಸಿದ್ದಾರೆ. ಜೈಲಿಗೆ ಕಳಿಸಿರುವುದನ್ನು ವಿರೋಧಿಸಿ ನಡೆದ ಪ್ರತಿಭಟನೆಯಲ್ಲಿ ವಕೀಲ ಸೈಫುಲ್ ಇಸ್ಲಾಂನ ಹತ್ಯೆ ನಡೆದಿದೆ. ಈ ಬೆನ್ನಲ್ಲೇ ಬಾಂಗ್ಲಾದ ಸುಪ್ರೀಂ ಕೋರ್ಟ್ ವಕೀಲನೊಬ್ಬ ಇಸ್ಕಾನ್ ನ್ನು ನಿಷೇಧಿಸಬೇಕೆಂದು ಸರ್ಕಾರಕ್ಕೆ ಪತ್ರ ಬರೆದು, ಹೈಕೋರ್ಟ್ಗೆ ಅರ್ಜಿ ಹಾಕಿದ್ದು ಕೋರ್ಟ್ ಅದನ್ನು ವಜಾಗೊಳಿಸಿದೆ. ಇಸ್ಕಾನ್ ಜನಾಂಗೀಯ ಹಿಂಸಾಚಾರ ಪ್ರಚೋದಿಸುತ್ತಿದೆ, ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸುತ್ತಿದೆ, ಹಿಂದು ಸಂಪ್ರದಾಯವನ್ನು ಜನರ ಮೇಲೆ ಹೇರುತ್ತಿದೆ, ಹಿಂದು ಸಮುದಾಯದ ಕೆಳಜಾತಿ ಜನರನ್ನು ಬಲವಂತವಾಗಿ ಸೆಳೆಯುತ್ತಿದೆ ಇದು ಅಲ್ಲಿನ ವಾದ. ದೇಶದಲ್ಲಿದ್ದವರು ದೇಶ-ದೇಶದ ಧರ್ಮ ಕಾನೂನು ಗೌರವಿಸಬೇಕು. ಹಾಗೆಯೇ ದೇಶವಾಸಿಗಳ ಅಲ್ಪಸಂಖ್ಯಾತರ ಧಾರ್ಮಿಕ ಸಂರಕ್ಷಣೆ ದೇಶದ ಕರ್ತವ್ಯ. ಧಕ್ಕೆಯಾದಾಗ ಆತ್ಮರಕ್ಷಣೆಗೆ ಒಗ್ಗಟ್ಟು. ಧಾರ್ಮಿಕ ಧ್ವಜವನ್ನು ದುರುದ್ದೇಶದಿಂದ ದೇಶದ ಧ್ವಜಕ್ಕಿಂತ ಎತ್ತರ ಹಾರಿಸಿದ್ದು ವಿಚಾರಣೆಯ ಬಳಿಕ ಸಾಬೀತಾದಲ್ಲಿ ಶಿಕ್ಷೆ ನ್ಯಾಯ. ಭಾರತದಲ್ಲಿ ಭಾರತದ ಧ್ವಜವನ್ನೇ ತಿರುಚಿ ಇಸ್ಲಾಮೀಕರಿಸಿ ಹಾರಿಸಿದಂತೆ, ಅನ್ಯ ದೇಶದ ಪರ ಘೋಷಣೆ ಕೂಗಿದಂತೆ ನಡೆದಿಲ್ಲ. ಯಾವುದೇ ಧಾರ್ಮಿಕ ಸಂಘಟನೆಯ ಉದ್ದೇಶ ಆಯಾ ಧರ್ಮದ ಪ್ರಸಾರ. ಬಲವಂತದ ವಿಷಯವನ್ನು ಬಲವಂತಕ್ಕೊಳಗಾದವರು ಹೇಳಬೇಕು. ಭಾರತದಲ್ಲಿ ಅನ್ಯ ಧರ್ಮೀಯರು ಮಾಡುವಂತೆ ಮತಾಂತರ ಮತ್ತೊಂದು ನಡೆದ ವರದಿಯಿಲ್ಲ.

## ಕ್ಯಾಮೆರಾ ಮೆನ್ ಆತ್ಮಹತ್ಯೆಗೆ ಶರಣು

• **ಉದಯವಾಹಿನಿ, ಬೆಂಗಳೂರು**

ಆಪ್ ಮೂಲಕ ಸಾಲ ಪಡೆದಿದ್ದ ವ್ಯಕ್ತಿಗೆ ಸಾಲದ ಹಣ ವಾಪಸ್ ನೀಡದಿದ್ದರೆ, ನಗ್ನ ಚಿತ್ರ ವೈರಲ್ ಮಾಡುವುದಾಗಿ ಕರೆ ಮಾಡಿ ಕಿರುಕುಳ ನೀಡಲಾಗುತ್ತಿತ್ತು. ಕಿರುಕುಳದಿಂದ ಬೇಸತ್ತು ಕ್ಯಾಮೆರಾ ಮ್ಯಾನ್ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಬೆಂಗಳೂರು ಉತ್ತರ ತಾಲ್ಲೂಕಿನ ಗೊಲ್ಲರಹಟ್ಟಿ ಗ್ರಾಮದಲ್ಲಿ ನಡೆದಿದೆ. ವ್ಯವಹಾರ ಕರ್ನಾಟಕ ಆಪ್ ಒಂದರ ಮೂಲಕ ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿಯನ್ನು ಕಿರಣ್ (32) ಎಂದು ತಿಳಿದುಬಂದಿದೆ. ಆಪ್ ಮೂಲಕ ಕಿರಣ್ ಎರಡು ಲಕ್ಷ ಸಾಲ ಪಡೆದಿದ್ದ ಸಾಲದ ಹಣ ವಾಪಸ್ ನೀಡದಿದ್ದರೆ, ನಗ್ನ ಚಿತ್ರ ವೈರಲ್ ಮಾಡುವುದಾಗಿ ಬೆದರಿಕೆ ಹಾಕಲಾಗಿದೆ. ಸಾಲದ ಹಣ ವಾಪಸ್ ನೀಡದಿದ್ದರೆ ನಗ್ನ ಚಿತ್ರ ವೈರಲ್ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ. ಕಿರಣ್ ಫೋಟೋ ಎಡಿಟ್ ಮಾಡಿ ನಗ್ನ ಚಿತ್ರ ವೈರಲ್ ಮಾಡುವುದಾಗಿ ಬೆದರಿಕೆ ಹಾಕಿದ್ದರು. ಹಾಗಾಗಿ ಕಿರಣ್ ಮನನೊಂದು ಆತ್ಮಹತ್ಯೆಗೆ ಶರಣಾಗಿದ್ದಾರೆ. ಕಿರಣ್ ಖಾಸಗಿ ಚಾನೆಲ್ ಒಂದರಲ್ಲಿ ಕ್ಯಾಮೆರಾಮನ್ ಆಗಿ ಕಾರ್ಯನಿರ್ವಹಿಸುತ್ತಿದ್ದರು. ಸದ್ಯ ಅವರ ಮೃತ ದೇಹವನ್ನು ನೆಲಮಂಗಲದ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ರವಾನಿಸಲಾಗಿದ್ದು, ನೆಲಮಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸ್ವಾಮೀಜಿಗಳು ರಾಜಕೀಯದಿಂದ ದೂರವಿರುವುದು ಒಳಿತು

• **ಉದಯವಾಹಿನಿ, ಬೆಂಗಳೂರು**

ಸ್ವಾಮೀಜಿಗಳು ರಾಜಕಾರಣದಿಂದ ದೂರ ಇರಬೇಕು. ವಿವಾದಾತ್ಮಕ ಹೇಳಿಕೆ ಕೊಟ್ಟು ದೇಶದಲ್ಲಿ ಅಶಾಂತಿ ಮೂಡಿಸುವ ಪ್ರಯತ್ನ ಮಾಡಬಾರದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ ಮಾಡಿದರು. ಮುಸ್ಲಿಮರಿಗೆ ನೀಡಿರುವ ಮತದಾನದ ಹಕ್ಕು ಹಿಂಪಡೆಯಬೇಕು ಎಂಬ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಚಂದ್ರ ಶೇಖರ ಸ್ವಾಮೀಜಿ ಹೇಳಿಕೆಗೆ ಬುಧವಾರ ದೆಹಲಿಯಲ್ಲಿ ಪ್ರತಿಕ್ರಿಯಿಸಿದ ಅವರು, 'ಸ್ವಾಮೀಜಿಗಳು ಇಂಥ ವಿವಾದಾತ್ಮಕ ಹೇಳಿಕೆ ನೀಡಬಾರದು. ಅವರು ಧಾರ್ಮಿಕ ಕೆಲಸಗಳ ಬಗ್ಗೆ ಗಮನ ಹರಿಸಬೇಕು. ಸಮಾಜದ ಶಾಂತಿ ಕೆಡಿಸುವ ಕೆಲಸ ಮಾಡಬಾರದು. ಅವರು ರಾಜಕಾರಣದಿಂದ ದೂರ ಇರುವುದು ಒಳಿತು. ಮತದಾನ ಎಂಬುದು ಸಂವಿಧಾನದ ಮೂಲಕ ಈ ದೇಶದ ಪ್ರತಿಯೊಬ್ಬ ಪ್ರಜೆಗೂ ಬಂದಿರುವ ಹಕ್ಕು. ಒಬ್ಬ ವ್ಯಕ್ತಿ ಜನಿಸಿದರೆ ಸಂವಿಧಾನದಿಂದ ಸಿಗುವ ಹಕ್ಕುಗಳಲ್ಲಿ ಇದು ಕೂಡ ಒಂದು' ಎಂದರು. ಮುಸ್ಲಿಮರಿಗೆ ಮತದಾನದ ಹಕ್ಕು ನೀಡಬಾರದು ಮತ್ತು ದೇಶದಲ್ಲಿ ವಕ್ಸ್ ಮಂಡಳಿಯೇ ಇಲ್ಲದಂತೆ ಮಾಡಬೇಕು' ಎಂದು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಚಂದ್ರಶೇಖರ ಸ್ವಾಮೀಜಿ ಹೇಳಿಕೆ ನೀಡಿದ್ದರು.

## 15 ನಿಮಿಷಗಳ ಮಾರ್ಗದಲ್ಲಿ ಗಂಟೆಗಟ್ಟಲೆ ಸಂಚಾರ: ಬಿಡಬ್ಲ್ಯುಎಸ್ಎಸ್ಬಿ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯುಎಸ್ ಎಸ್ಬಿ) ಗೇರ್ ಸ್ಕೂಲ್ ರಸ್ತೆಯಲ್ಲಿ ಒಳಚರಂಡಿ ಮಾರ್ಗಗಳನ್ನು ಅಳವಡಿಸಲು 80 ಅಡಿ ರಸ್ತೆಯನ್ನು ಅಗೆದಿದ್ದು, ಇದರ ಪರಿಣಾಮ ವೈಟ್ ಫೀಲ್ಡ್ ಮತ್ತು ಸುತ್ತಮುತ್ತಲಿನ ನಿವಾಸಿಗಳು ಭಾರೀ ಸಂಚಾರ ದಟ್ಟಣೆ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ನ ವಾಣಿಜ್ಯ 15 ನಿಮಿಷಗಳಲ್ಲಿ ಸಂಚರಿಸಬಹುದಾದ ರಸ್ತೆಯಲ್ಲಿ ಇಂದು 1 ರಿಂದ 1.5 ಗಂಟೆಗಳ ಸಮಯವಾಗುತ್ತಿದೆ. ವಾಹನಗಳು ನಿಧಾನಗತಿಯಲ್ಲಿ ಸಾಗುತ್ತಿವೆ ಎಂದು ಸ್ಥಳೀಯ ನಿವಾಸಿಗಳು ಬೇಸರ ವ್ಯಕ್ತಪಡಿಸಿದ್ದಾರೆ. 1. ರಾಜಕೀಯ GEAR ಸ್ಕೂಲ್ ರಸ್ತೆಯಲ್ಲಿ ಬಿಡಬ್ಲ್ಯುಎಸ್ಎಸ್ಬಿ ಕಾಮಗಾರಿ ಕಳದ ಎಂಟು ತಿಂಗಳಿನಿಂದಲೂ ನಡೆಯುತ್ತಿದೆ. ರಸ್ತೆಯ ತುಂಬ ಧೂಳು ತುಂಬಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಅ ಆರೋಗ್ಯ - ಅಂಕಣಗಳು ಈ ರಸ್ತೆಯಲ್ಲಿ 5 ಶಾಲೆಗಳಿದ್ದು ಕ್ಲಿಪ್ ಕಾರ್ಟ್, ಇಂಟೆಲ್, ಇಎಕ್ಸ್ಎಲ್ನಂತಹ ಐಟಿ ಕಂಪನಿಗಳ ಕಚೇರಿಗಳಿವೆ. ಜೀವನಶೈಲಿ ಬಿಡಬ್ಲ್ಯುಎಸ್ಎಸ್ಬಿ ಕಾಮಗಾರಿಯಿಂದಾಗಿ ಈ ರಸ್ತೆಯಲ್ಲಿ ಪ್ರತಿನಿತ್ಯ ಟ್ರಾಫಿಕ್ ಜಾಮ್ ಆಗುತ್ತಿದೆ. ಮಕ್ಕಳು ಮತ್ತು ಕಚೇರಿಗೆ ಹೋಗುವವರು ಪ್ರತಿದಿನ ತೊಂದರೆ ಅನುಭವಿಸುತ್ತಿದ್ದಾರೆಂದು ಹೇಳಿದ್ದಾರೆ.

## ಕಡ್ಲೆಕಾಯಿ ಪರಿಷೆ 3 ದಿನಕ್ಕೆ ಸೀಮಿತಗೊಳಿಸಿ

• **ಉದಯವಾಹಿನಿ, ಬೆಂಗಳೂರು**

ಬಸವನಗುಡಿಯಲ್ಲಿ ನಡೆಯುತ್ತಿರುವ ಕಡಲೆಕಾಯಿ ಪರಿಷೆ ಈ ಮುಂಚಿನಂತೆ ನಡೆಸುತ್ತಿದ್ದ ರೀತಿಯಲ್ಲೇ ಮೂರು ದಿನಕ್ಕೆ ಸೀಮಿತಗೊಳಿಸಿ ಸ್ಥಳೀಯ ಪರಿಸರ, ಸ್ವಚ್ಛತೆ,ನೈರ್ಮಲ್ಯಕ್ಕೆ ಆದ್ಯತೆ ನೀಡಬೇಕು ಎಂದು ಹೆರಿಟೇಜ್ ಬಸವನಗುಡಿ ರೆಸಿಡೆಂಟ್ಸ್ ವೆಲ್ಫೇರ್ ಫೋರಂ, ನಗರ ಪೊಲೀಸ್ ಆಯುಕ್ತರಿಗೆ ಪತ್ರ ಬರೆದಿ ದೆ. 2 ಈ ವರ್ಷ ವಾರಾಂತ್ಯ ಸೇರಿ ಐದು ದಿನ ಪರಿಷೆಗೆ ಅವಕಾಶ 6 ಮಾಡಿಕೊಟ್ಟಿರುವ ಕಾರಣ ಬಸವನಗುಡಿ ದೇಗುಲ ಸೇರಿ ಅದರ ಆಸುಪಾಸಿನ ಸ್ಥಳಗಳಲ್ಲಿ ಕಸ ರಾಶಿ ಬಿದ್ದಿದೆ. ಜತೆಗೆ ಅಲ್ಲಿನ ರಸ್ತೆಗಳಲ್ಲಿ ನೈರ್ಮಲ್ಯ ಕಾಪಾಡುವ ಕೆಲಸ ಸಮರ್ಪಕವಾಗಿ ನಡೆದಿಲ್ಲ. ಇದರಿಂದ ಸ್ವಚ್ಛತೆ ಇಲ್ಲದೆ ಸಾಂಕ್ರಾಮಿಕ ರೋಗಗಳು ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ಜತೆಗೆ ಇಲ್ಲಿಯ ನಿವಾಸಿಗಳ ಹಾಗೂ ಹಿರಿಯ ನಾಗರಿಕರ ಹಿತದೃಷ್ಟಿಯಿಂದ ಪರಿಷೆಯಿಂದ ಉಂಟಾಗಿರುವ ತ್ಯಾಜ್ಯ ಹಾಗೂ ಇನ್ನಿತರ ಅಳಿದುಳಿದ ವಸ್ತುಗಳನ್ನು ಕೂಡಲೇ ತೆರವು ಮಾಡಿಸಲು ಸಹಕಾರ ನೀಡಬೇಕು. ಜತೆಗೆ ಇನ್ನು ಮುಂದೆ ಪರಿಷೆಯನ್ನು 3 ದಿನ ಮಾತ್ರ ನಡೆಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಫೋರಂನ ಕಾರ್ಯದರ್ಶಿ ಗುರುಪ್ರಸಾದ್ ರೊಟ್ಟಿ, ಅವರು ಮನವಿ ಮಾಡಿದ್ದಾರೆ.

# ವಿಮಾನ ನಿಲ್ದಾಣಕ್ಕೆ 320 ಎಸಿ ಎಲೆಕ್ಟ್ರಿಕ್ ಬಸ್ ಸಂಚಾರ

### ವೋಲ್ವೋ ಬಸ್‌ಗಳ ಕಾರ್ಯಾಚರಣೆಯಿಂದ ಬಿಎಂಟಿಸಿಗೆ ಲಾಭಕ್ಕಿಂತ ನಷ್ಟವೇ ಹೆಚ್ಚು ಎಂಬುದು ತಜ್ಞರ ಅಭಿಪ್ರಾಯ

• **ಉದಯವಾಹಿನಿ, ಬೆಂಗಳೂರು**

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಾರ್ವಜನಿಕ ಸಾರಿಗೆ ಪೈಕಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ)ಯ ವಾಯು ವಜ್ರ ಬಸ್‌ಗಳು ಗಮನ ಸೆಳೆಯುತ್ತಿರುತ್ತವೆ. ಬಹಳಷ್ಟು ವಾಯು ವಜ್ರ ಬಸ್‌ಗಳು ವೋಲ್ವೋ ಕಂಪನಿ ನಿರ್ಮಿತ ಬಸ್‌ಗಳಾಗಿದ್ದು ಇವುಗಳ ಬದಲಿಗೆ ಎಲೆಕ್ಟ್ರಿಕ್ ಬಸ್‌ಗಳನ್ನು ಓಡಿಸಲು ಬಿಎಂಟಿಸಿ ನಿರ್ಧರಿಸಿದೆ.

ಮುಂದಿನ ತಿಂಗಳಿಂದಲೇ ಪರಿಸರ ಸ್ನೇಹಿ ಎಲೆಕ್ಟ್ರಿಕ್ ಬಸ್‌ಗಳು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮಾರ್ಗದಲ್ಲಿ ಸಂಚರಿಸಲಿವೆ. ವೋಲ್ವೋ ಬಸ್‌ಗಳ ಕಾರ್ಯಾಚರಣೆಯಿಂದ ನಷ್ಟವಾಗುತ್ತಿರುವ ಬಗ್ಗೆ ಕಳವಳ ಹೆಚ್ಚಿದ ಹಿನ್ನೆಲೆಯಲ್ಲಿ ನಮ್ಮ ನಿಯಂತ್ರಿಸುವ ಕೆಲಸಕ್ಕೆ ಬಿಎಂಟಿಸಿ ಮುಂದಾಗಿದೆ. ವೋಲ್ವೋ ಬಸ್‌ಗಳ ಕಾರ್ಯಾಚರಣೆಯಿಂದ ಬಿಎಂಟಿಸಿಗೆ ಲಾಭಕ್ಕಿಂತ ನಷ್ಟವೇ ಹೆಚ್ಚು ಎಂಬುದು ತಜ್ಞರ ಅಭಿಪ್ರಾಯ ಎಂದು ಬಿಎಂಟಿಸಿ ಮೂಲಗಳು ತಿಳಿಸಿವೆ.

ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮಾರ್ಗದಲ್ಲಿ ವೋಲ್ವೋ ಬಸ್ಸುಗಳು ದೀರ್ಘಕಾಲದಿಂದ ಸಂಚರಿಸುತ್ತಿವೆ. ಇವು ಅನುಕೂಲಕರ ಮತ್ತು ವಿಶ್ವಾಸಾರ್ಹ



ಉದಯವಾಹಿನಿ ಚಿತ್ರ

**ವೋಲ್ವೋ ಬಸ್‌ಗಳ ನಿರ್ವಹಣೆ**

ಪ್ರಯಾಣವನ್ನು ಬೆಂಗಳೂರಿಗರಿಗೆ ಒದಗಿಸುತ್ತ ಬಂದಿದ್ದವು. ಆದರೆ, ಹೆಚ್ಚಿನ ನಿರ್ವಹಣಾ ವೆಚ್ಚ ಮತ್ತು ಖರ್ಚು ವೆಚ್ಚಗಳ ಕಾರಣ ವೋಲ್ವೋ ಬಸ್‌ಗಳ ನಿರ್ವಹಣೆ ಬಿಎಂಟಿಸಿಗೆ ಲಾಭದಾಯಕವಾಗಿಲ್ಲ. ಇದೇ ವೇಳೆ, ಅಶೋಕ್ ಲೇಲ್ಯಾಂಡ್ ಒದಗಿಸುವ ಎಲೆಕ್ಟ್ರಿಕ್ ಬಸ್‌ಗಳ ಕಾರ್ಯಾಚರಣೆಯಿಂದ ಬಿಎಂಟಿಸಿಗೆ ಲಾಭವಾಗಲಿದೆ ಎಂಬುದು ದೃಢಪಟ್ಟ ಕಾರಣ,

> ಆದ್ದರಿಂದ ಐಷಾರಾಮಿ ವೋಲ್ವೋ ಬಸ್‌ಗಳ ಬದಲಿಗೆ ಬಿಎಂಟಿಸಿಯು 320 ಹೊಸ ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್‌ಗಳನ್ನು ಪರಿಚಯಿಸಲಿದೆ. ಈ ಬಸ್ಸುಗಳನ್ನು ಅಶೋಕ್ ಲೇಲ್ಯಾಂಡ್ ಕಂಪನಿಯು ಒದಗಿಸಲಿದೆ. ಇದು ಸುಸ್ಥಿರ ಮತ್ತು ಪರಿಸರ ಸ್ನೇಹಿ ಸಾರ್ವಜನಿಕ ಸಾರಿಗೆಯತ್ತ ಗಮನಾರ್ಹ ಬದಲಾವಣೆಯನ್ನು ಸೂಚಿಸುತ್ತದೆ. ಪರಿವರ್ತನೆಯು ನಿಗಮದ ಕಾರ್ಯಾಚರಣೆಯ ವೆಚ್ಚವನ್ನು ಕಡಿಮೆ ಮಾಡುತ್ತದೆ ಮತ್ತು ಮಾಲಿನ್ಯವನ್ನು ಕಡಿಮೆ ಮಾಡುವ ಬೆಂಗಳೂರು ನಗರಾಡಳಿತದ ಪ್ರಯತ್ನಗಳಿಗೆ ಕೊಡುಗೆ ನೀಡುತ್ತದೆ ಎಂದು ನಿರೀಕ್ಷಿಸಲಾಗಿದೆ.

ಅದರ ಕಡೆಗೆ ಬಿಎಂಟಿಸಿ ಒಲವು ತೋರಿದೆ. ಅದೂ ಅಲ್ಲದೆ, ಬೆಂಗಳೂರಿನ ಇಂಗಾಲದ ಹೆಜ್ಜೆಗುರುತನ್ನು ಕಡಿಮೆ ಮಾಡಲು ಕೊಡುಗೆ ನೀಡುತ್ತದೆ ಎಂದು ನಿರೀಕ್ಷೆಯೊಂದಿಗೆ ಬಿಎಂಟಿಸಿ ಮುಂದುವರಿದಿದೆ.

ಬೆಂಗಳೂರಿನಲ್ಲಿ ಎಲೆಕ್ಟ್ರಿಕ್ ಬಸ್‌ಗಳ ಸಂಚಾರಕ್ಕೆ ಬಿಎಂಟಿಸಿ ಕ್ರಮ ತೆಗೆದುಕೊಂಡಿದ್ದು ಈ ಉಪಕ್ರಮವು ಫೇಮ್ 2 ರೀತಿಯ ರಾಷ್ಟ್ರೀಯ ಯೋಜನೆಗಳಂತೆ ತನ್ನ ಫ್ಲೀಟ್ ಅನ್ನು

> ವೆಚ್ಚ-ಪರಿಣಾಮಕಾರಿ ಎಲೆಕ್ಟ್ರಿಕ್ ಬಸ್‌ಗಳು ಮಾಲಿನ್ಯವನ್ನು ಕಡಿಮೆ ಮಾಡುವುದರ ಮೂಲಕ ಪರಿಸರ ಸ್ನೇಹಿ ಕಾರ್ಯಾಚರಣೆಗೆ ಬಿಎಂಟಿಸಿಗೆ ಸಹಕರಿಸಲಿವೆ. ಅಷ್ಟೇ ಅಲ್ಲ, ದೈನಂದಿನ ಪ್ರಯಾಣಿಕರಿಗೆ ಮತ್ತು ಪ್ರಯಾಣಿಕರಿಗೆ ಸಾರ್ವಜನಿಕ ಸಾರಿಗೆಯನ್ನು ಹೆಚ್ಚು ಆಕರ್ಷಕ ಆಯ್ಕೆಗೂ ನೆರವಾಗಲಿದೆ. ಬಿಎಂಟಿಸಿಯ ಈ ಉಪಕ್ರಮಗಳು ಗ್ರೀನ್ ಫ್ಲೀಟ್ ಬೆಂಬಲಿಸುವ ಚಾರ್ಜಿಂಗ್ ಸ್ಟೇಷನ್‌ಗಳನ್ನು ಸ್ಥಾಪಿಸುವ ಯೋಜನೆಗಳನ್ನೂ ಒಳಗೊಂಡಿವೆ ಎಂದು ವರದಿ ಹೇಳಿದೆ.

ಆಧುನೀಕರಿಸಲು ಮುಂದಾಗಿದೆ. ಇದು ಬಿಎಂಟಿಸಿಯ ವಿಸ್ತ್ರತ ಕಾರ್ಯಾಚರಣೆಯ ಕಾರ್ಯತಂತ್ರದ ಭಾಗವಾಗಿದೆ. ಇದರಂತೆ, ಬೆಂಗಳೂರು ನಗರದಾದ್ಯಂತ 1,751 ಎಲೆಕ್ಟ್ರಿಕ್ ಬಸ್‌ಗಳನ್ನು ನಿಯೋಜಿಸುವ ಗುರಿಯನ್ನು ಹೊಂದಿದೆ. ವಿಮಾನ ನಿಲ್ದಾಣದ ಮಾರ್ಗಗಳಲ್ಲಿ ಎಲೆಕ್ಟ್ರಿಕ್ ಬಸ್‌ಗಳ ಪರಿಚಯವು ಸುಸ್ಥಿರ ಮತ್ತು ಪರಿಣಾಮಕಾರಿ ಸಾರಿಗೆ ಜಾಲವನ್ನು ರಚಿಸುವತ್ತ ಒಂದು ಹೆಜ್ಜೆಯಾಗಿದೆ ಎಂದು ಏಷ್ಯಾನೆಟ್ ಸುವರ್ಣ ವರದಿ ಹೇಳಿದೆ.

## ಸಂಪುಟ ಸರ್ಜರಿ ಫಿಕ್ಸ್ : ಶಾಸಕ ಬೇಳೂರು ಗೋಪಾಲಕೃಷ್ಣಗೆ ಸಚಿವ ಸ್ಥಾನ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಕಾಂಗ್ರೇಸ್ ಸರ್ಕಾರದ ಸಚಿವ ಸಂಪುಟ ಸರ್ಜರಿಯಾಗಲಿದೆ. ಸಿಎಂ ಸಿದ್ದರಾಮಯ್ಯ ಅವರು ತಮ್ಮ ಸಂಪುಟವನ್ನು ಪುನರ್ ರಚಿಸಲಿದ್ದಾರೆ. ಹಾಲಿ ಸಚಿವರಿಗೆ ಕೋಕ್ ನೀಡಿ, ಹೊಸಬರಿಗೆ ಅವಕಾಶ ನೀಡಲಿದ್ದಾರೆ. ಸಾಗರ ಕ್ಷೇತ್ರದ ಶಾಸಕ ಬೇಳೂರು ಗೋಪಾಲಕೃಷ್ಣ ಅವರಿಗೆ ಸಿಎಂ ಸಿದ್ಧರಾಮಯ್ಯ ಸಂಪುಟದಲ್ಲಿ ಸಚಿವ ಸ್ಥಾನ ಸಿಗುವ ಸಾಧ್ಯತೆ ಇದೆ ಎಂಬುದಾಗಿ ಕಾಂಗ್ರೆಸ್ ಉನ್ನತ ಮೂಲಗಳಿಂದ ಮಾಹಿತಿ ತಿಳಿದು ಬಂದಿದೆ.

ಶಿವಮೊಗ್ಗ ಜಿಲ್ಲೆಯ ಸಾಗರ ಕ್ಷೇತ್ರದ ಜನಪ್ರಿಯ, ಈಡಿಗ ಸಮುದಾಯದ ಪ್ರಭಾವಿ ನಾಯಕರಲ್ಲಿ ಶಾಸಕ ಬೇಳೂರು ಗೋಪಾಲಕೃಷ್ಣ ಕೂಡ ಒಬ್ಬರು. ಈಗಾಗಲೇ ಜಿಲ್ಲೆಯಲ್ಲಿ ದೀವರ ಸಮುದಾಯದ ಮಧು ಬಂಗಾರಪ್ಪ ಅವರಿಗೆ ಶಾಲಾ ಶಿಕ್ಷಣ ಸಚಿವ ಸ್ಥಾನವನ್ನು ನೀಡಲಾಗಿದೆ. ಅವರ ಬೆನ್ನಲ್ಲೇ ಸಿದ್ದರಾಮಯ್ಯ ಸಂಪುಟ ಸರ್ಜರಿಯಾಗಿ, ಶಾಸಕ ಬೇಳೂರು ಗೋಪಾಲಕೃಷ್ಣ ಅವರಿಗೂ ಸಚಿವ ಸ್ಥಾನ ನೀಡೋ ಸಾಧ್ಯತೆ ಇದೆ ಎನ್ನಲಾಗುತ್ತಿದೆ.



ಉದಯವಾಹಿನಿ ಚಿತ್ರ

**ಕಾಂಗ್ರೆಸ್ ಉನ್ನತ ಮೂಲಗಳಿಂದ ಮಾಹಿತಿ**

ಈಗಾಗಲೇ ಸಚಿವ ಸ್ಥಾನದ ಆಕಾಂಕ್ಷಿಗಳಿಂದ ತೆರೆ ಮರೆಯಲ್ಲಿ ಕಸರತ್ತು ನಡೆಸಲಾಗುತ್ತಿದೆ. ಕಾಂಗ್ರೆಸ್ ಹೈಕಮಾಂಡ್ ಭೇಟಿ ಮಾಡಿ, ಸಿಎಂ ಸಿದ್ದರಾಮಯ್ಯ ಸಂಪುಟ ಪುನರಚನೆಯ ನಂತ್ರ, ತಮಗೆ ಸ್ಥಾನ ನೀಡುವಂತೆಯೂ ಬೇಡಿಕೆ ಇಟ್ಟಿದ್ದಾರೆ ಎನ್ನಲಾಗುತ್ತಿದೆ. ಹೀಗಾಗಿ ಸದ್ಯ ರಾಜ್ಯ ಸಚಿವ ಸಂಪುಟ ಸರ್ಜರಿಯ ಮಾತು ಜೋರಾಗಿಯೇ ಕೇಳಿ ಬಂದಿದೆ. ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ ಅವರು ಈ ಹಿಂದೆ ನಾನು ಸಚಿವ ಸ್ಥಾನಕ್ಕೆ ಒತ್ತಡ ಹಾಕಿಲ್ಲ. ಬೇಡಿಕೆಯನ್ನು ಇಟ್ಟಿಲ್ಲ ಎನ್ನುತ್ತಲೇ,

> ಸದ್ಯ ಸಚಿವ ಸ್ಥಾನದ ಆಕಾಂಕ್ಷಿಗಳು, ಒಂದು ವೇಳೆ ಸಂಪುಟ ಸರ್ಜರಿಯಾದ್ರೆ, ಯಾರಿಗೆಲ್ಲ ಸಚಿವ ಸ್ಥಾನ ಸಿಗಲಿದೆ ಎನ್ನುವ ಪಟ್ಟಿಯಲ್ಲಿ ಬೇಳೂರು ಗೋಪಾಲಕೃಷ್ಣ ಅವರ ಹೆಸರು ಮುಂಚೂಣಿಯಲ್ಲಿದೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ, ಕಾಂಗ್ರೆಸ್ ಹೈಕಮಾಂಡ್ ಕೃಪಾ ಕಟಾಕ್ಷ ಬೀರಿ, ಸಚಿವ ಸ್ಥಾನ ನೀಡುತ್ತಾರಾ ಎಂಬುದನ್ನು ಕಾದು ನೋಡಬೇಕಿದೆ.

ಸಚಿವ ಸ್ಥಾನ ನೀಡಿದ್ರೆ ಅದನ್ನು ಯಶಸ್ವಿಯಾಗಿ ನಿಭಾಯಿಸೋದಾಗಿಯೂ ಬಹಿರಂಗ ಹೇಳಿಕೆ ನೀಡಿದ್ದರು. ಈ ಹಿನ್ನಲೆಯಲ್ಲಿ ಸಚಿವ ಸ್ಥಾನದ ಆಕಾಂಕ್ಷಿಗಳ ರೇಸ್ ನಲ್ಲಿ ಶಾಸಕ ಬೇಳೂರು ಗೋಪಾಲಕೃಷ್ಣ ಕೂಡ ಇದ್ದು, ಅವರ ಹೆಸರು ಕೂಡ ಮುಂಚೂಣಿಯಲ್ಲಿ ಕೇಳಿ ಬರುತ್ತಿದೆ.

ಜೊತೆಗೆ ಸಂಪುಟ ಸರ್ಜರಿಯಲ್ಲಿ ಶಾಸಕ ಬೇಳೂರು ಗೋಪಾಲಕೃಷ್ಣ ಅವರಿಗೆ ಸಚಿವ ಸ್ಥಾನ ಫಿಕ್ಸ್ ಎಂಬುದು ಸಿದ್ದು ಸಂಪುಟದಲ್ಲಿನ ಹಲವರ ಮಾತಾಗಿದೆ.

## ಕೆಎಂಎಫ್‌ನಿಂದ 1 ಕೋ. ಲೀಟರ್ ಹಾಲು ಸಂಗ್ರಹ ದಾಖಲೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಕರ್ನಾಟಕ ಹಾಲು ಮಹಾಮಂಡಳವು ವಿಶ್ವ ಬ್ಯಾಂಕ್ ಯೋಜನೆ ಮೂಲಕ 1974 ರಲ್ಲಿ ಪ್ರಾರಂಭವಾಗಿದ್ದು, ಹಾಲು ಉತ್ಪಾದನೆಗಾಗಿ ಡೇರಿ ಅಭಿವೃದ್ಧಿ ಚಟುವಟಿಕೆಗಳನ್ನು ಅನುಷ್ಠಾನ ಗೊಳಿಸಿ ಕಾರ್ಯ ನಿರ್ವಹಿಸುತ್ತಿದೆ ಎಂದು ಮಹಾ ಮಂಡಳ ವ್ಯವಸ್ಥಾಪಕ ನಿರ್ದೇಶಕ ಎಂ.ಕೆ.ಜಗದೀಶ್ ತಿಳಿಸಿದ್ದಾರೆ.

ಕರ್ನಾಟಕ ಹಾಲು ಮಹಾಮಂಡಳವು ರಾಜ್ಯದ ಗ್ರಾಮೀಣ ಭಾಗದ ಹಾಲು ಉತ್ಪಾದಕರಿಗೆ ಪ್ರತಿಫಲದಾಯಕ ದರ, ನಿರಂತರ ಮಾರುಕಟ್ಟೆಯನ್ನು ನೀಡುವ ಹಾಗೂ ಗ್ರಾಹಕರಿಗೆ ವಿಶ್ವ ವ್ಯಾಪಾರ ಒಪ್ಪಂದದ ನಂತರ ಜಾಗತಿಕ ಮಾರುಕಟ್ಟೆ ಬೇಡಿಕೆಯನ್ವಯ ಸಕಾಲದಲ್ಲಿ ಶುದ್ಧ ಹಾಲು ಹಾಗೂ ಉತ್ಕೃಷ್ಟ ಹಾಲಿನ ಉತ್ಪನ್ನಗಳನ್ನು ಪೂರೈಸುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಿಕೊಂಡು ಬರುತ್ತಿದೆ.

ಪ್ರಸ್ತುತ ಕರ್ನಾಟಕ ಹಾಲು ಮಹಾಮಂಡಳ ವ್ಯಾಪ್ತಿಯಲ್ಲಿನ 16 ಜಿಲ್ಲಾ ಹಾಲು ಒಕ್ಕೂಟಗಳಲ್ಲಿ 24,356 ಗ್ರಾಮಗಳನ್ನೊಳಗೊಂಡಂತೆ 15,840 ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳು ಕಾರ್ಯ ನಿರ್ವಹಿಸುತ್ತಿದ್ದು ರಾಜ್ಯದಲ್ಲಿ 26.89 ಲಕ್ಷ ಗ್ರಾಮೀಣ ರೈತರು ಈ ಹಾಲು ಉತ್ಪಾದಕರ ಸಹಕಾರ



ಉದಯವಾಹಿನಿ ಚಿತ್ರ

> 4,644 ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳು ನೋಂದಣಿಯಾಗಿದ್ದು, 90 ಲಕ್ಷ ಉತ್ಪಾದಕರಿಂದ ದಿನವಹಿ 90 ಲಕ್ಷ ಲೀಟರ್ ಹಾಲನ್ನು ಸಂಗ್ರಹಿಸಿ ಪ್ರತಿ ದಿನ 29 ಕೋಟಿ ರೂ.ಗಳ ಮೊತ್ತವನ್ನು ಉತ್ಪಾದಕರಿಗೆ ಬಟವಾಡೆ ಮೂಲಕ ಬ್ಯಾಂಕ್ ಮುಖಾಂತರ ನೇರವಾಗಿ ಪಾವತಿಸಲಾಗುತ್ತಿದ್ದು ಕಹಾಮ ವ್ಯಾಪ್ತಿಯಲ್ಲಿ 150ಕ್ಕೂ ಹೆಚ್ಚಿನ ಹಾಲು ಮತ್ತು ಹಾಲಿನ ಉತ್ಪನ್ನಗಳು ಮತ್ತು 50 ಲಕ್ಷ ಲೀ. ಸಂಸ್ಕರಿಸಿದ ಹಾಲನ್ನು ಬೇಡಿಕೆ ಅನುಸಾರ ರಾಜ್ಯ, ಹೊರರಾಜ್ಯ ಹಾಗೂ ವಿದೇಶಗಳಲ್ಲಿ ಮಾರಾಟ ಮಾಡಲಾಗುತ್ತಿದೆ.

ಸಂಘಗಳಲ್ಲಿ ನೋಂದಾಯಿತ ಸದಸ್ಯರಿದ್ದು, ಇದರಲ್ಲಿ 10.17 ಲಕ್ಷ ಮಹಿಳಾ ಸದಸ್ಯರುಗಳಿರುತ್ತಾರೆ.

## ಬಿಎಂಸಿಆರ್‌ಐ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಎಸಿ ದುರಸ್ತಿ ; ಶಸ್ತ್ರಚಿಕಿತ್ಸೆಗಳು ಮುಂದೂಡಿಕೆ

• **ಉದಯವಾಹಿನಿ, ಬೆಂಗಳೂರು**

ವೈದ್ಯಕೀಯ ಮಹಾವಿದ್ಯಾಲಯ, ಸಂಶೋಧನಾ ಸಂಸ್ಥೆ (ಬಿಎಂಸಿಆರ್‌ಐ) ಅಡಿಯಲ್ಲಿನ ಪ್ರಧಾನಮಂತ್ರಿ ಸ್ವಾಸ್ಥ್ಯ ಸುರಕ್ಷಾ ಯೋಜನೆ (ಪಿಎಂಎಸ್‌ಎಸ್‌ವೈ) ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಕೇಂದ್ರೀಕೃತ ಹವಾನಿಯಂತ್ರಿತ (ಎಸಿ) ವ್ಯವಸ್ಥೆಯಲ್ಲಿ ಸಮಸ್ಯೆಯುಂಟಾದ ಪರಿಣಾಮ ಆರೋಗ್ಯ ಸೇವೆಯಲ್ಲಿ ತೀವ ವ್ಯತ್ಯಯವಾಗಿದೆ. ಡ. ವಿದೇಶ ಕ್ರೀಡೆ ತುರ್ತು ಪ್ರಕರಣ ಹೊರತುಪಡಿಸಿ ಇತರೆ ಎಲ್ಲಾ ಶಸ್ತ್ರಚಿಕಿತ್ಸೆಗಳನ್ನು ಮುಂದೂಡಲಾಗಿದೆ.

4-5 ದಿನಗಳಿಂದ ವಿದ್ಯುತ್ ಏರಿಳಿತವಾಗಿದ್ದು, ಇದರ ಪರಿಣಾಮ ಹವಾನಿಯಂತ್ರಣ ವ್ಯವಸ್ಥೆಯ ಮೇಲೆ ಪರಿಣಾಮ ಬೀರಿದೆ. ಹೀಗಾಗಿ ಸಮಸ್ಯೆ ಉದ್ಭವಿಸಿದೆ ಎಂದು ಆಸ್ಪತ್ರೆ ಅಧಿಕಾರಿಗಳು ತಿಳಿಸಿದ್ದಾರೆ. 1. ರಾಜಕೀಯ ಅ ಆರೋಗ್ಯ ಃ ಒಅಖಖ ಬೆಂಗಳೂರಿನಲ್ಲಿ ಐದು ಆಸ್ಪತ್ರೆಗಳನ್ನು (ವಿಕ್ಟೋರಿಯಾ ಆಸ್ಪತ್ರೆ (1000 ಹಾಸಿಗೆಗಳು), ವಾಣಿ ವಿಲಾಸ್ ಆಸ್ಪತ್ರೆ (500 ಹಾಸಿಗೆಗಳು), ಮಿಂಟೋ ಆಸ್ಪತ್ರೆ (300 ಹಾಸಿಗೆಗಳು), ಪಿಎಂಎಸ್‌ಎಸ್‌ವೈ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ (200 ಹಾಸಿಗೆಗಳು), ಟ್ರಾಮಾ ಮತ್ತು ಎಮರ್ಜೆನ್ಸಿ ಕೇರ್ ಸೆಂಟರ್ (200 ಹಾಸಿಗೆಗಳು)) ನಿರ್ವಹಿಸುತ್ತಿದ್ದು, ಈ ಪೈಕಿ ಪಿಎಂಎಸ್‌ಎಸ್‌ವೈ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯು ಕೇಂದ್ರೀಯ ಹವಾನಿಯಂತ್ರಿತ



ಉದಯವಾಹಿನಿ ಚಿತ್ರ

> ಭವಿಷ್ಯದಲ್ಲಿ ಈ ರೀತಿಯ ಸಮಸ್ಯೆಗಳು ಉದ್ಭವಿದಂತೆ ಮಾಡಲು ಹಲವು ಕ್ರಮಗಳನ್ನೂ ಕೂಡ ಕೈಗೊಳ್ಳಲಾಗುತ್ತಿದೆ. ಪಿಎಂಎಸ್‌ಎಸ್‌ವೈ ಆಸ್ಪತ್ರೆ ಹೊರತುಪಡಿಸಿದರೆ ಇತರೆ ಆಸ್ಪತ್ರೆಗಳಲ್ಲಿ ಯಾವುದೇ ಸಮಸ್ಯೆಗಳಾಗಿಲ್ಲ ಎಂದು ಹೇಳಿದ್ದಾರೆ.

ವ್ಯವಸ್ಥೆಯನ್ನು ಹೊಂದಿರುವ ಏಕೈಕ ಆಸ್ಪತ್ರೆಯಾಗಿದೆ. ಆಸ್ಪತ್ರೆಯ ವಿಶೇಷ ಅಧಿಕಾರಿ ಡಾ.ದಿವ್ಯಪ್ರಕಾಶ್ ಮಾತನಾಡಿ, ತಾಂತ್ರಿಕ ವೈಫಲ್ಯವು ಆಸ್ಪತ್ರೆಯ ಹವಾನಿಯಂತ್ರಣ ವ್ಯವಸ್ಥೆಯ ಮೇಲೆ ಪರಿಣಾಮ ಬೀರಿದೆ, ಇದರಿಂದ ನಿಗದಿತ ಶಸ್ತ್ರಚಿಕಿತ್ಸೆ ಗಳು ತಡವಾಗಿವೆ. ಎಂದು ಹೇಳಿದ್ದಾರೆ. ಆಸ್ಪತ್ರೆಯ ತಾಂತ್ರಿಕ ತಂಡವು ಸಮಸ್ಯೆಯನ್ನು ಪರಿಹರಿಸಲು ಕಾರ್ಯನಿರ್ವಹಿಸುತ್ತಿದ್ದು, ಶೀಘ್ರದಲ್ಲೇ ಹವಾನಿಯಂತ್ರಣ ವ್ಯವಸ್ಥೆಯನ್ನು ಸಂಪೂರ್ಣವಾಗಿ ಪುನಃ ಸ್ಥಾಪಸಲಿದ್ದಾರೆ. ಒಮ್ಮೆ ವ್ಯವಸ್ಥೆಯು ಕಾರ್ಯಾರಂಭಿಸಿದ ನಂತರ ಎಲ್ಲಾ ಶಸ್ತ್ರಚಿಕಿತ್ಸೆಗಳು ನಿಗದಿತ ಸಮಯಕ್ಕೆ ಮುಂದುವರಿಯುತ್ತದೆ ಎಂದು ತಿಳಿಸಿದ್ದಾರೆ.

## ಬೆಳವಣಿಗೆ ಒತ್ತಡ ಹೀಗಿದೆ ನೋಡಿ ಅಂದು ಸಚಿವ ಎಂಬಿ ಪಾಟೀಲ್

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದ ರಾಜಧಾನಿ ಬೆಂಗಳೂರಿನ ಸಂಚಾರ ದಟ್ಟಣೆ ಬಗ್ಗೆ ಪತ್ರಕರ್ತರು ಪ್ರಶ್ನೆ ಕೇಳಿದಾಗ, ಬೆಂಗಳೂರಿಗೆ 100 ಜನ ಬಂದ್ರೆ, 5ಜನ ಮಾತ್ರ ವಾಪಸ್ ಹೋಗ್ತಾರೆ ಎಂದು ಕೈಗಾರಿಕಾ ಸಚಿವ ಎಂಬಿ ಪಾಟೀಲ್ ಬೆಂಗಳೂರಿನ ಮೇಲೆ ಇರುವ ಬೆಳವಣಿಗೆಯ ಒತ್ತಡವನ್ನು ವಿವರಿಸಿದರು. ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಮತ್ತು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಅವರು ನವೆಂಬರ್ 22 ರಂದು ನಡೆದ ಸಮಾವೇಶವನ್ನು ಉದ್ದೇಶಿಸಿ ಮಾತನಾಡುತ್ತಿದ್ದಾಗ ಬೆಂಗಳೂರು ತನ್ನ ಮೂಲಸೌಕರ್ಯಗಳ ಮೇಲೆ ಕ್ಷಿಪ್ರ ಬೆಳವಣಿಗೆಯ ಸ್ಥಳಗಳ ಅಪಾರ ಒತ್ತಡದ ಕಡೆಗೆ ಹೆಚ್ಚು ಗಮನ



ಸೆಳೆಯುವಂತೆ ಮಾತನಾಡಿದರು ಎಂದು ಮನಿ ಕಂಟ್ರೋಲ್ ವರದಿ ಮಾಡಿದೆ. ಸಂಚಾರ ದಟ್ಟಣೆ ಮತ್ತು ಮಳೆ- ಪ್ರೇರಿತ ಅಡಚಣೆಗಳು ಸೇರಿದಂತೆ ಬೆಂಗಳೂರಿನ ಮೂಲಸೌಕರ್ಯ ಸವಾಲುಗಳು ಆಗಾಗ್ಗೆ ಗಮನಸೆಳೆಯುತ್ತವೆ.

ಆದರೆ, ನಗರದಲ್ಲಿ ಅವೆಲ್ಲವೂ ಕ್ರಮೇಣ ಸುಧಾರಣೆಯಾಗುತ್ತ ಸಾಗುತ್ತದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

ಬೆಂಗಳೂರಿಗರ ತವರು ಮಾತ್ರವಲ್ಲ. ಇದು ಉತ್ತರ ಪ್ರದೇಶ, ಉತ್ತರ ಭಾರತ, ತಮಿಳುನಾಡು, ಆಂಧ್ರ ಪ್ರದೇಶ, ತೆಲಂಗಾಣ ಮತ್ತು ಅದರಾಚೆಗಿನ ವ್ಯಕ್ತಿಗಳನ್ನು ಆಕರ್ಷಿಸುತ್ತದೆ. ಅನೇಕ ಯುವಕರು ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಇಲ್ಲಿಗೆ ಬರುತ್ತಾರೆ. ನಾವು ವಲಸಿಗರಲ್ಲಿ ಹೆಚ್ಚಳವನ್ನು ಸಹ ನೋಡುತ್ತಿದ್ದೇವೆ. ಇದು ಕಡಿಮೆ ರಿವರ್ಸ್ ವಲಸೆಗೆ ಕಾರಣವಾಗಿದೆ, ಇದು ನಮ್ಮ ಮೂಲಸೌಕರ್ಯಗಳ ಮೇಲೆ ಒತ್ತಡವನ್ನು ಹೆಚ್ಚಿಸುತ್ತದೆಎಂದು ಸಚಿವ ಎಂಬಿ ಪಾಟೀಲ್ ವಿವರಿಸಿದ್ದಾಗಿ ಮನಿಕಂಟ್ರೋಲ್ ವರದಿ ಮಾಡಿದ್ದಾರೆ.

## ನಗ್ನ ಚಿತ್ರ ವೈರಲ್ ಮಾಡುವುದಾಗಿ ಬ್ಲಾಕ್ ಮೇಲ್

• **ಉದಯವಾಹಿನಿ, ಬೆಂಗಳೂರು**

ಆಪ್ ಮೂಲಕ ಸಾಲ ಪಡೆದುಕೊಂಡಿದ್ದ ಕ್ಯಾಮರಾಮೆನ್ ಓರ್ವರಿಗೆ ನಗ್ನ ಚಿತ್ರ ವೈರಲ್ ಮಾಡುವುದಾಗಿ ಬ್ಲಾಕ್ ಮೇಲ್ ಮಾಡಿದ್ದಕ್ಕೆ ಮನನೊಂದು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಬೆಂಗಳೂರು ಉತ್ತರ ತಾಲ್ಲೂಕಿನ ಗೊಲ್ಲರಹಟ್ಟಿಯಲ್ಲಿ ನಡೆದಿದೆ.

ಕಿರಣ್ (32) ಆತ್ಮಹತ್ಯೆಗೆ ಶರಣಾಗಿರುವ

**ಖಾಸಗಿ ಚಾನೆಲ್ ಕ್ಯಾಮರಾ'ಮೆನ್ ಆತ್ಮಹತ್ಯೆ**

ಕ್ಯಾಮರಾಮನ್, ಖಾಸಗಿ ಚಾನಲ್ ವೊಂದರಲ್ಲಿ ಕ್ಯಾಮರಾಮನ್ ಆಗಿ ಕೆಲಸ ಮಾಡುತ್ತಿದ್ದ ಕಿರಣ್ ಆಪ್ ವೊಂದರ ಮೂಲಕ 2 ಲಕ್ಷ ರೂಪಾಯಿ ಸಾಲ ಪಡೆದುಕೊಂಡಿದ್ದರು. ಸಾಲದ ಹಣ ವಾಪಾಸ್ ನೀಡದಿದ್ದರೆ ನಗ್ನ ಚಿತ್ರ ವೈರಲ್ ಮಾಡುವುದಾಗಿ ಕಿಡಿಗೇಡಿಗಳು ಬೆದರಿಕೆ ಹಾಕಿದ್ದರು. ಫೋಟೋ ಎಡಿಟ್ ಮಾಡಿ ನಗ್ನ ಚಿತ್ರ ವೈರಲ್ ಮಾಡುವುದಾಗಿ ಬ್ಲಾಕ್ ಮೇಲ್ ಮಾಡುತ್ತಿದ್ದರು. ಕಿರುಕುಳಕ್ಕೆ ಮನನೊಂದ ಕಿರಣ್ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ತಿಳಿದುಬಂದಿದೆ.

# ನೌಕರರ 2018ರ ವೇತನ ಶ್ರೇಣಿ ತುಟ್ಟಿಭತ್ಯೆ ದರ ಪರಿಷ್ಕರಣೆ


### ರಾಜ್ಯಪಾಲರ ಆದೇಶಾನುಸಾರ, ಅವರ ಹೆಸರಿನಲ್ಲಿ ಉಮಾ .ಕೆ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು-2) ಆದೇಶ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಸರ್ಕಾರ ಸರ್ಕಾರಿ ನೌಕರರಿಗೆ ಗುಡ್‌ನ್ಯೂಸ್ ನೀಡಿದೆ. ರಾಜ್ಯ ಸರ್ಕಾರಿ ನೌಕರರಿಗೆ 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ತುಟ್ಟಿ ಭತ್ಯೆಯ ದರಗಳನ್ನು ಪರಿಷ್ಕರಣೆ ಮಾಡಿ ಆದೇಶವನ್ನು ಹೊರಡಿಸಿದೆ. ತುಟ್ಟಿ ಭತ್ಯೆಯ ಪರಿಷ್ಕರಣೆಯ ಆರ್ಥಿಕ ಲಾಭವು 2024ರ ಜುಲೈ ಮಾಹೆಗೆ ಮಾತ್ರ ಸೀಮಿತವಾಗಿರತಕ್ಕದ್ದು ಎಂದು ಆದೇಶದಲ್ಲಿ ತಿಳಿಸಿದೆ.

ಈ ಕುರಿತು ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ ಉಮಾ .ಕೆ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ ಸೇವೆಗಳು-2 ಆದೇಶವನ್ನು ಹೊರಡಿಸಿದ್ದಾರೆ.

ಈ ಆದೇಶ ರಾಜ್ಯ ಸರ್ಕಾರಿ ನೌಕರರಿಗೆ 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ತುಟ್ಟಿ ಭತ್ಯೆಯ ದರಗಳನ್ನು ಪರಿಷ್ಕರಿಸುವ ಬಗ್ಗೆ ಎಂಬ ವಿಷಯವನ್ನು ಒಳಗೊಂಡಿದೆ. ರಾಜ್ಯ ಸರ್ಕಾರದ ನೀತಿಯಂತೆ ದಿನಾಂಕ 23.08.2024ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ 2024ರ ಪರಿಷ್ಕೃತ ವೇತನ ಶ್ರೇಣಿಗಳ ಸೌಲಭ್ಯಗಳನ್ನು ದಿನಾಂಕ 01.08.2024 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಮುಂದುವರೆದು, ಸದರಿ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರು ಮತ್ತು



ಉದಯವಾಹಿನಿ ಚಿತ್ರ

**ವೇತನ ಶ್ರೇಣಿಗಳ ಸೌಲಭ್ಯ**

ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರಿಗೆ 2024ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ತುಟ್ಟಿ ಭತ್ಯೆ ಮಂಜೂರಾತಿಯನ್ನು ಕ್ರಮಬದ್ಧಗೊಳಿಸಲು ಅವಕಾಶಗಳನ್ನು ಕಲ್ಪಿಸಲಾಗಿರುತ್ತದೆ ಎಂದು ಹೇಳಿದೆ.

**ಸರ್ಕಾರದ ಆದೇಶ:** ಭಾರತ ಸರ್ಕಾರದ ಆದೇಶವನ್ನು ರಾಜ್ಯ ಸರ್ಕಾರವು ಪರಿಗಣಿಸಿರುತ್ತದೆ, 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳ ಬೆಳಕಿನಲ್ಲಿ ಈ ಕೆಳಕಂಡ ಆದೇಶಗಳನ್ನು ಹೊರಡಿಸಿದೆ. 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ಪಡೆಯುತ್ತಿದ್ದ ರಾಜ್ಯ

> ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು/ ಕುಟುಂಬ ನಿವೃತ್ತಿ ವೇತನದಾರರಿಗೂ ಸಹ ತುಟ್ಟಿಭತ್ಯೆಯ ದರಗಳನ್ನು ಪ್ರಸಕ್ತ 2018ರ ಪರಿಷ್ಕೃತ ವೇತನ ಶ್ರೇಣಿಗಳ 2024 ಜುಲೈ ಮಾಹೆಯ ಮೂಲ ನಿವೃತ್ತಿ ವೇತನ/ ಕುಟುಂಬ ನಿವೃತ್ತಿ ವೇತನದ ಶೇ 42.50 ರಿಂದ ಶೇಕಡ 45.25 ಕ್ಕೆ ಹೆಚ್ಚಿಸಿ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ. ತುಟ್ಟಿ ಭತ್ಯೆಯ ಪರಿಷ್ಕರಣೆಯ ಆರ್ಥಿಕ ಲಾಭವು 2024ರ ಜುಲೈ ಮಾಹೆಗೆ ಮಾತ್ರ ಸೀಮಿತವಾಗಿರತಕ್ಕದು.

ಸರ್ಕಾರಿ ನೌಕರರುಗಳಿಗೆ ಜುಲೈ 2024ರ ಮಾಹೆಗೆ ಅನ್ವಯವಾಗುವಂತೆ ತುಟ್ಟಿ ಭತ್ಯೆಯ ದರಗಳನ್ನು ಜುಲೈ ಮಾಹೆಯ ಮೂಲ ವೇತನದ ಶೇ 42.50 ರಿಂದ ಶೇ 45.25ಕ್ಕೆ ಪರಿಷ್ಕರಿಸಿ ಹೆಚ್ಚಳ ಮಾಡಲು ಸರ್ಕಾರವು ಹರ್ಷಿಸುತ್ತದೆ. ತುಟ್ಟಿ ಭತ್ಯೆಯ

> ಆದೇಶದಲ್ಲಿ ತುಟ್ಟಿಭತ್ಯೆಯನ್ನು ಸಂಭಾವನೆ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

ಪರಿಷ್ಕರಣೆಯ ಆರ್ಥಿಕ ಲಾಭವು 2024ರ ಜುಲೈ ಮಾಹೆಗೆ ಮಾತ್ರ ಸೀಮಿತವಾಗಿರತಕ್ಕದ್ದು ಎಂದು ಹೇಳಿದೆ.

ತುಟ್ಟಿಭತ್ಯೆಯ ಉದ್ದೇಶಕ್ಕಾಗಿ 'ಮೂಲ ವೇತನ ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ವೇತನ ಮತ್ತು ಅದರಲ್ಲಿ ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಸ್ಥಗಿತ ವೇತನ ಬಡ್ತಿಯನ್ನು ನೀಡಲಾಗಿದ್ದರೆ, ಆ ಸ್ಥಗಿತ ವೇತನ ಬಡ್ತಿ. 2018ರ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳ ನಿಯಮ 3(ಸಿ) ಯನ್ನು ಓದಿಕೊಂಡು 7ನೇ ನಿಯಮದ (3)ನೇ ಉಪನಿಯಮದ ಮೇರೆಗೆ ಅವನಿಗೆ ನೀಡಲಾದ ವೈಯಕ್ತಿಕ ವೇತನ ಯಾವುದಾದರೂ ಇದ್ದರೆ, ಆ ವೈಯಕ್ತಿಕ ವೇತನ. ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಮಂಜೂರು ಮಾಡಲಾಗಿರುವ ಹೆಚ್ಚುವರಿ ವೇತನ ಬಡ್ತಿ ಯಾವುದಾದರೂ ಇದ್ದಲ್ಲಿ. ಅವುಗಳು ಸೇರುತ್ತವೆ. ಮೂಲ ವೇತನಕ್ಕೆ ಮೇಲೆ ಸೂಚಿಸಿರುವುದನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

# ಚರ್ಮಗಂಟು ರೋಗಕ್ಕೆ ಮತ್ತೆ ಮದ್ದು: ನ.25ರಿಂದ ಡಿ.4ರವರೆಗೆ ಈ ಲಸಿಕಾ ಆಂದೋಲನ

## ಸದ್ಯ ಚರ್ಮಗಂಟು ರೋಗ ಕಾಣಿಸಿ ಕೊಂಡಿಲ್ಲ, ಆದರೆ ಮುನ್ನೆಚ್ಚರಿಕೆ ಕ್ರಮವಾಗಿ ರಾಸುಗಳಿಗೆ ಲಸಿಕೆ ಹಾಕಲು ಇಲಾಖೆ ಮುಂದು

• **ಉದಯವಾಹಿನಿ ಚಿಕ್ಕಬಳ್ಳಾಪುರ**

ಚರ್ಮಗಂಟು 2022-23ನೇ ಸಾಲಿನಲ್ಲಿ ಪಶುಗಳನ್ನು ಕಾಡಿದ ಪ್ರಮುಖ ರೋಗ, ರಾಸುಗಳ ಮೇಲೆ ಬೊಬ್ಬೆಗಳ ರೀತಿಯ ಗಂಟುಗಳು ಮೂಡಿ ಅವುಗಳ ಪ್ರಾಣಕ್ಕೆ ಸಂಚಕಾರ ತರುತ್ತದೆ. ರಾಸುಗಳ ಪ್ರಾಣವನ್ನು ತೆಗೆದಿತ್ತು ರೋಗ ತೀವ್ರವಾಗಿದ್ದ ವೇಳೆ ಇಲಾಖೆಯು ಲಸಿಕೆಗಳನ್ನು ಹಾಕಿತ್ತು. ಆದರೆ ಬಹಳಷ್ಟು ರಾಸುಗಳು ರೋಗಕ್ಕೆ ತುತ್ತಾಗಿದ್ದವು.

**ರಾಸುಗಳ ಮೇಲೆ ಗಂಭೀರ ಪರಿಣಾಮ**

ಈಗ ಮತ್ತೆ ಈ ರೋಗಕ್ಕೆ ಮದ್ದು ಅರೆಯುವ ಕೆಲಸಕ್ಕೆ ಪಶುಸಂಗೋಪನಾ ಇಲಾಖೆ ಮುಂದಾಗಿದೆ. ಜಿಲ್ಲೆಯಲ್ಲಿ ಸದ್ಯ ಚರ್ಮಗಂಟು ರೋಗ ಕಾಣಿಸಿ ಕೊಂಡಿಲ್ಲ. ಆದರೆ ಮುನ್ನೆಚ್ಚರಿಕೆ ಕ್ರಮವಾಗಿ ರಾಸುಗಳಿಗೆ ಲಸಿಕೆ ಹಾಕಲು ಇಲಾಖೆ ಮುಂದಾಗಿದೆ. ನ.25ರಿಂದ ಡಿ.4ರವರೆಗೆ ಈ ಲಸಿಕಾ ಆಂದೋಲನ ಜಿಲ್ಲೆಯಲ್ಲಿ ಜರುಗುತ್ತಿದೆ.

ಚರ್ಮಗಂಟು ರೋಗಕ್ಕೆ ಜಿಲ್ಲೆಯಲ್ಲಿ 2022-23ನೇ ಸಾಲಿನಲ್ಲಿ 480 ರಾಸುಗಳು ಮೃತಪಟ್ಟಿದ್ದವು. ರೋಗ ತಡೆಗೆ ಕ್ರಮ ವಹಿಸಿದರೂ ನಿಯಂತ್ರಣ ಸಾಧ್ಯವಾಗಿರಲಿಲ್ಲ.

ಶ್ರೀ. ಶಿವಮೊಗ್ಗ 2022ರ ಅಕ್ಟೋಬರ್ ಮೊದಲ ವಾರದಲ್ಲಿ ಶಿಡ್ಲಘಟ್ಟ ತಾಲ್ಲೂಕಿನ ಬೋದಗೂರು ಗ್ರಾಮದಲ್ಲಿ ರೋಗಕ್ಕೆ ರಾಸು ಮೃತಪಟ್ಟಿತ್ತು. ಜಿಲ್ಲೆಯಲ್ಲಿ ಚರ್ಮಗಂಟು ರೋಗಕ್ಕೆ ಜಾನುವಾರು ಬಲಿಯಾದ ಮೊದಲ ಪ್ರಕರಣ ಇದು. ನಂತರ ಒಂದೇ ವಾರದ ಅಂತರದಲ್ಲಿ ಗೌರಿಬಿದನೂರು ತಾಲ್ಲೂಕಿನಲ್ಲಿ ಎರಡು ರಾಸುಗಳು ಮೃತಪಟ್ಟವು. ಹಂತ ಹಂತವಾಗಿ ಜಿಲ್ಲೆಯಲ್ಲಿ ರೋಗ ಮತ್ತು ರೋಗಪೀಡಿತ ಗ್ರಾಮಗಳ ಸಂಖ್ಯೆ ಏರುಗತಿಯಲ್ಲಿ ಸಾಗಿತ್ತು.

ಈ ರಾಷ್ಟ್ರೀಯ 6. ವಿದೇಶ 5. ಮನೋರಂಜನೆ ರೋಗವು ವ್ಯಾಪಕವಾಗಿ ಹರಡದಂತೆ ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ಜಿಲ್ಲೆಯಾದ್ಯಂತ ಜಾನುವಾರು ಸಂತೆ, ಸಾಗಾಣಿಕೆ ಮತ್ತು ಜಾನುವಾರು ಜಾತ್ರೆಗೆ ಜಿಲ್ಲಾಡಳಿತವು ನಿಷೇಧ ವಿಧಿಸಿತ್ತು. ಸರ್ಕಾರ


☛ ಉದಯವಾಹಿನಿ ಚಿತ್ರ

ಚರ್ಮಗಂಟು ರೋಗದಿಂದ ಮೃತಪಡುವ ರಾಸುಗಳ ಮಾಲೀಕರಿಗೆ ಪರಿಹಾರ ಧನ ಸಹ ನೀಡಿತು. ಮೃತ ಕರುವಿಗೆ 5 ಸಾವಿರ, ಎಮ್ಮೆ, ಹಸುಗೆ 20 ಸಾವಿರ ಮತ್ತು ಎತ್ತು ಮೃತಪಟ್ಟರೆ 30 ಸಾವಿರ ಪರಿಹಾರ ಧನ ನೀಡಿತು.

ಹಾಲು ನೀಡುತ್ತಿದ್ದ ರಾಸುಗಳ ಇಳುವರಿ ಕಡಿಮೆ ಆಯಿತು. ಉತ್ತಮವಾಗಿ ಹಾಲು ನೀಡುತ್ತಿದ್ದ ಬಹಳಷ್ಟು ರಾಸುಗಳು ಮೃತಪಟ್ಟವು. ಇದು ರೈತರಿಗೆ ದೊಡ್ಡಮಟ್ಟದಲ್ಲಿಯೇ ಪೆಟ್ಟು ನೀಡಿತು.

ಚರ್ಮಗಂಟು ರೋಗ ಗ್ರಾಮೀಣ ಭಾಗಗಳಲ್ಲಿ ಹೈನುಗಾರಿಕೆ ನಂಬಿದ್ದ ಬಹಳಷ್ಟು ಕುಟುಂಬಗಳ ಬದುಕಿನ ಮೇಲೆ ಬರೆ ಎಳೆಯಿತು.

ಈ ಎಲ್ಲಾ ದೃಷ್ಟಿಯಿಂದ ಈಗ ಜಿಲ್ಲೆಯಲ್ಲಿ ಪಶುಪಾಲನೆ ಇಲಾಖೆ ಚರ್ಮಗಂಟು ರೋಗ ತಡೆಗೆ ಲಸಿಕೆ ಹಾಕುವ ಅಭಿಯಾನದಲ್ಲಿ ಸಮರೋಪಾದಿಯಲ್ಲಿ ನಡೆಸುತ್ತಿದೆ. ಇಲಾಖೆ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ರಾಸುಗಳಿಗೆ ಲಸಿಕೆ ನೀಡುತ್ತಿದ್ದಾರೆ.

**ರಾಸುಗಳಿಗೆ ಲಸಿಕೆ ಹಾಕುವ ಗುರಿ**

**ಜಿಲ್ಲೆಯಲ್ಲಿ ಈ ಹಿಂದಿನ ವರ್ಷ ಎಮ್ಮೆಗಳನ್ನು ಹೊರತುಪಡಿಸಿ 1,63,616 ಜಾನುವಾರುಗಳಿಗೆ ಲಸಿಕೆ ಹಾಕುವ ಗುರಿಯನ್ನು ಹೊಂದಿತ್ತು. 1,58,141 ಜಾನುವಾರುಗಳಿಗೆ ಲಸಿಕೆ ಹಾಕಲಾಗಿತ್ತು ಶೇ 97ರಷ್ಟು ಗುರಿ ಸಾಧಿಸಲಾಗಿತ್ತು. ಈ ಬಾರಿಯೂ ಇದೇ ಪ್ರಮಾಣದಲ್ಲಿ ರಾಸುಗಳಿಗೆ ಲಸಿಕೆ ಹಾಕುವ ಗುರಿಯನ್ನು ಇಲಾಖೆ ಹೊಂದಿದೆ. ಚರ್ಮಗಂಟು ರೋಗ ತಡೆಗೆ ಮುನ್ನೆಚ್ಚರಿಕೆ ಕ್ರಮವಾಗಿ ಲಸಿಕೆ ಹಾಕಲು ಮುಂದಾಗಿದ್ದೇವೆ. ಚರ್ಮಗಂಟು ರೋಗವು ರಾಸುಗಳ ಮೇಲೆ ಗಂಭೀರ ಪರಿಣಾಮ ಬೀರುತ್ತದೆ ಎಂದು ಜಿಲ್ಲಾ ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಎಚ್.ಎನ್.ರಂಗಪ್ಪ ತಿಳಿಸಿದರು.**

**ರಾಸುಗಳಿಗೆ ಜ್ವರ ಮೈತುಂಬಾ ಬೊಬ್ಬೆಗಳು ಬರುತ್ತವೆ. ಕಾಲೂತ ಎದೆಯೂತ ಉಂಟಾಗುತ್ತದೆ. ಹಾಲಿನ ಉತ್ಪಾದನೆ ಸಹ ಕಡಿಮೆ ಆಗುತ್ತದೆ. ರೋಗವನ್ನು ತಡೆಗಟ್ಟುವ ಸಲುವಾಗಿ ಲಸಿಕೆ ಹಾಕಲಾಗುತ್ತಿದೆ. ಪಶು ಪರಿವೀಕ್ಷಕರು ಪಶು ಮೈತ್ರಿ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿ ನಾಲ್ಕು ತಿಂಗಳ ಮೇಲ್ಪಟ್ಟ ರಾಸುಗಳಿಗೆ ಲಸಿಕೆ ಹಾಕುತ್ತಿದ್ದಾರೆ ಎಂದು ತಿಳಿಸಿದರು.**


ಉದಯ UV ವಾಹಿನಿ

ಪ್ರಾದೇಶಿಕ

ಶುಕ್ರವಾರ
29 ನವೆಂಬರ್ 2024




# ಮಿನಿ ನ್ಯೂಸ್

## ಲಾರಿ ಹರಿದು ಬಾಲಕಿ ಸಾವು

• **ಉದಯವಾಹಿನಿ, ಗೋಣಿಕೊಪ್ಪಲು**

ಇಲ್ಲಿಗೆ ಸಮೀಪದ ತಿತಿಮತಿಯಲ್ಲಿ ಲಾರಿಯೊಂದು ಹರಿದು ಗಾನವಿ (6) ಎಂಬ ಬಾಲಕಿ ಮೃತಪಟ್ಟಿದ್ದಾಳೆ 'ಗೋಣಿಕೊಪ್ಪದಿಂದ ಮೈಸೂರಿಗೆ ಹೋಗುತ್ತಿದ್ದ ಲಾರಿ ಮಜ್ಜಿಗೆಹಳ್ಳದ ಬಾಲಕಿ ಗಾನವಿ ಮೇಲೆ ಹರಿದಿದೆ. ಇದರಿಂದ ತೀವ್ರವಾಗಿ ಗಾಯಗೊಂಡ ಬಾಲಕಿ ಸಾವನ್ನಪ್ಪಿದ್ದಾಳೆ ಜಿಲ್ಲೆ 23 ಚಾಲಕನ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ಆತನನ್ನು ವಶಕ್ಕೆ ಪಡದು ತನಿಖೆ ಕೈಗೊಳ್ಳಲಾಗಿದೆ' ಎಂದು ಪೊಲೀಸರು ತಿಳಿಸಿದ್ದಾರೆ. ಗೋಣಿಕೊಪ್ಪಲು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸುಂದರ್ ರಾಜ್, ಡಿವೈಎಸ್‌ಪಿ ಮೋಹನ್‌ಕುಮಾರ್, ಸಿಪಿಐ ಶಿವರಾಜ್ ಆರ್ ಮುಧೋಳ್ ಸ್ಥಳಕ್ಕೆ ಭೇಟಿ ನೀಡಿದ್ದರು. ಬೀದರ್ ಘಟನೆ ನಡೆದ ಸ್ಥಳದಲ್ಲಿ ಹಂಪ್ಸ್ ವೊಂದನ್ನು ಹಾಕಬೇಕು ಎಂದು ಚಾಮರಾಜ ನಗರ ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಟಾಯ್ಲೆಟ್ ಗುಂಡಿಯಲ್ಲಿ ನವಜಾತ ಶಿಶು ಎಸೆದು ಪರಾರಿ

• **ಉದಯವಾಹಿನಿ ರಾಮನಗರ**

ಅಮಾನವೀಯ ಘಟನೆಯೆಂಬಂತೆ ರಾಮನಗರದಲ್ಲಿ ಎರಡು ದಿನದ ಹಿಂದಷ್ಟೇ ಹುಟ್ಟಿದ ಮಗುವನ್ನು ಆಸ್ಪತ್ರೆ ಟಾಯ್ಲೆಟ್‌ನಲ್ಲಿ ಹಾಕಿ ಫ್ಲಶ್ ಮಾಡಿದ ಘಟನೆ ಬೆಳಕಿಗೆ ಬಂದಿದೆ. ರಾಮನಗರದ ದಯಾನಂದ್ ಸಾಗರ್ ಆಸ್ಪತ್ರೆಯಲ್ಲಿ ಈ ಹೇಯ ಕೃತ್ಯ ನಡೆದಿದ್ದು, ಟಾಯ್ಲೆಟ್ ಪರಿಶೀಲನೆ ವೇಳೆ ಶಿಶುವಿನ ಶವ ಪತ್ತೆಯಾಗಿದೆ. ಟಾಯ್ಲೆಟ್ ಗುಂಡಿಯಲ್ಲಿ ಮೃತದೇಹವಿರುವುದನ್ನು ಕಂಡು ಆಸ್ಪತ್ರೆ ಸಿಬ್ಬಂದಿ ಬೆಚ್ಚಿ ಬಿದ್ದು ವಿಷಯ ತಿಳಿಸಿದ್ದಾರೆ. ಶಿಶುವಿನ ತಾಯಿಯೇ ಈ ಕೃತ್ಯ ಎಸಗಿರುವ ಶಂಕೆ ವ್ಯಕ್ತವಾಗಿದೆ. ಟಾಯ್ಲೆಟ್ ಗುಂಡಿಯಲ್ಲಿ ಎರಡು ದಿನದ ನವಜಾತ ಗಂಡು ಶಿಶುವಿನ ಮೃತದೇಹ ಪತ್ತೆಯಾಗಿದ್ದು, ಹಾರೋಹಳ್ಳಿ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ. ಮಗುವಿನ ತಾಯಿ ಯಾರು, ಈ ಕೃತ್ಯ ಎಸಗಿದವರು ಯಾರು ಎಂಬುದನ್ನು ಪತ್ತೆ ಹಚ್ಚಲು ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಆಸ್ಪತ್ರೆಯಲ್ಲಿ ಈ ಘಟನೆ ನಡೆದಿರುವುದು ಹಲವು ಅನುಮಾನಗಳನ್ನು ಹುಟ್ಟುಹಾಕಿದೆ.

## ರಸ್ತೆ ಡಾಂಬರೀಕರಣಕ್ಕೆ ಚಾಲನೆ

• **ಉದಯವಾಹಿನಿ ಸಿದ್ಧಾಪುರ**

ಸಿದ್ದಾಪುರ- ವಿರಾಜಪೇಟೆ ರಸ್ತೆ ಡಾಂಬರೀಕರಣಕ್ಕೆ ಮುಖ್ಯಮಂತ್ರಿಯವರ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ರಸ್ತೆ ಹದಗೆಟ್ಟಿದೆ ಎಂದು ಆರೋಪಿಸಿ ಕೆಲವರು ಪ್ರತಿಭಟನೆ ನಡೆಸುತ್ತಿದ್ದಾರೆ. ಇಂತಹ ರಾಜಕೀಯ ಪ್ರೇರಿತ ಪ್ರತಿಭಟನೆಗೆ ಜನರು ಬಲಿಪಶುವಾಗಬಾರದು. ಮನೋರಂಜನೆ ಕಳೆದ 15 ವರ್ಷಗಳಿಂದ ಅನೇಕ ರಸ್ತೆಗಳು ಹದಗೆಟ್ಟಿವೆ. ಒಂದೂವರೆ ವರ್ಷದಲ್ಲಿ ಎಲ್ಲಾ ರಸ್ತೆಗಳ ಅಭಿವೃದ್ಧಿಯನ್ನು ನಿರೀಕ್ಷಿಸುವುದು ಸರಿಯಲ್ಲ. ಹಂತ ಹಂತವಾಗಿ ರಸ್ತೆಗಳ ಅಭಿವೃದ್ಧಿ ಮಾಡಲಾಗುವುದು' ಎಂದರು. ಬೆಂಗಳೂರು ಗ್ರಾಮಾಂತರ ರಾಜ್ಯ ಹೆದ್ದಾರಿ ಉನ್ನತೀಕರಣ ಯೋಜನೆಯಡಿ 13 ಕೋಟಿ ವೆಚ್ಚದಲ್ಲಿ ಸಿದ್ದಾಪುರ ಹಾಗೂ ಪೆರುಂಬಾಡಿ ವ್ಯಾಪ್ತಿಯಲ್ಲಿ ರಸ್ತೆ ವಿಸ್ತರಣೆ ಮತ್ತು ಡಾಂಬರೀಕರಣ ಕಾಮಗಾರಿ ಕೈಗೊಳ್ಳಲಾಗಿದೆ. ಮಳೆಯಿಂದಾಗಿ ಕಾಮಗಾರಿಗಳು ವಿಳಂಬವಾಗಿದ್ದು ಇದೀಗ ವಿವಿಧ ಭಾಗದಲ್ಲಿ ಕಾಮಗಾರಿ ಆರಂಭಗೊಳ್ಳುತ್ತಿದೆ. ಕಾಮಗಾರಿಯ ಗುಣಮಟ್ಟವನ್ನು ಬೀದರ್ ಚಾಮರಾಜ ನಗರ ಬ ಕಾಯ್ದುಕೊಳ್ಳುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ' ಎಂದು ತಿಳಿಸಿದರು. ಕ್ಷೇತ್ರದಲ್ಲಿ 8 ವಿದ್ಯುತ್ ಉಪಕೇಂದ್ರದ ಪೈಕಿ 6ರಲ್ಲಿ ಟೆಂಡರ್ ಆಗಿದೆ. ಮೂರು ಹೋಬಳಿಗಳಿಗೆ ವಸತಿ ನಿಲಯಗಳನ್ನು ನೀಡಲಾಗಿದೆ' ಎಂದು ಹೇಳಿದರು.

## ಅಂಬೇಡ್ಕರ್ ಕೊಡುಗೆ ಸ್ಮರಣೆ

• **ಉದಯವಾಹಿನಿ ರಾಮನಗರ**

ಪ್ರಜಾಪ್ರಭುತ್ವದ ಆತ್ಮವಾದ ಸಂವಿಧಾನವನ್ನು ದೇಶಕ್ಕೆ ಅರ್ಪಿಸಿಕೊಂಡ ನೆನಪಿನಾರ್ಥವಾಗಿ, ನಗರದ ವಿವಿಧೆಡೆ ಸಂವಿಧಾನ ದಿನಾಚರಣೆಯನ್ನು ಆಚರಿಸಲಾಯಿತು. ಶಾಲಾ-ಕಾಲೇಜು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಮನೋರಂಜನೆ ಅಂಬೇಡ್ಕರ್, ಮಹಾತ್ಮ ಗಾಂಧೀಜಿ ಸೇರಿದಂತೆ ಮಹನೀಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗಣ್ಯರು ಸಂವಿಧಾನ ರಚನೆ, ಅದರ ಹಿಂದಿರುವ ಮಹನೀಯರ ಶ್ರಮ, ಕಳೆದ 75 ವರ್ಷಗಳಿಂದ ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ದೇಶವನ್ನು ಮುನ್ನಡೆಸುವಲ್ಲಿ ರಾಷ್ಟ್ರೀಯ ಗ್ರಂಥವಾದ ಸಂವಿಧಾನ ವಹಿಸಿರುವ ಪಾತ್ರವನ್ನು ಮೆಲುಕು ಹಾಕಿದರು. ಜಾಥಾ, ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಸರ್ಕಾರಿ ಕಾನೂನು ಕಾಲೇಜು ಸಹಯೋಗದಲ್ಲಿ ಸಂವಿಧಾನ ದಿನಾಚರಣೆ ಅಂಗವಾಗಿ ನಗರದಲ್ಲಿ ಕಾನೂನು ಅರಿವು-ನೆರವು ಜಾಥಾ ಹಮ್ಮಿಕೊಳ್ಳಲಾಯಿತು. ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಜಾಥಾಗೆ ಚಾಲನೆ ನೀಡಿದರು.

## ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಕಾಮಗಾರಿ ವಿರೋಧಿಸಿ ಡಿ.7ಕ್ಕೆ ಪಾದಯಾತ್ರೆ

• **ಉದಯವಾಹಿನಿ ಗುಬ್ಬಿ**

ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಲ್ ಕಾಮಗಾರಿಯನ್ನು ಸರ್ಕಾರ ಪ್ರಾರಂಭಿಸುವ ಸೂಚನೆಯ ಹಿನ್ನೆಲೆಯಲ್ಲಿ ಲಿಂಕ್ ಕೆನಲ್ ವಿರೋಧಿ ಹೋರಾಟಗಾರರು ಪಟ್ಟಣದಲ್ಲಿ ಸಭೆ ಸೇರಿ ಮುಂದಿನ ಹೋರಾಟದ ಬಗ್ಗೆ ಸಭೆ ನಡೆಸಿದರು. ಎಕ್ಸ್‌ಪ್ರೆಸ್ ಲಿಂಕ್ ಕೆನಲ್ ನಿರ್ಮಾಣದಿಂದ ತಾಲ್ಲೂಕಿಗೆ ಅಪಾರ ನಷ್ಟವಾಗಲಿದೆ.

ಈಗ ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಭೀಕರ ಪರಿಸ್ಥಿತಿಯನ್ನು ಎದುರಿಸಬೇಕಾಗುತ್ತದೆ ಎಂದು ಹೋರಾಟಗಾರರು ತಿಳಿಸಿದರು. ಹೋರಾಟವನ್ನು ನಿರಂತರವಾಗಿ ಮಾಡುವ ಉದ್ದೇಶವನ್ನು ಸಮಿತಿ ಹೊಂದಿದ್ದು, ಜಿಲ್ಲಾಧಿಕಾರಿ ಕಚೇರಿ ಬಳಿ ನಿರಂತರ ಧರಣಿ ನಡೆಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.

ತಾಲ್ಲೂಕಿನ ಹಾಗೂ ಜಿಲ್ಲೆಯ ರೈತರ ಹಿತದೃಷ್ಟಿಯಿಂದ ನಾಲೆಯ ಬಳಿಯಿಂದ ಪಾದಯಾತ್ರೆ ಪ್ರಾರಂಭಿಸಿ ಡಿಸೆಂಬರ್ 8 ರಂದು ತುಮಕೂರು ಜಿಲ್ಲಾಧಿಕಾರಿ ಕಚೇರಿ ತಲುಪುವಂತೆ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲು ತೀರ್ಮಾನಿಸಲಾಯಿತು. ಎಕ್ಸ್‌ಪ್ರೆಸ್ ಲಿಂಕ್ ಕೆನಲ್ ನಿರ್ಮಾಣದಿಂದ ತಾಲ್ಲೂಕಿಗೆ ಅಪಾರ ನಷ್ಟವಾಗಲಿದೆ. ಈಗ ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಭೀಕರ ಪರಿಸ್ಥಿತಿಯನ್ನು ಎದುರಿಸಬೇಕಾಗುತ್ತದೆ ಎಂದು ಹೋರಾಟಗಾರರು ತಿಳಿಸಿದರು.

# ನನ್ನ ಹಾಗೂ ನನ್ನ ಮಗನ ವಿರುದ್ಧ ಒಂದೇ ಒಂದು ದೂರು ದಾಖಲಾಗಿಲ್ಲ


## ರೇವಣ್ಣಗೆ ಪರೋಕ್ಷ ತಿರುಗೇಟು ನೀಡಿದ ಶಾಸಕ ಜಿ.ಟಿ.ದೇವೇಗೌಡ

• **ಉದಯವಾಹಿನಿ ಮೈಸೂರು**

ನಾನು ಸಾಮಾನ್ಯವಾಗಿ ಮಾಧ್ಯಮಗಳಿಂದ ದೂರ ಇರುತ್ತೇನೆ. ನಾನು ಏನೂ ಮಾತನಾಡಬಾರದು ಎಂದು ಸಾಧ್ಯವಾದಷ್ಟು ಯತ್ನಿಸುತ್ತೇನೆ. ಆದರೂ ನನ್ನ ಬಗ್ಗೆ ಯಾಕೆ ಪದೇ ಪದೇ ಚರ್ಚೆಯಾಗುತ್ತದೆ ಎಂಬುದು ನನಗೆ ಗೊತ್ತಿಲ್ಲ. ನಾನು ಯಾವತ್ತು ಹೇಳುವುದು ಇಷ್ಟೇ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿ ಹಾಗೂ ಜನರ ಸಮಸ್ಯೆಗಳನ್ನು ಪರಿಹರಿಸುವುದಕ್ಕೆ ಶಕ್ತಿ ಮೀರಿ ಪ್ರಯತ್ನಿಸುತ್ತೇನೆ. ಅದನ್ನು ಬಿಟ್ಟರೆ ನನ್ನ ತಲೆಯಲ್ಲಿ ಬೇರೆ ಯಾವುದೇ ಯೋಚನೆ ಇಲ್ಲ ಎಂದು ಹೇಳಿದರು. ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಜಿ.ಟಿ.ದೇವೇಗೌಡ ನನ್ನ ಗಮನವೆಲ್ಲ. ನಾನು ಕ್ಷೇತ್ರಗಳಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳು ಸಿಎಂ ಸಿದ್ದರಾಮಯ್ಯನವರಿಂದಲೂ ಮೆಚ್ಚುಗೆಗೆ ಪಾತ್ರವಾಗಿವೆ ಎಂದರು.

ನಮ್ಮ ತಂದೆ ಪಟೇಲರು ಅವರ ಮೇಲೆ ಒಂದೇ ಒಂದು ಕೇಸ್ ಇರಲಿಲ್ಲ. ಪಟೇಲರಾಗಿದ್ದರೂ ಯಾವುದೇ ಪ್ರಕರಣ ಇರಲಿಲ್ಲ. ಹಾಗೇ ನಾನು ಚಿಕ್ಕವಯಸ್ಸಿನಿಂದಲೂ ಜವಾಬ್ದಾರಿಯಿಂದ ನಡೆದುಕೊಂಡು ಬಂದವನು. 54 ವರ್ಷಗಳಿಂದ ನಾನು ರಾಜಕೀಯದಲ್ಲಿದ್ದೇನೆ. ಈವರೆಗೆ ನನ್ನ ವಿರುದ್ಧ ಯಾವುದೇ ಕೇಸ್ ದಾಖಲಾಗಿಲ್ಲ. ನನ್ನ ಮಗ ಹರೀಶ್ ಗೌಡ ಮೇಲೂ ಒಂದೇ ಒಂದು ದೂರುಗಳಿಲ್ಲ. ಯಾವುದೇ ಕೇಸ್ ದಾಖಲಾಗಿಲ್ಲ. ನಮ್ಮ ಕುಟುಂಬ ಹೀಗೆ ಒಳ್ಳೆಯ ರೀತಿಯಿಂದ ನಡೆದುಕೊಂಡು ಬಂದಿದೆ ಎಂದು ಹೇಳಿದರು. ನಾನು ಶಾಸಕನಾಗಿದ್ದೇನೆ.

ಅಧಿಕಾರದಲ್ಲಿದ್ದೇನೆ ಎಂದು ಯಾವುದೇ ದಬ್ಬಾಳಿಕೆ ರಾಜಕೀಯ ಮಾಡುವುದು, ಅಧಿಕಾರಿಗಳನ್ನು ಬೆದರಿಸುವುದು, ಏಕವಚನದಲ್ಲಿ ಮಾತನಾಡಿಸುವುದು ಹೀಗೆ ಎಂದೂ ಮಾಡಿಲ್ಲ. ಮಾಡುವುದೂ ಇಲ್ಲ. ಆದಾಗ್ಯೂ ಅನಗತ್ಯ ಆರೋಪಗಳನ್ನು ಮಾಡುತ್ತ, ನನ್ನ ಬಗ್ಗೆ ಚರ್ಚೆಗಳಾಗುತ್ತಿರುವುದು ಯಾಕೆಂದು ತಿಳಿದಿಲ್ಲ ಎಂದು ಪರೋಕ್ಷವಾಗಿ ರೇವಣ್ಣ ಹೇಳಿಕೆಗೆ ಕಿಡಿಕಾರಿದರು.



**ಹಿಂಗಾರು ಹಂಗಾಮಿನಲ್ಲಿ ಮಳೆ ಕೊರತೆ**

**ನಾನು ಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಕಂಡು ಸ್ವತಃ ಸಿಎಂ ಸಿದ್ದರಾಮಯ್ಯನವರು ಹಲವು ಬಾರಿ ಜಿ.ಟಿ.ದೇವೇಗೌಡರಿಗೆ ಇಷ್ಟೊಂದು ಅಭಿವೃದ್ಧಿ ಕೆಲಸ ಮಾಡಲು ಹೇಗೆ ಸಾಧ್ಯ ಎಂದು ಅಚ್ಚರಿ ವ್ಯಕ್ತಪಡಿಸಿದ್ದಾರೆ. ನನಗೆ ನನ್ನ ಕ್ಷೇತ್ರದ ಅಭಿವೃದ್ಧಿ ಕೆಲಸ, ಜನರ ಸಮಸ್ಯೆಗಳಿಗೆ ಪರಿಹಾರ ನೀಡುವುದರ ಬಗ್ಗೆ ಮಾತ್ರ ಯೋಚನೆ ಹೊರತು ಬೇರೆ ಯಾವುದೇ ರಾಜಕೀಯ ಯೋಚನೆಗಳಿಲ್ಲ**
**-ಜಿ.ಟಿ.ದೇವೇಗೌಡ, ಶಾಸಕ**

# ಕೃಷಿ ತಂತ್ರಜ್ಞಾನ: ರೈತರಿಗೆ ವರದಾನ

• **ಉದಯವಾಹಿನಿ, ಮಂಡ್ಯ**

ಕೃಷಿ ತಂತ್ರಜ್ಞಾನ' ಎಂದು ಕರೆಯಲ್ಪಡುವ ಕೃಷಿ ಯಂತ್ರೋಪಕರಣಗಳು ಉತ್ಪಾದನೆಯನ್ನು ಸುಧಾರಿಸಲು ಅತ್ಯಗತ್ಯ ಸಾಧನವಾಗಿವೆ. ರೈತರಿಗೆ ಕಡಿಮೆ ಸಮಯದಲ್ಲಿ ಮತ್ತು ಹೆಚ್ಚಿನ ದಕ್ಷತೆಯೊಂದಿಗೆ ಹೆಚ್ಚು ಬೆಳೆಗಳನ್ನು ಬೆಳೆಯಲು ಸಹಾಯ ಮಾಡುತ್ತದೆ ಎಂಬುದನ್ನು ಪ್ರಾತ್ಯಕ್ಷಿಕೆ ಮೂಲಕ ಕೃಷಿ ವಿಜ್ಞಾನಿಗಳು ರೈತರಿಗೆ ಮನದಟ್ಟು ಮಾಡಿದರು.

ವಿ.ಸಿ.ಫಾರಂನಲ್ಲಿ ಎರಡು ದಿನ ಹಮ್ಮಿಕೊಂಡಿದ್ದ ಕೃಷಿ ಮೇಳದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಅನಾವರಣ ಮಾಡಲಾಗಿತ್ತು. ಯಂತ್ರಗಳ ದರ, ಬಳಕೆ ಮತ್ತು ಉಪಯೋಗವನ್ನು ಕೃಷಿ ವಿದ್ಯಾರ್ಥಿಗಳು ರೈತರಿಗೆ ಬೆಳಿಗ್ಗೆಯಿಂದ ಸಂಜೆಯವರೆಗೆ ವಿವರಿಸುವ ಮೂಲಕ ಉಪಯುಕ್ತ ಮಾಹಿತಿ ನೀಡಿದರು. ಕೃಷಿ ತಂತ್ರಜ್ಞಾನವನ್ನು ಸಮರ್ಪಕವಾಗಿ ಅಳವಡಿಸಿಕೊಂಡರೆ ರೈತರಿಗೆ ವರದಾನ ಎಂಬುದನ್ನು ಸಾದರಪಡಿಸಿದರು.

ಭತ್ತದ ಸಸಿ ನಾಟಿ ಯಂತ್ರದ ಮೂಲಕ ಏಕಕಾಲದಲ್ಲಿ 4-6 ಸಾಲುಗಳಲ್ಲಿ ಒಂದು ದಿನಕ್ಕೆ 5-6 ಎಕರೆ ನಾಟಿ ಮಾಡಬಹುದು. ಒಂದು ಎಕರೆಗೆ 16-20 ಕೆ.ಜಿ. ಬಿತ್ತನೆ ಬೀಜ ಅವಶ್ಯವಿದೆ. ಸಾಂಪ್ರದಾಯಿಕ ಭತ್ತ ನಾಟಿ ಪದ್ಧತಿಗೆ ಹೋಲಿಸಿದಲ್ಲಿ ಕೃಷಿ ಕಾರ್ಮಿಕರ ಅವಲಂಬನೆಯನ್ನು ಮತ್ತು ಉತ್ಪಾದನಾ ವೆಚ್ಚವನ್ನು ಕಡಿಮೆಗೊಳಿಸಿ, ಹೆಚ್ಚಿನ ಇಳುವರಿಯನ್ನು ಪಡೆಯಬಹುದು ಎಂದು ವಿ.ಸಿ.ಫಾರಂನ ಕೃಷಿ ವಿದ್ಯಾರ್ಥಿಗಳು ಮಾಹಿತಿ ನೀಡಿದರು.

**ದಿನದಲ್ಲಿ 4-5 ಎಕರೆ ಬಿತ್ತನೆ**

**ಈ ಕೂರಿಗೆಯ ನೆರವಿನಿಂದ ತೃಣಧಾನ್ಯ, ಏಕದಳ, ದ್ವಿದಳ ಧಾನ್ಯಗಳು ಹಾಗೂ ಎಣ್ಣೆಕಾಳು ಬೀಜಗಳನ್ನು ಸಕಾಲದಲ್ಲಿ ಬಿತ್ತನೆ ಮಾಡಬಹುದು. ಈ ಕೂರಿಗೆಯು ಏಕಕಾಲದಲ್ಲಿ 7-9 ಸಾಲುಗಳನ್ನು ತೆಗೆದು, ರಸಗೊಬ್ಬರ ಹಾಕಿ, ಬೀಜ ಬಿತ್ತಿ, ಮಣ್ಣನ್ನು ಮುಚ್ಚುತ್ತದೆ. ಒಬ್ಬ ಚಾಲಕ ಮತ್ತು ಒಬ್ಬ ಸಹಾಯಕ ಸೇರಿ ಒಂದು ದಿನದಲ್ಲಿ 4-5 ಎಕರೆ ಬಿತ್ತನೆ ಮಾಡಬಹುದು. ಇದನ್ನು ಚಾಲನೆ ಮಾಡಲು 40 ಎಚ್‌ಪಿ ಟ್ರ್ಯಾಕ್ಟರ್‌ಗೆ ಪ್ರತಿ ಗಂಟೆಗೆ 2 ಲೀಟರ್ ಇಂಧನ ಅವಶ್ಯ ಎಂಬುದನ್ನು ಪ್ರಾತ್ಯಕ್ಷಿಕೆ ಮೂಲಕ ತೋರಿಸಲಾಯಿತು.**

# ಶಾಸಕ ಯತ್ನಾಳ್ ಹೇಳಿಕೆಗೆ ಕಡಿವಾಣ ಹಾಕಿ


## ರಕ್ತದಲ್ಲಿ ಸಹಿ ಮಾಡಿ ಜೆಪಿ ನಡ್ಡಾಗೆ ಪತ್ರದ ಮೂಲಕ ಮನವಿ

• **ಉದಯವಾಹಿನಿ ಮಂಡ್ಯ**

ವಕ್ಫ್ ವಿರುದ್ಧ ಬಿಜೆಪಿಯ ಇನ್ನೊಂದು ತಂಡವು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಮಾಡುತ್ತಿದೆ. ಈ ಒಂದು ಪ್ರತಿಭಟನೆ ನೇತೃತ್ವವನ್ನು ಶಾಸಕ ಬಸನಗೌಡ ಪಾಟೀಲ ವಹಿಸಿದ್ದು, ಈ ತಂಡದಲ್ಲಿ ಶಾಸಕರಾದ ರಮೇಶ್ ಜಾರಕಿಹೊಳಿ, ಅರವಿಂದ ಲಿಂಬಾವಳಿ, ಸೇರಿದಂತೆ ಬಿಜೆಪಿಯ ಅಸಮಾಧಾನದ ಹಲವು ಭಾಗಿಯಾಗಿದ್ದಾರೆ. ಪ್ರತಿಭಟನೆಯ ವೇಳೆ ಯತ್ನಾಳ್ ಅವರು ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಹಾಗೂ ಬಿವೈ ವಿಜಯೇಂದ್ರ ವಿರುದ್ಧ ಕೂಡ ವಾಗ್ದಾಳಿ ನಟಿಸಿದ್ದಾರೆ.

ಇದೆ ವೇಳೆ ಮಂಡ್ಯದಲ್ಲಿ ಬಿಜೆಪಿಯ ಮುಖಂಡರೊಬ್ಬರು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರಿಗೆ ಪತ್ರದಲ್ಲಿ ರಕ್ತದಲ್ಲಿ ಸಹಿ ಮಾಡುವ ಮೂಲಕ ಶಾಸಕ ಯತ್ನಾಳ ಹೇಳಿಕೆಗೆ ಕಡಿವಾಣ ಹಾಕಿ ಎಂದು ಮನವಿ ಮಾಡಿಕೊಂಡಿದ್ದಾರೆ. ಮಂಡ್ಯದ ಅಂಚೆ ಕಚೇರಿ ಮೂಲಕ ಹೈಕಮಾಂಡ್ಯ ಪತ್ರ ಬರೆದಿದ್ದಾರೆ.

ಶಾಸಕ ಯತ್ನಾಳ್ ಮಾತಿನಿಂದ ಪಕ್ಷಕ್ಕೆ ಬಹಳ ಡ್ಯಾಮೇಜ್ ಆಗುತ್ತಿದೆ ಎಂದು ಪತ್ರದ ಮೂಲಕ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಗೆ ಪತ್ರ ಬರೆದಿದ್ದಾರೆ. ಬಸನಗೌಡ ಯತ್ನಾಳ್ ಅವರು ಕಾಂಗ್ರೆಸ್ ಪಕ್ಷ ವಿರುದ್ಧ ಹೋರಾಟ ಮಾಡುತ್ತಿದ್ದಾರೋ ಅಥವಾ ಬಿಎಸ್ ಯಡಿಯೂರಪ್ಪ ಅವರ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರ ವಿರುದ್ಧ ಹೋರಾಟ ಮಾಡುತ್ತಿದ್ದಾರೋ ಗೊತ್ತಾಗುತ್ತಿಲ್ಲ. ರಕ್ತದಲ್ಲಿ ಸಹಿ ಮಾಡಿ ಪತ್ರ ಬರೆದಿದ್ದೇವೆ. ಈ ಪತ್ರದ ಸಾರಾಂಶ ಏನೆಂದರೆ ಅವರ ಮಾತಿನಿಂದ ನಮ್ಮ ಪಕ್ಷಕ್ಕೆ ಹಿನ್ನಡೆ ಆಗುತ್ತಿದೆ. ನಮ್ಮ ಕಾರ್ಯಕರ್ತರಿಗೆ ಮುಜುಗರ ಆಗುತ್ತಿದೆ ನಮ್ಮ ಪಾರ್ಟಿಗೆ ಮುಜುಗರ ಆಗುತ್ತಿದೆ.


☛ ಉದಯವಾಹಿನಿ ಚಿತ್ರ

**ಬಿಎಸ್ ಯಡಿಯೂರಪ್ಪ ಅವರ ನಿಷ್ಠಾವಂತ ಅಭಿಮಾನಿಗಳಿಗೆ ಮನಸಿಗೆ ನೋವು ತರುತ್ತದೆ ಯತ್ನಾಳ್ ಮಾತಿಗೆ ಕಡಿವಾಣ ಹಾಕಿಸಿ ಎಂದು ಪತ್ರದಲ್ಲಿ ಮನವಿ ಮಾಡಿದ್ದೇವೆ**
**-ರವಿಕುಮಾರ್, ಮುಖಂಡ**

## ಕರಿಮೆಣಸು ಬೆಳೆ: ರೈತರಿಗೆ ತರಬೇತಿ

• **ಉದಯವಾಹಿನಿ, ಮಡಿಕೇರಿ**

ತಾಲ್ಲೂಕಿನ ಅಪ್ಪಂಗಳದಲ್ಲಿರುವ ಐಸಿಎಆರ್-ಭಾರತೀಯ ಸಂಬಾರ ಬೆಳೆಗಳ ಸಂಶೋಧನ ಸಂಸ್ಥೆಯ ಪ್ರಾದೇಶಿಕ ಕೇಂದ್ರದಲ್ಲಿ ನಡೆದ 'ಕರಿಮೆಣಸಿನ ಸುಧಾರಿತ ಮತ್ತು ಸುಸ್ಥಿರ ಕೃಷಿ ತಂತ್ರಜ್ಞಾನಗಳು' ಕುರಿತ ಒಂದು ದಿನದ ರೈತರ ತರಬೇತಿ ಕಾರ್ಯಕ್ರಮದಲ್ಲಿ 100ಕ್ಕೂ ಅಧಿಕ ರೈತರು ಭಾಗಿಯಾಗಿದ್ದರು. ಐಸಿಎಆರ್- ಭಾರತೀಯ ಸಂಬಾರ ಬೆಳೆಗಳ ಸಂಶೋಧನ ಸಂಸ್ಥೆ. ಕಲ್ಲಿಕೋಟೆಯ ಸುವರ್ಣ ಮಹೋತ್ಸವದ ಅಂಗವಾಗಿ ಏರ್ಪಡಿಸಿದ್ದ ಈ ಕಾರ್ಯಕ್ರಮದಲ್ಲಿ ಕೊಡಗು, ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಉಡುಪಿ, ತುಮಕೂರು, ಮೈಸೂರು, ಮಂಡ್ಯ, ಕಲಬುರಗಿ ಜಿಲ್ಲೆಗಳಿಂದ ಬಂದಿದ್ದ ರೈತರು ಪಾಲ್ಗೊಂಡಿದ್ದರು. ಸಿದ್ಧಾಪುರದ ಪ್ರಗತಿಪರ ರೈತ ಶ್ಯಾಮ್ ಅಯ್ಯಪ್ಪ ಅವರು ಕಾರ್ಯಕ್ರಮ ಉದ್ಘಾಟಿಸಿ ತಮ್ಮ ಕೃಷಿ ಅನುಭವವನ್ನು ಹಂಚಿಕೊಂಡರು. ಸಂಸ್ಥೆಯ ಪ್ರಾದೇಶಿಕ ಕೇಂದ್ರದ ಮುಖ್ಯಸ್ಥ ಎಸ್ ಜೆ. ಅಂಕೆಗೌಡ ಅವರು ಕಾಳುಮೆಣಸಿನ ಸಂಶೋಧನಾ ಕಾರ್ಯಗಳ ಬಗ್ಗೆ ಮತ್ತು ಕರ್ನಾಟಕದಲ್ಲಿ ಕಾಳುಮೆಣಸಿನ ಉತ್ಪಾದನೆಯ ಬಗ್ಗೆ ಮಾಹಿತಿ ನೀಡಿದರು. ತರಬೇತಿ ಕಾರ್ಯಾಗಾರದಲ್ಲಿ ಕಾಳುಮೆಣಸಿನ ತಳಿ ವೈವಿಧ್ಯತೆ, ಗುಣಮಟ್ಟದ ಸಸ್ಯಾಭಿವೃದ್ಧಿ ವಿಧಾನಗಳು, ವೈಜ್ಞಾನಿಕ ಕೃಷಿ ಪದ್ಧತಿಗಳು, ರೋಗ ಮತ್ತು ಕೀಟ ನಿರ್ವಹಣೆ ಬಗ್ಗೆ ವಿಜ್ಞಾನಿಗಳು ಮಾಹಿತಿ ನೀಡಿದರು.

## ಹೋರಾಟದ ದಿಕ್ಕು ತಪ್ಪಿಸುತ್ತಿದೆ ಬೆಮಲ್ ಆಡಳಿತ

• **ಉದಯವಾಹಿನಿ, ಕೆಜಿಎಫ್**

ಬೆಮಲ್ ಆಡಳಿತ ವರ್ಗ ಕಾರ್ಮಿಕರ ಹಿತಾಸಕ್ತಿ ಕಾಪಾಡುವಲ್ಲಿ ವಿಫಲವಾಗಿದೆ. ಕಾರ್ಮಿಕರಲ್ಲದೆ, ಜನಪ್ರತಿನಿಧಿಗಳಿಗೂ ಸಹ ಸುಳ್ಳು ಮಾಹಿತಿ ನೀಡಿ ಹೋರಾಟದ ದಿಕ್ಕು ತಪ್ಪಿಸಲು ಯತ್ನಿಸುತ್ತಿದೆ ಎಂದು ತಾಲ್ಲೂಕಿನ ವಿವಿಧ ಸಂಘಟನೆಗಳ ಮುಖಂಡರು ಆರೋಪಿಸಿದರು.

ರಾಬರ್ಟ್‌ಸನ್‌ಪೇಟೆಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಾಲಿಡಾರಿಟಿ ಸಮಿತಿ ಸಂಚಾಲಕ ಎ.ಆರ್.ಬಾಬು, ಇಷ್ಟು ದಿನಗಳ ಕಾಲ ನಡೆದ ಅನಿರ್ದಿಷ್ಟಕಾಲದ ಮುಷ್ಕರವನ್ನು ಕೊನೆಗಾಣಿಸಲು ಆಡಳಿತ ವರ್ಗ ಮನಸ್ಸು ಮಾಡಿಲ್ಲ. ಸಂಸದರು, ಶಾಸಕರಿಗೂ ಸಹ ತಪ್ಪು ಮಾಹಿತಿ ನೀಡಿ, ಕಾರ್ಮಿಕರು ನಡೆಸುತ್ತಿರುವ ಚಳವಳಿ ಸಮಂಜಸವಲ್ಲ ಎಂಬ ಭಾವನೆಯನ್ನು ಮೂಡಿಸಲು ಯತ್ನಿಸುತ್ತಿದ್ದಾರೆ.

ಕಾರ್ಮಿಕರ ಮತ್ತು ಸಾರ್ವಜನಿಕರ ಅಭಿಪ್ರಾಯದಂತೆ 29ರಿಂದ ಬೃಹತ್ ರ್‍ಯಾಲಿ, ಸರದಿ ಉಪವಾಸ ಸತ್ಯಾಗ್ರಹ, ನಂತರ ಡಿಸಂಬರ್ 4ರಂದು ಕೆಜಿಎಫ್ ಸ್ವಯಂ ಪ್ರೇರಿತ ಬಂದ್‌ಗೆ ಕರೆ ನೀಡಲಾಗುವುದು ಎಂದು ತಿಳಿಸಿದರು.


ಬೆಮಲ್ ಗುತ್ತಿಗೆ ಕಾರ್ಮಿಕರಿಗೆ ಬೆಂಬಲ ನೀಡಲು ಮುಷ್ಕರ ನಿರತ ಪ್ರದೇಶಕ್ಕೆ ಭೇಟಿ ನೀಡಿದ್ದ ಬೆಮಲ್ ಅಧಿಕೃತ ಕಾರ್ಮಿಕ ಸಂಘ ಬಿಇಎಂಇಎ ಗೆ ಆಡಳಿತ ವರ್ಗ ನೋಟಿಸ್ ನೀಡಿರುವುದು ದುರದೃಷ್ಟಕರ ಸಂಗತಿ. ಇದು ಕಾರ್ಮಿಕರ ಮೂಲಭೂತ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನವಾಗಿದೆ. ಬೆಂಗಳೂರು ಘಟಕದ ಗುತ್ತಿಗೆ ಕಾರ್ಮಿಕರು ಕೂಡ ಈಗ ಮುಷ್ಕರ ಹೂಡಲು ನೋಟಿಸ್ ನೀಡಿದ್ದಾರೆ. ಅವರು ಕೂಡ ಶೀಘ್ರದಲ್ಲಿಯೇ ಹೋರಾಟಕ್ಕೆ ಸೇರಿಕೊಳ್ಳಲಿದ್ದಾರೆ. ನ್ಯಾಯಯುತ ಹಾದಿಯಲ್ಲಿ ನಮ್ಮ ಶ್ರಮಕ್ಕೆ ತಕ್ಕ ಕೂಲಿ ಕೇಳುತ್ತಿದ್ದೇವೆ ಎಂದು ಬಾಬು ಹೇಳಿದರು.


☛ ಉದಯವಾಹಿನಿ ಚಿತ್ರ

# ಸ್ಮಶಾನಕ್ಕೆ ಹೋಗಲು ದಲಿತರಿಗೆ ಅಡ್ಡಿ : ಶವವಿಟ್ಟು ಪ್ರತಿಭಟನೆ

• **ಉದಯವಾಹಿನಿ ಚನ್ನಪಟ್ಟಣ**

ಸ್ಮಶಾನಕ್ಕೆ ಜಾಗ ನೀಡುವಂತೆ ಆಗ್ರಹಿಸಿ ದೇವರಹೊಸಹಳ್ಳಿ ಗ್ರಾಮದದಲಿತ ಮುಖಂಡರು ಚನ್ನಪಟ್ಟಣ ತಾಲ್ಲೂಕು ಕಚೇರಿ ಮುಂದೆ ಶವ ಇರಿಸಿ ಪ್ರತಿಭಟನೆ ನಡೆಸಿದ್ದಾರೆ. ಶವ ಸಂಸ್ಕಾರ ಮಾಡಲು ಕುಟುಂಬದವರು ಶವವನ್ನು ಸ್ಮಶಾನಕ್ಕೆ ತೆಗೆದುಕೊಂಡು ಹೋಗುವಾಗ ಸ್ಥಳೀಯರು ನಮ್ಮ ಜಮೀನಿನ ಮೇಲೆ ಹೋಗಬೇಡಿ ಎಂದು ಅಡ್ಡಿಪಡಿಸಿದ್ದಾರೆ. ಸ್ಮಶಾನಕ್ಕೆ ಹೋಗಲು ಜಾಗವಿಲ್ಲದ ಕಾರಣ ಕುಪಿತಗೊಂಡ ಗ್ರಾಮಸ್ಥರು ಶವವನ್ನು ಚನ್ನಪಟ್ಟಣಕ್ಕೆ ತೆಗೆದುಕೊಂಡು ಬಂದು ತಾಲ್ಲೂಕು ಕಚೇರಿಗೆ ಮುಂದೆ ಪ್ರತಿಭಟನೆ ನಡೆಸಿದರು. ಸ್ಮಶಾನಕ್ಕೆ ಹೋಗಲು ಜಾಗ ಕೊಡಿಸದಿದ್ದರೆ, ಕಚೇರಿ ಮುಂಭಾಗವೇ ಶವಸಂಸ್ಕಾರ ಮಾಡುವುದಾಗಿ ಎಚ್ಚರಿಕೆ ನೀಡಿದರು. ಕಚೇರಿಗೆ ಸೌದೆಯೊಂದಿಗೆ ಬಂದ ಪ್ರತಿಭಟನಾಕಾರರು, ಜಿಲ್ಲಾಧಿಕಾರಿ ಸ್ಥಳಕ್ಕೆ ಬರಬೇಕು. ಗ್ರಾಮದ ದಲಿತರಿಗೆ ಸ್ಮಶಾನ ಕಲ್ಪಿಸಬೇಕು. ಇಲ್ಲದೆ ಹೋದರೆ ಕಚೇರಿ ಆವರಣದಲ್ಲೇ ಶವಸಂಸ್ಕಾರ ಮಾಡಲಾಗುವುದು ಎಂದು ಎಚ್ಚರಿಸಿದರು. ಪ್ರತಿಭಟನೆ ಹಿನ್ನೆಲೆಯಲ್ಲಿ ತಹಶೀಲ್ದಾರ್ ನರಸಿಂಹ ಮೂರ್ತಿ ದೇವರ ಹೊಸಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸ್ಮಶಾನಕ್ಕೆ ಜಾಗವಿದ್ದು ಸ್ಮಶಾನಕ್ಕೆ ಹೋಗಲು ರಸ್ತೆ ಇಲ್ಲದ ಕಾರಣ ಸಮಸ್ಯೆ ಎದುರಾಗಿದೆ. ಸಮಸ್ಯೆ ಪರಿಹರಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರಾದರೂ, ಸ್ಮಶಾನಕ್ಕೆ ಜಾಗ ನೀಡುವವರೆಗೆ ನಾವು ಸ್ಥಳದಿಂದ ಕದಲುವುದಿಲ್ಲ ಎಂದು ಪ್ರತಿಭಟನೆ ಮುಂದುವರೆಸಿದರು.



☛ ಉದಯವಾಹಿನಿ ಚಿತ್ರ

# ವಿದ್ಯುತ್ ಘಟಕ ಉನ್ನತೀಕರಣಕ್ಕೆ 208 ಕೋಟಿ

• **ಉದಯವಾಹಿನಿ, ಗೋಣಿಕೊಪ್ಪಲು**

ಜಿಲ್ಲೆಯಲ್ಲಿ ವಿದ್ಯುತ್ ಘಟಕ ಉನ್ನತೀಕರಣಕ್ಕೆ ರಾಜ್ಯ ಸರ್ಕಾರ 208 ಕೋಟಿ ಅನುದಾನ ಬಿಡುಗಡೆ ಮಾಡಿದೆ' ಎಂದು ಶಾಸಕ ಎ.ಎಸ್. ಪೊನ್ನಣ್ಣ ಹೇಳಿದರು. ಪೊನ್ನಂಪೇಟೆ ಭಗವತಿ ನಗರದ ವಿದ್ಯುತ್ ವೋಲ್ಟೇಜ್ ಸಮಸ್ಯೆ ನಿವಾರಿಸಲು ನೂತನವಾಗಿ ಸ್ಥಾಪಿಸಿದ ಹೆಚ್ಚುವರಿ 63 ಕೆವಿಯ ಪರಿವರ್ತಕ ಘಟಕ ಉದ್ಘಾಟಿಸಿ ಬುಧವಾರ ಮಾತನಾಡಿದರು.

ಇಂಧನ ಸಚಿವ ಕೆ.ಜೆ.ಜಾರ್ಜ್ ಅವರೊಂದಿಗೆ ಸಮಾಲೋಚಿಸಿ ವಿದ್ಯುತ್ ಉನ್ನತೀಕರಣಕ್ಕೆ 208 ಕೋಟಿ ಅನುದಾನವನ್ನು ಸೆಸ್ಕ್‌ಗೆ ಬಿಡುಗಡೆ ಮಾಡಲಾಗಿದೆ. ಇದರಲ್ಲಿ 108 ಕೋಟಿ ವಿರಾಜಪೇಟೆ ಕ್ಷೇತ್ರದ ವ್ಯಾಪ್ತಿಗೆ ದೊರೆಯಲಿದೆ' ಎಂದು ಹೇಳಿದರು. ಕೊಡಗು ಜಿಲ್ಲೆಯಲ್ಲಿ 10 ಲಕ್ಷ ಕಿ.ಮೀ. ವಿದ್ಯುತ್ ತಂತಿಗಳು ಹಾದುಹೋಗಿವೆ. ಪ್ರಸಕ್ತ ವರ್ಷ ಅತಿ ಹೆಚ್ಚಿನ ಬಿರುಗಾಳಿ ಮಳೆಯಿಂದಾಗಿ ವಿದ್ಯುತ್ ನಿರ್ವಹಣೆಗೆ ಹೆಚ್ಚಿನ ನಿಗಾವಹಿಸಲಾಯಿತು. ಪ್ರತಿದಿನ 25 ವಿದ್ಯುತ್ ಕಂಬಗಳನ್ನು ಅಳವಡಿಸಲಾಗುತ್ತಿತ್ತು. ವಿದ್ಯುತ್ ಕಂಬಗಳ ಸರಬರಾಜು ಹಾಗೂ ಅಳವಡಿಕೆ ಕಾರ್ಯ ಯುದ್ಧೋಪಾದಿಯಾಗಿ ನಡೆಯಿತು' ಎಂದು ತಿಳಿಸಿದರು.

'ಪ್ರಸ್ತುತ ವರ್ಷ ಮಳೆಗಾಲದಲ್ಲಿ 3,800 ವಿದ್ಯುತ್ ಕಂಬಗಳು ಮುರಿದುಬಿದ್ದಿವೆ. ಹಾಗೆಯೇ 120 ಟ್ರಾನ್ಸ್‌ಫಾರ್ಮರ್‌ಗಳು ಹಾಳಾಗಿದ್ದವು. ಹೊರಗಿನಿಂದ ಲೈನ್ ಮ್ಯಾನ್‌ಗಳನ್ನು ನಿಯೋಜಿಸಿ ವಿದ್ಯುತ್ ಸಮಸ್ಯೆಯನ್ನು ನಿವಾರಿಸಲಾಗಿದೆ' ಎಂದು ವಿವರಿಸಿದರು.

# 10,885 'ಬಿಪಿಎಲ್' ಪಡಿತರ ಚೀಟಿಗಳು ಎಪಿಎಲ್‌ಗೆ ಬದಲಾವಣೆ

## • ಬಿಪಿಎಲ್ ಪಡೆಯಲು ವಾರ್ಷಿಕ ಆದಾಯ 1.20 ಲಕ್ಷದೊಳಗಿರಬೇಕೆಂಬ ಮಾನದಂಡವೇ ಅವೈಜ್ಞಾನಿಕ: ದೇವಿ

• **ಉದಯವಾಹಿನಿ ಮಂಡ್ಯ**

ಬಿಪಿಎಲ್ ಕಾರ್ಡ್ ಪರಿಷ್ಕರಣೆಯನ್ನು ರಾಜ್ಯ ಸರ್ಕಾರ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ್ದು, 'ಸರ್ಕಾರಿ ನೌಕರರು' ಮತ್ತು 'ಆದಾಯ ತೆರಿಗೆ ಪಾವತಿದಾರರು' ಹೊಂದಿರುವ ಬಿಪಿಎಲ್ ಕಾರ್ಡ್‌ಗಳನ್ನು ಹೊರತುಪಡಿಸಿ, ಉಳಿದೆಲ್ಲ ಪಡಿತರ ಚೀಟಿಗಳನ್ನು ಮುಂದುವರಿಸುವಂತೆ ಆಹಾರ ಇಲಾಖೆಗೆ ಸೂಚಿಸಿದೆ.

ಆದಾಯ ತೆರಿಗೆ ಪಾವತಿದಾರರು' ಎಂಬ ಕಾರಣದಿಂದ ಜಿಲ್ಲೆಯಲ್ಲಿ 5,178 ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸಲು ನಿರ್ಧರಿಸಿದ್ದ ಇಲಾಖೆಯು, ಈಗ 702 ಅರ್ಹರನ್ನು ಪತ್ತೆ ಮಾಡಿದ್ದು ಅವರಿಗೆ ಕಾರ್ಡ್ ಮತ್ತೆ ದೊರಕಲಿದೆ. ಕಾರ್ಡ್‌ಗಳು ರದ್ದಾಗಿದ್ದರಿಂದ, ಗ್ಯಾರಂಟಿ ಯೋಜನ ಸೇರಿದಂತೆ ಸೌಲಭ್ಯಗಳಿಂದ ವಂಚಿತರಾದ ಬಡವರು ಅರ್ಜಿ ಸಲ್ಲಿಸಿ, ಕಾರ್ಡ್ ಮರಳಿ ಕೊಡುವಂತೆ ಕೋರಿದ್ದರು.

ಬಡವರ, ಕಾರ್ಮಿಕರ ಬಿಪಿಎಲ್ ಕಾರ್ಡ್‌ಗಳು ರದ್ದಾಗಿರುವ ಬಗ್ಗೆ ವಿವಿಧ ಸಂಘಟನೆಗಳು ರಾಜ್ಯದಾದ್ಯಂತ ಪ್ರತಿಭಟಿಸಿದ್ದರಿಂದ ಎಚ್ಚೆತ್ತುಕೊಂಡ ರಾಜ್ಯ ಸರ್ಕಾರ ಈಗ ಹೊರಡಿಸಿರುವ ಆದೇಶದ ಅನುಸಾರ, ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಬಂದ ಅರ್ಜಿಗಳನ್ನು ಆದಾಯ ತೆರಿಗೆ ಇಲಾಖೆಯ 'ಇ-ಪೋರ್ಟಲ್'ನಲ್ಲಿ ಆಹಾರ ಇಲಾಖೆ ಅಧಿಕಾರಿಗಳು ಪರಿಶೀಲಿಸಿದ್ದು, 702 ಮಂದಿ ಆದಾಯ ತೆರಿಗೆ ಪಾವತಿಸುತ್ತಿಲ್ಲ ಎಂಬುದು ದೃಢಪಟ್ಟಿದೆ.

ಪ್ಯಾನ್-ಆಧಾರ್ ಜೋಡಣೆಗೆ ನೀಡಿದ್ದ ಕಾಲ ಮಿತಿ ಮೀರಿದವರು ಕಟ್ಟಿದ್ದ 1 ಸಾವಿರ ದಂಡದ ಮೊತ್ತವು ಆದಾಯ ತೆರಿಗೆ ಇಲಾಖೆಗೆ (ಐ.ಟಿ) ಪಾವತಿಯಾಗಿದ್ದರಿಂದ, ಅವರನ್ನು 'ಆದಾಯ ತೆರಿಗೆ ಪಾವತಿದಾರರು' ಎಂಬ ಪಟ್ಟಿಗೆ ಸೇರಿಸಲಾಗಿತ್ತು ಅದನ್ನೇ ಆಧಾರವಾಗಿಟ್ಟುಕೊಂಡ ಇಲಾಖೆ ಕಾರ್ಡ್ ರದ್ದುಪಡಿಸಲು ಮುಂದಾಗಿತ್ತು. '

ಜಿಲ್ಲೆಯಲ್ಲಿ 6 ತಿಂಗಳಿಂದ ಸತತವಾಗಿ ರೇಷನ್ ಪಡೆಯದ 8,061 ಪಡಿತರ ಚೀಟಿದಾರರು, 2,657 ಐಟಿ ಪಾವತಿದಾರರು, 36 ಸರ್ಕಾರಿ ನೌಕರರು, 1.20 ಲಕ್ಷಕ್ಕಿಂತ ಹೆಚ್ಚುವರಿ ಆದಾಯವಿರುವ 131 ಪಡಿತರ ಚೀಟಿದಾರರು ಸೇರಿದಂತೆ ಒಟ್ಟು 10,885 ಬಿಪಿಎಲ್ ಕಾರ್ಡ್‌ಗಳನ್ನು 'ಎಪಿಎಲ್'ಗೆ ಬದಲಾಯಿಸಲಾಗಿದೆ ಎಂದು ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

'ಅನ್ನ ಸಿಗದೆ, ಹಸಿವಿನಿಂದ ನರಳುವ ಬಡವರ ಸ್ಥಿತಿ ಅಧಿಕಾರಿಗಳಿಗೆ ಅರ್ಥವಾಗುವುದಿಲ್ಲ. 'ಐಟಿ ಪಾವತಿದಾರರು' ಎಂಬ ನೆಪವೊಡ್ಡಿ ಬಡವರ ಬಿಪಿಎಲ್ ಕಾರ್ಡ್‌ಗಳನ್ನು ಕಸಿಯಬಾರದು.

ಅರ್ಹರಿಗೆ ಕೂಡಲೇ ಮರಳಿಸಬೇಕು' ಎಂದು ಸಿಐಟಿಯು ಜಿಲ್ಲಾ ಸಮಿತಿಯ ಪ್ರಧಾನ ಕಾರ್ಯದರ್ಶಿ ಸಿ.ಕುಮಾರಿ ಒತ್ತಾಯಿಸಿದ್ದಾರೆ.

**ಬಿಪಿಎಲ್ ಕಾರ್ಡ್ ಪಡೆಯಲು ಅರ್ಹರಾದವರ ವಿವರ**

(ತಾಲ್ಲೂಕು, ಪಡಿತರ ಚೀಟಿ ಸಂಖ್ಯೆ)116

■ ಮದ್ದೂರು : 302
■ ಮಂಡ್ಯ : 100
■ ಮಳವಳ್ಳಿ: 77
■ ನಾಗಮಂಗಲ : 09
■ ಪಾಂಡವಪುರ : 20
■ ಶ್ರೀರಂಗಪಟ್ಟಣ : 78
ಒಟ್ಟು : 702


☛ ಉದಯವಾಹಿನಿ ಚಿತ್ರ

**ಬಿಪಿಎಲ್ ಪರಿಷ್ಕರಣೆ ವೇಳೆ ಕೆಲವು ಅರ್ಹ ಫಲಾನುಭವಿಗಳ ಹೆಸರು ಬಿಟ್ಟುಹೋಗಿರುವುದು ಗಮನಕ್ಕೆ ಬಂದಿದೆ. ಅದನ್ನು ಸರಿಪಡಿಸಲು ಇಲಾಖೆ ಮತ್ತು ಆಯೋಗ ಮುಂದಾಗಿದೆ. ಕೃಷ್ಣಕುಮಾರ್, ಉಪನಿರ್ದೇಶಕ, ಆಹಾರ ಇಲಾಖೆ ಮಂಡ್ಯ ಐಟಿ ಪಾವತಿ ಮಾಡದ ಬಡವರ ಬಿಪಿಎಲ್ ಕಾರ್ಡ್‌ಗಳು ರದ್ದಾಗಿರುವ ಬಗ್ಗೆ ಅರ್ಜಿ ಸಲ್ಲಿಸಿದರೆ ಪರಿಶೀಲಿಸಿ ಮತ್ತೆ ಕಾರ್ಡ್ ಕೊಡಲು ಕ್ರಮವಹಿಸುತ್ತೇವೆ**
**-ಡಾ.ಕೃಷ್ಣ, ಅಧ್ಯಕ್ಷ, ರಾಜ್ಯ ಆಹಾರ ಆಯೋಗ**

**ಸರಿಪಡಿಸಲು ಇಲಾಖೆ ಮತ್ತು ಆಯೋಗ ಮುಂದು**

**ಸರ್ಕಾರ ಪುನರ್ ಪರಿಶೀಲಿಸಬೇಕು**

**ಪ್ರತಿಷ್ಠಿತ ಖಾಸಗಿ ಆಸ್ಪತ್ರೆಗಳಲ್ಲೂ ಉಚಿತ ಚಿಕಿತ್ಸೆ ಸಿಗುತ್ತದೆ' ಎಂಬ ಕಾರಣಕ್ಕೆ ಅನರ್ಹರು 'ಬಿಪಿಎಲ್ ಕಾರ್ಡ್ ಪಡೆದಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲೇ ಗುಣಮಟ್ಟದ ಚಿಕಿತ್ಸೆ ದೊರಕಿಸಿದರೆ ಇದನ್ನು ತಡೆಗಟ್ಟಬಹುದು. ಬಿಪಿಎಲ್' ಪಡೆಯಲು ವಾರ್ಷಿಕ ಆದಾಯ 1.20 ಲಕ್ಷದೊಳಗಿರಬೇಕೆಂಬ ಮಾನದಂಡವೇ ಅವೈಜ್ಞಾನಿಕ. ಅದನ್ನು ಸರ್ಕಾರ ಪುನರ್ ಪರಿಶೀಲಿಸಬೇಕು' ಎಂದು ಜನವಾದಿ ಮಹಿಳಾ ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ದೇವಿ ಒತ್ತಾಯಿಸಿದ್ದಾರೆ.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ.

**ವೃಷಭ** ಕುಟುಂಬದ ಸದಸ್ಯರು ಬೇಡಿಕೆಗಳನ್ನಿಡುತ್ತಾರೆ. ನಿಮ್ಮ ಅಚ್ಚುಮೆಚ್ಚಿನವರನ್ನು ಕ್ಷಮಿಸಲು ಮರೆಯಬೇಡಿ. ಸ್ವಾಭಿಮಾನ ನಿರ್ಧಾರಕ್ಕೆ ಅಡ್ಡಪಡಿಸಲು ಬಿಡಬೇಡಿ. ನಿಮ್ಮ ಕೈಕೆಳಗಿನವರು ಏನು ಹೇಳುತ್ತಾರೆಂದು ಕೇಳಿ.

**ಮಿಥುನ** ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು.

**ಕರ್ಕಾಟಕ** ಮಾದಕವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ.

**ಸಿಂಹ** ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

**ಕನ್ಯಾ** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ದೊಡ್ಡ ಗುಂಪಿನಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳುವುದು ಅತ್ಯಂತ ಮನರಂಜನಾತ್ಮಕವಾಗಿರುತ್ತದೆ.

**ತುಲಾ** ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು –ಏಕೆ ಏನನ್ನಾದರೂ ಮಾಡಬಾರದು.

**ವೃಶ್ಚಿಕ** ಅನಾವಶ್ಯಕವಾಗಿ ವಾದ ಮಾಡಿ ನಿಮ್ಮ ಶಕ್ತಿಯನ್ನು ವ್ಯರ್ಥ ಮಾಡಬೇಡಿ. ನೀವು ಒಂದು ವಾದದಿಂದ ಏನನ್ನೂ ಪಡೆಯದಿದ್ದರೂ ಏನಾದರೂ ಕಳೆದುಕೊಳ್ಳುತ್ತೀರೆಂದು ನೆನಪಿಟ್ಟುಕೊಳ್ಳಿ.

**ಧನಸ್ಸು** ಹತಾಶೆಯ ಭಾವನೆ ನಿಮ್ಮನ್ನು ಆವರಿಸಲು ಬಿಡಬೇಡಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ಸ್ನೇಹಿತರು ಸಂತೋಷದ ಸಂಜೆಗಾಗಿ ನಿಮ್ಮನ್ನು ಅವರ ಸ್ಥಳಕ್ಕೆ ಆಮಂತ್ರಿಸುತ್ತಾರೆ.

**ಮಕರ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಆರ್ಥಿಕ ಜೀವನದ ಸ್ಥಿತಿ ಇಂದು ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ, ನಿಮ್ಮನ್ನು ಉಳಿಸಲು ನಿಮಗೆ ಕಷ್ಟವಾಗಬಹುದು.

**ಕುಂಭ** ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ನಕ್ಷತ್ರಪುಂಜಗಳ ಚಾಲನೆ ನಿಮಗಾಗಿ ಉತ್ತಮವಾಗಿಲ್ಲ. ಇಂದಿನ ದಿನ ನೀವು ನಿಮ್ಮ ಹಣವನ್ನು ತುಂಬಾ ಸುರಕ್ಷಿತವಾಗಿಡಬೇಕು.

**ಮೀನ** ಒಂದು ಹಂತವನ್ನು ದಾಟಿ ನಿಮ್ಮನ್ನು ದಂಡಿಸಬೇಡಿ ಮತ್ತು ಸರಿಯಾದ ವಿಶ್ರಾಂತಿ ತೆಗೆದುಕೊಳ್ಳಿ. ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ.

# ಸಂತೋಷ್ ಲಾಡ್ V/s ಪ್ರಹ್ಲಾದ ಜೋಶಿ ಗುದ್ದಾಟ, ಪಾಲಿಕೆ ಕೆಲಸ ಸ್ಥಗಿತ

## ಜೂನ್ ಕೊನೆಯ ವಾರದಲ್ಲಿ ಆರಂಭವಾಗಿದ್ದ 40 ಕೋಟಿ ರೂಪಾಯಿ ವೆಚ್ಚ ಕಾಮಗಾರಿಗೆ ಸಾಕಷ್ಟು ವಿಳಂಬವಾಗುತ್ತಿದೆ

• **ಉದಯವಾಹಿನಿ, ಹುಬ್ಬಳ್ಳಿ**

ಹುಬ್ಬಳ್ಳಿ – ಧಾರವಾಡ ಪಾಲಿಕೆಯೂ ಒಂದಾಗಿದೆ. ಈ ಪಾಲಿಕೆ ಸಣ್ಣದಾಗಿದ್ದರೂ ಹಲವು ಅತ್ಯುತ್ತಮ ಕಾರ್ಯಗಳಿಂದ ಜನ ಮನ್ನಣೆ ಗಳಿಸಿದೆ. ಅಚ್ಚರಿಯ ವಿಷಯವೆಂದರೆ ಬೆಂಗಳೂರು ಸಹ ಸ್ವಚ್ಛತೆಯ ವಿಷಯದಲ್ಲಿ ಮಾಡದ ಸಾಧನೆ ಹಾಗೂ ಪ್ರಗತಿಯನ್ನು ಈ ಪಾಲಿಕೆ ಮಾಡಿದೆ.

ಆದರೆ, ಅವಳಿ ನಗರ ಖ್ಯಾತಿಯ ಹುಬ್ಬಳ್ಳಿ – ಧಾರವಾಡದಲ್ಲಿ ಮಹತ್ವದ ಕೆಲಸವೊಂದು ನಿಂತಲ್ಲೇ ನಿಂತಿದೆ. ಹಲವು ತಿಂಗಳುಗಳಿಂದ ಹುಬ್ಬಳ್ಳಿ – ಧಾರವಾಡ ಮಹಾನಗರ ಪಾಲಿಕೆಯ ನೂತನ ಸಭಾಭವನ ಕಟ್ಟಡ ನಿರ್ಮಾಣ ಕಾಮಗಾರಿ ಇನ್ನೇನು ಆರಂಭಗೊಂಡಿತು ಎನ್ನುವಷ್ಟರಲ್ಲೇ ಮತ್ತೆ ಸ್ಥಗಿತಗೊಂಡಿದೆ. ಈಗ ಇರುವ ಹುಬ್ಬಳ್ಳಿ – ಧಾರವಾಡ ಪಾಲಿಕೆಯ ಸಭಾಂಗಣವು ಪಾಲಿಕೆಯ ಮಾಸಿಕ ಸಭೆಗಳನ್ನು ನಡೆಸುವಷ್ಟು ಸುವ್ಯವಸ್ಥಿತವಾಗಿಲ್ಲ. ಇನ್ನು ಜೂನ್ ಕೊನೆಯ ವಾರದಲ್ಲಿ ಆರಂಭವಾಗಿದ್ದ 40 ಕೋಟಿ ರೂಪಾಯಿ ವೆಚ್ಚ ಕಾಮಗಾರಿಗೆ ಸಾಕಷ್ಟು ವಿಳಂಬವಾಗುತ್ತಿದೆ. ಅಡಿಪಾಯಕ್ಕಾಗಿ 15 ಅಡಿ ಆಳ ತಗ್ಗು ತೋಡಲಾಗಿತ್ತು. ಆದರೆ, ಜುಲೈ ತಿಂಗಳಿನಿಂದ ಆರಂಭವಾದ ಮಳೆಯಿಂದ ಅಡಿಪಾಯಕ್ಕೆ ತೆಗೆಯಲಾದ ತಗ್ಗು ಪ್ರದೇಶದಲ್ಲಿ ಸಂಪೂರ್ಣವಾಗಿ ನೀರು ಆವರಿಸಿ ಸಮಸ್ಯೆ ಆಗಿತ್ತು. ಹೀಗಾಗಿ, ಕಾಮಗಾರಿ ಆರಂಭವಾದ ಎರಡೇ ವಾರದಲ್ಲಿ ಅದು ಸ್ಥಗಿತಗೊಂಡಿತ್ತು.

**ಕಟ್ಟಡ ತೆರವು ಕಾರ್ಯ ಬಾಕಿ**

**ಇನ್ನು ಮಹಾನಗರ ಪಾಲಿಕೆಯ ನಿವೃತ್ತ ನೌಕರರ ಸಂಘದ ಕಟ್ಟಡ ಹಾಗೂ ಇನ್ನೊಂದು ಬದಿಯಲ್ಲಿರುವ ಮಹಾನಗರ ಪಾಲಿಕೆ ನೌಕರರ ಸಂಘದ ಕಟ್ಟಡ ಕೆಡವುವಲ್ಲಿ ವಿಳಂಬವಾಗಿದೆ. ಈ ಎರಡೂ ಸಂಘಗಳನ್ನು ಚಿಟಗುಪ್ಪಿ ಆಸ್ಪತ್ರೆಯ ಹಳೇ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. ಕಟ್ಟಡ ತೆರವು ಕಾರ್ಯ ಇನ್ನಷ್ಟೇ ಆರಂಭವಾಗಬೇಕಿದೆ. ನೂತನ ಸಭಾಭವನ ಕಟ್ಟಡ ನಿರ್ಮಾಣಕ್ಕೆ ಅಗತ್ಯವಾದ ಸ್ಥಳಾವಕಾಶಕ್ಕಾಗಿ ಬ್ರಿಟಿಷ್ ಕಾಲದ ಸಾಮಾನ್ಯ ಆಡಳಿತ ಶಾಖೆಯ (ಜಿ.ಎ. ಬ್ರಾಂಚ್) ಕಟ್ಟಡದ ವ್ಯಾಪ್ತಿಯಲ್ಲಿ ಕಾಮಗಾರಿ ನಡೆದಿದೆ.**



ಉದಯವಾಹಿನಿ ಚಿತ್ರ

ಈ ಬೆಳವಣಿಗೆ ನಡೆದು ಇದೀಗ ಎರಡು ತಿಂಗಳುಗಳೇ ಕಳೆದಿವೆ. ಮಳೆ ನಿಂತು ಎರಡು ತಿಂಗಳುಗಳೇ ಕಳೆದರೂ, ಕಾಮಗಾರಿ ಮಾತ್ರ ಆರಂಭವಾಗಿಲ್ಲ. ಮೊದಲ ಹಂತದಲ್ಲಿ ಅಂದಾಜು 5 ಕೋಟಿ ರೂಪಾಯಿ ವೆಚ್ಚದಲ್ಲಿ ಆರಂಭಿಸಲಾದ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ನೂತನ ಸಭಾಭವನ ಕಟ್ಟಡದ ನಿರ್ಮಾಣ ಕಾಮಗಾರಿ ಮಳೆಯಿಂದಾಗಿ ಸ್ಥಗಿತವಾಗಿದೆ.

ಜಿ ಪ್ಲಸ್ 3 ಮಾದರಿಯ 14 ಸಾವಿರ ಚದರ ಅಡಿ ವಿಸ್ತೀರ್ಣದ ಕಟ್ಟಡದ ಅಡಿಪಾಯಕ್ಕಾಗಿ 15 ಅಡಿಯಷ್ಟು ಆಳವನ್ನು ತೆಗೆಯಲಾಗಿತ್ತು.

**ಸಾಮಾನ್ಯ ಆಡಳಿತ ಶಾಖೆ ಕಟ್ಟಡಕ್ಕೆ ಹೊಂದಿಕೊಂಡು ಹಿಂಭಾಗದಲ್ಲಿ ಸಭಾಭವನ ನಿರ್ಮಾಣಕ್ಕೆ ತಕ್ಕಂತೆ ದೊಡ್ಡ ಪ್ರಮಾಣದಲ್ಲಿ ನೆಲ ಅಗೆಯಲಾಗಿದೆ. ಇಲ್ಲಿಯವರೆಗೆ ಸಾಮಾನ್ಯ ಆಡಳಿತ ಶಾಖೆ ಕಟ್ಟಡಕ್ಕೆ ಯಾವುದೇ ಹಾನಿಯಾಗಿಲ್ಲ. ಈ ಕಟ್ಟಡದಲ್ಲಿ ಸಾಮಾನ್ಯ ಆಡಳಿತ ಸಹಾಯಕ ಆಯುಕ್ತ, ಕಾನೂನು ಸಲಹೆಗಾರರು ಹಾಗೂ ಮಾರುಕಟ್ಟೆ ವಿಭಾಗ ಪ್ರಮುಖ ಕಚೇರಿಗಳಿವೆ. ಈ ಕಚೇರಿಗಳಲ್ಲಿ ಇಂದಿಗೂ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇದು ಬ್ರಿಟಿಷ್ ಕಾಲದ ಕಟ್ಟಡವಾಗಿರುವುದರಿಂದ ಸ್ಥಿರತೆ ಪರೀಕ್ಷೆಗೂ ಪಾಲಿಕೆ ಮುಂದಾಗಿದೆ.**

**ಕಾಮಗಾರಿ ಮಳೆಯಿಂದ ಸ್ಥಗಿತ**

ಪ್ರಾರಂಭದ ಎರಡು ವಾರ ಆದಷ್ಟು ಕೆಲಸ ಬಿಟ್ಟರೆ ಬೇರೆ ಏನೂ ಆಗಿಲ್ಲ. ಸಭಾಭವನ ನಿರ್ಮಾಣಕ್ಕೆ ಅಗತ್ಯವಾಗಿದೆ. ಆದರೆ, ಹು-ಧಾ ಮಹಾನಗರ ಪಾಲಿಕೆಯ ನೂತನ ಸಭಾಭವನ ಕಟ್ಟಡ ಕಾಮಗಾರಿ ನನೆಗುದಿಗೆ ಬಿದ್ದಿದೆ. ಅಲ್ಲದೇ ಕಾರ್ಯನಿರ್ವಾಹಕ ಇಂಜಿನಿಯರ್ ಹಾಗೂ ಹಳೇ ಜಲ ಮಂಡಳಿ ಕಚೇರಿ ಕೊಠಡಿಯನ್ನು ನೆಲಸಮಗೊಳಿಸಲಾಗಿದೆ. ಇಲ್ಲಿ ಜಲಮಂಡಳಿಯ ಕತೆ ಬೇರೆಯೇ ಆಗಿದೆ. ಇಲ್ಲಿ ನೀರಿನ ಸಮಸ್ಯೆ ಸಹ ಪರಿಹಾರವಾಗಿಲ್ಲ.

ಈಗಾಗಲೇ ಈ ಬಗ್ಗೆ, ಹುಬ್ಬಳ್ಳಿ – ಧಾರವಾಡ ನಗರ ಪಾಲಿಕೆ ವಿರೋಧ ಪಕ್ಷದ ನಾಯಕ ಕಮತಿ ಸಹ ಅಸಮಾಧಾನ ವ್ಯಕ್ತಪಡಿಸಿದರು.

ಆದರೆ, ಯಾವಾಗ ಕಾಮಗಾರಿ ಆರಂಭ ಆಗುತ್ತದೆ ಎನ್ನುವುದು ಇನ್ನೂ ಗೊಂದಲಮಯವಾಗಿದೆ.

## ವಿಪತ್ತುಗಳಿಗೆ ಹೆದರದೆ ಜಾಗರೂಕತೆ ವಹಿಸಿ : ಶ್ರೀನಿವಾಸ್

• **ಉದಯವಾಹಿನಿ, ವಡಗೇರಾ**

ಭೂಮಿ ಮೇಲೆ ವಿಪತ್ತುಗಳು ಹೆಚ್ಚಾಗಲು ಮನುಕುಲವೇ ಮುಖ್ಯ ಕಾರಣ ನಾಗರಿಕತೆ ಬೆಳೆದಂತೆ ಸಾರ್ವಜನಿಕರಲ್ಲಿ ಪ್ರಜ್ಞೆ ಕ್ಷೀಣಿಸುತ್ತಿದೆ ಎಂದು ತಹಶೀಲ್ದಾರ್ ಶ್ರೀನಿವಾಸ್ ಚಾಪೇಲ್ ಹೇಳಿದರು. ತಾಲ್ಲೂಕಿನ ಬೆಂಡೆಬೆಂಬಳಿ ಗ್ರಾಮದ ಸರಕಾರಿ ಪ್ರೌಢಶಾಲಾ ಆವರಣದಲ್ಲಿ ತಾಲ್ಲೂಕು ಆಡಳಿತ ಹಾಗೂ ಎನ್ ಡಿ ಆರ್ ಎಫ್ ತಂಡದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಸಮುದಾಯ ಜಾಗೃತಿ ಹಾಗೂ ಈಜುಗಾರರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಿಪತ್ತುಗಳು ಮಾನವನಿಂದಲೇ ಸೃಷ್ಟಿಯಾಗುತ್ತಿವೆ ಪರಿಸರ ಸಂರಕ್ಷಣೆ ಜಾಗೃತಿ ಕೆಲಸ ಆಗಬೇಕಾಗಿದೆ ಎಂದರು ವಿಪತ್ತುಗಳಿಗೆ ಜನರು ಹೆದರದೆ ಜಾಗೃತರಾಗಿರುವಂತೆ ಸಲಹೆ ನೀಡಿದರು.

ಎನ್ ಡಿ ಆರ್ ಎಫ್ ತಂಡದ ಅಧಿಕಾರಿ ನಿಂಗೇಗೌಡ ಮಾತನಾಡಿ ಆಕಸ್ಮಿಕ ವಿಪತ್ತು ಹಾಗೂ ಬೆಂಕಿ ಹವಗಡ ಆದಾಗ ಧೈರ್ಯಗೇಡದೆ ಅತ್ಯಂತ ಜಾಗರೂಕತೆಯಿಂದ ಪಾರಾಗುವ ಹಲವು ಉಪಾಯಗಳನ್ನು ತಿಳಿಸಿದರು. ಅಪಘಾತಗಳಾದಾಗ ನಿರ್ಲಕ್ಷ್ಯ ಮಾಡದೆ ಅಪಘಾತಗಳಾದಗ ಆ ವ್ಯಕ್ತಿಗೆ ಪ್ರಥಮ ಚಿಕಿತ್ಸೆ ಅತ್ಯಂತ ಮುಖ್ಯವಾಗಿದೆ



ಉದಯವಾಹಿನಿ ಚಿತ್ರ

ಪ್ರತಿಯೊಬ್ಬರೂ ಈಜು ಕಲಿಯಬೇಕು ಕಣ್ಣು ಮುಂದೆ ಏನಾದರೂ ಅವಘಡಗಳಾದಾಗ ಮೊದಲು ಅವರನ್ನು ಸಂರಕ್ಷಿಸುವ ಮನೋಭಾವನೆ ಪ್ರತಿಯೊಬ್ಬರಲ್ಲಿ ಬರಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಿಕಾರ್ಜುನ ಸಂಗ್ವಾರ, ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಮಹಮ್ಮದ್ ರಫೀಕ್ ತಾವರೆಗೇರಾ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಶಿಲ್ಪಾದೇವಿ. ಬಿ .ಐರೆಡ್ಡಿ ಗ್ರಾಮ ಆಡಳಿತ ಅಧಿಕಾರಿಗಳಾದ ಗೊಲ್ಲಾಳಪ್ಪ ಪೂಜಾರಿ, ಹನುಮಂತ್ ರಾಜು, ಬಸವರಾಜ್, ನಾಗರಾಜ್, ಸುಚಿತ್ರಾ ,ಸಹನಾ, ಹಾಗೂ ವಿವಿಧ ಇಲಾಖೆಯ ಸಿಬ್ಬಂದಿಗಳು ಮತ್ತು ಎನ್ ಡಿ ಆರ್ ಎಫ್ ಸಿಬ್ಬಂದಿ ವರ್ಗದವರು ಗ್ರಾಮ ಪಂಚಾಯತ್ ಸದಸ್ಯರು ಗ್ರಾಮಸ್ಥರು ವಿದ್ಯಾರ್ಥಿಗಳು ಉಪಸ್ಥಿತರದ್ದರು.

## ಜಲಜೀವನ್ ಮಿಷನ್ ಕಾಮಗಾರಿ: ತುರ್ತಾಗಿ ಪೂರ್ಣಗೊಳಿಸಿ

• **ಉದಯವಾಹಿನಿ, ಚಿತ್ರದುರ್ಗ**

ಜಿಲ್ಲೆಯಲ್ಲಿ ಜಲಜೀವನ್ ಮಿಷಯ್ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ತುರ್ತಾಗಿ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಗಳಲ್ಲಿ ಕೈಗೊಂಡಿರುವ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮನೆ ಮನೆಗೆ ಗಂಗೆ ಕಾಮಗಾರಿಗಳಿಗೆ ಕಾರ್ಯದೇಶ ನೀಡಿದರೂ, ಇದುವರೆಗೂ ಪ್ರಾರಂಭಿಸದ ಗುತ್ತಿಗೆದಾರರ ವಿರುದ್ಧ ಟೆಂಡರ್ ನಿಯಮಾನಸಾರ ಕಟ್ಟುನಿಟ್ಟಿನ ಸೂಕ್ತ ಕ್ರಮ ಕೈಗೊಳ್ಳಲು ಅಭಿಯಂತರರಿಗೆ ಸೂಚನೆ ನೀಡಿದರು ಅವರು, ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ರಚಿಸಬೇಕು.



ಉದಯವಾಹಿನಿ ಚಿತ್ರ

**ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಪ್ರಥಮಾದ್ಯತೆ ಮೇರೆಗೆ ಮನೆ ಮನೆಗೆ ಗಂಗೆ ಹಾಗೂ 128 ಶಾಲಾ ಮತ್ತು ಅಂಗನವಾಡಿ ಕೇಂದ್ರಗಳಿಗೆ ಹಾಗೂ 199 ಆಯುಷ್ಮಾನ್ ಆರೋಗ್ಯ ಕೇಂದ್ರಗಳಿಗೆ ಹತ್ತು ದಿನದೊಳಗೆ ನಳ ಸಂಪರ್ಕ ಕಲ್ಪಿಸಲು ಕ್ರಮವಹಿಸಬೇಕು –ಜಿ ಪಂ.ಸಿಇಓ**

ಗ್ರಾಮ ನೀರು ನೈರ್ಮಲ್ಯ ಸಮಿತಿಯ (ವಿಡಬ್ಲ್ಯೂಎಸ್‌ಸಿ) ಬ್ಯಾಂಕ್ ಖಾತೆಗಳನ್ನು ಕಡ್ಡಾಯವಾಗಿ ತೆರೆದಿರಬೇಕು ಎಂದು ಹೇಳಿದರು.

ಸ್ವಚ್ಛ ಭಾರತ್ ಯೋಜನೆಯಡಿ ಕೈಗೊಂಡಿರುವ ಬೂದು ನೀರು ನಿರ್ವಹಣೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಹಾಗೂ ಜಲಜೀವನ್ ಮಿಷನ್ ಯೋಜನೆ ಅಡಿಯಲ್ಲಿ ಕೈಗೊಂಡಿರುವ ಮಾಹಿತಿ ನಾಮ ಫಲಕಗಳನ್ನು ತುರ್ತಾಗಿ ಅಳವಡಿಸಿ, ಪ್ರಗತಿ ಸಾಧಿಸಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ನಿರೂಪಣಾಧಿಕಾರಿ ವಿಜಯ ಕುಮಾರ್, ಜಿಲ್ಲೆಯ 6 ತಾಲ್ಲೂಕುಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು, ಡಿಟಿಎಸ್ ಯು ಸಮಾಲೋಚಕರು, ವಿಭಾಗ ಕಚೇರಿಯ ಶಾಖಾ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

## ಬೀದಿ ಬದಿ ವ್ಯಾಪಾರಸ್ಥರಿಗೆ ಅರಿವು, ಜಾಗೃತಿ ಮೂಡಿಸುವ ಕಾರ್ಯಕ್ರಮ

• **ಉದಯವಾಹಿನಿ, ಯಾದಗಿರಿ**

ರಸ್ತೆ ಬದಿ ವ್ಯಾಪಾರಸ್ಥರು, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ವ್ಯಾಪಾರ ವಹಿವಾಟು ನಡೆಸಿ ಸ್ವಚ್ಛತೆಗೆ ಆದ್ಯತೆ ನೀಡಬೇಕು, ನಮ್ಮ ಯಾದಗಿರಿ ನಗರ ಸುಂದರವಾಗಿಸಬೇಕು. ಎಲ್ಲರೂ ಆರೋಗ್ಯಕರವಾಗಿರಬೇಕು ಎಂಬುದು ನಮ್ಮ ಇಚ್ಛಾಶಕ್ತಿಯೂ ಆಗಿದೆ ಎಲ್ಲರೂ ನಗರಸಭೆಗೆ ಕೈಜೋಡಿಸಿ ಸಹಕರಿಸಬೇಕು ಎಂದು ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪೂರ ಅವರು ಮನವಿ ಮಾಡಿದರು.

ನಗರಸಭೆ, ದೀನ್ ದಯಾಳ್ ಅಂತ್ಯೋದಯ ರಾಷ್ಟ್ರೀಯ ಜೀವನೋಪಾಯ ಇಲಾಖೆ ( ಡೇ- ನಲ್ಮಾ ಶಾಖೆ) ವತಿಯಿಂದ ನಗರದ ವಾಲ್ಮೀಕಿ ಭವನದ ಸಭಾಂಗಣದಲ್ಲಿ ಬೀದಿ ವ್ಯಾಪಾರಸ್ಥರಿಗೆ ಅರಿವು ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬೀದಿಬದಿ ವ್ಯಾಪಾರಿಗಳಿಂದ ಟ್ರಾಫಿಕ್ ಸಮಸ್ಯೆಯಾಗಿ ಪ್ರಮುಖ ಬೀದಿಗಳಲ್ಲಿ ಮತ್ತು ಇತರೆ ಕಡೆ ಸಣ್ಣಪುಟ್ಟ ಅಪಘಾತಗಳು ಸಂಭವಿಸುತ್ತಿವೆ ಎಂದು ಜನರು ನಗರ ಸಭೆಗೆ ದೂರು ಸಲ್ಲಿಸುತ್ತಿದ್ದಾರೆ. ಪಾದಚಾರಿಗಳಿಗೆ ಮತ್ತು



ಉದಯವಾಹಿನಿ ಚಿತ್ರ

ವಾಹನ ಚಾಲಕರಿಗೆ ಸರಳ ಸಂಚಾರಕ್ಕೆ ಅನೂಕೂಲ ಮಾಡಿಕೊಟ್ಟರೆ ಅಪಘಾತಗಳು ಸಂಭವಿಸುವುದು ನಿಲ್ಲುತ್ತದೆ ಹೀಗಾಗಿ ನಗರಸಭೆ ಸಿಬ್ಬಂದಿ ಮತ್ತು ಪೊಲೀಸ್ ಇಲಾಖೆಯೊಂದಿಗೆ ಎಲ್ಲರೂ ಸಹಕಾರ ನೀಡಬೇಕು. ಬೀದಿ ಬದಿ ವ್ಯಾಪಾರಿಗಳು ನಮ್ಮ ಕುಟುಂಬವಿದ್ದಂತೆ, ಅಲ್ಲದೇ ವ್ಯಾಪಾರಿಗಳು ಯಾರಿಗೂ ದುಡ್ಡು ಕೊಡುವ ಅವಶ್ಯಕತೆ ಇರುವುದಿಲ್ಲ. ಒಂದು ವೇಳೆ ಯಾರಾದರೂ ದುಡ್ಡು ತೆಗೆದುಕೊಂಡರೆ ನಮ್ಮ ಗಮನಕ್ಕೆ ತರಬೇಕು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು. ಪ್ಲಾಸ್ಟಿಕ್ ಮುಕ್ತ ನಗರವಾಗಿಸಬೇಕು ಮತ್ತು ಮನೆಯ ಸುತ್ತಮುತ್ತಲು ಸ್ವಚ್ಛತೆ ಕಾಪಾಡಿಕೊಳ್ಳುವುದನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದರು. ಈ ಸಂದರ್ಭದಲ್ಲಿ ನಗರಸಭೆಯ ಸಮುದಾಯ ಸಂಘಟನಾಧಿಕಾರಿ ಭೀಮಣ್ಣ ಕೆ ವೈದ್ಯ ಅವರು ಪ್ರಾಸ್ತಾವಿಕ ಮಾತನಾಡಿದರು. ನಗರಸಭೆ ಉಪಾಧ್ಯಕ್ಷೆ ರುಖಿಯಾಬೇಗಂ, ಮಾಜಿ ಉಪಾಧ್ಯಕ್ಷೆ ಪ್ರಭಾವತಿ ಕಲಾಲ್, ನಾಮನಿರ್ದೇಶಿತ ಸದಸ್ಯ ವೆಂಕಟೇಶ, ಪೊಲೀಸ್ ಇಲಾಖೆಯ ರವಿ ರಾಠೋಡ್, ಆರೋಗ್ಯ ಇಲಾಖೆಯ ಡಾ.ಅನಿಲಕುಮಾರ, ಸಿ ಆರ್ ಪಿ ಗಳಾದ ಸಾಬಮ್ಮ, ಅವ್ವಮ್ಮ, ಪ್ರೇಮಾ ಸೇರಿದಂತೆ ಬೀದಿ ಬದಿ ವ್ಯಾಪಾರಸ್ಥರು ಉಪಸ್ಥಿತರಿದ್ದರು.

**ಪಿ .ಎಂ. ಸ್ವ-ನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ ಮೊದಲನೆ ಹಂತದಲ್ಲಿ 10 ಸಾವಿರ ರೂಗಳಂತೆ ಒಟ್ಟು 1358 ಫಲಾನುಭವಿಗಳಿಗೆ, ಎರಡನೇ ಹಂತದಲ್ಲಿ 20 ಸಾವಿರ ರೂಗಳಂತೆ 636 ಫಲಾನುಭವಿಗಳಿಗೆ, ಮೂರನೇ ಹಂತದಲ್ಲಿ 50 ಸಾವಿರ ರೂಗಳಂತೆ 213 ಫಲಾನುಭವಿಗಳಿಗೆ ಸಾಲ ಕೊಡಿಸಲಾಗಿದೆ**

**–ಕು.ಲಲಿತಾ ಅನಪೂರ, ನಗರಸಭೆ ಅಧ್ಯಕ್ಷೆ**

## ಕಾರ್ಖಾನೆ ಜಮೀನು ಹರಾಜಿಗೆ ವಿರೋಧ

• **ಉದಯವಾಹಿನಿ, ಬೀದರ್**

ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಗೆ (ಬಿಎಸ್‌ಎಸ್‌ಕೆ) ಸೇರಿದ ಜಮೀನು ಹರಾಜಿಗೆ ಮುಂದಾಗಿರುವ ಬೀದರ್ ಡಿಸಿಸಿ ಬ್ಯಾಂಕಿನ ಕ್ರಮವನ್ನು ವಿರೋಧಿಸಿ ಸಿಪಿಐ ನೇತೃತ್ವದಲ್ಲಿ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು. ಜಿಲ್ಲೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ರಾಲಿ ನಡೆಸಲಾಯಿತು. ಬೆಂಗಳೂರು ಗ್ರಾಮಾಂತರ ಸಿಪಿಐ, ಎಐಕೆಎಸ್ ಸಂಘಟನೆ ಹಾಗೂ ಕಾರ್ಖಾನೆಯ ನೌಕರರು ರಾಲಿಯಲ್ಲಿ ಪಾಲ್ಗೊಂಡಿದ್ದರು. ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಹೆಸರಿಗೆ ಬರೆದ ಮನವಿ ಪತ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರಿಗೆ ಸಲ್ಲಿಸಿದರು.

ಬೀದರ್ ಬಿಎಸ್‌ಎಸ್‌ಕೆ ಜಮೀನಿನ ಹರಾಜು ಪ್ರಕ್ರಿಯೆ ಕೂಡಲೇ ನಿಲ್ಲಿಸಬೇಕು. ಆಡಳಿತ ಮಂಡಳಿಯನ್ನು ವಜಾಗೊಳಿಸಿ ಹಣ ದುರ್ಬಳಕೆ ಮಾಡಿಕೊಂಡಿರುವುದಕ್ಕೆ ಅಪರಾಧಿಕ ಪ್ರಕರಣ ದಾಖಲಿಸಬೇಕು. ಕಾರ್ಖಾನೆ ನೌಕರರ 35 ಕೋಟಿಗೂ ಅಧಿಕ ಸಂಬಳ ಪಾವತಿಸಬೇಕು ಎಂದು ಆಗ್ರಹಿಸಿದರು. ಬಿಎಸ್‌ಎಸ್‌ಕೆ ಈ ಭಾಗದ ರೈತರ ಜೀವನಾಡಿ. ಜಿಲ್ಲೆಯ ಸಾವಿರಾರು ಕುಟುಂಬಗಳು ಅದನ್ನು ಅವಲಂಬಿಸಿವೆ.

ಆಡಳಿತ ಮಂಡಳಿಯ ದುರಾಡಳಿತದಿಂದ ಸರ್ಕಾರದ ಅನುಮತಿ ಇಲ್ಲದೇ ಕಾರ್ಖಾನೆಯನ್ನು ಮುಚ್ಚಲಾಗಿದೆ. ರೈತರ ಷೇರು ಹಣದ ಬಗ್ಗೆ ಹಾಲಿ ಆಡಳಿತ ಮಂಡಳಿ ನಿರ್ಲಕ್ಷ್ಯ ತೋರುತ್ತಿದೆ. 2022ರಿಂದ ಆಡಳಿತ ಮಂಡಳಿಯ ದುರಾಡಳಿತದಿಂದ ಕಾರ್ಮಿಕರೂ ಬೀದಿ ಪಾಲಾಗಿದ್ದಾರೆ ಎಂದು ಆರೋಪಿಸಿದರು.

## ಕಲಬುರಗಿ ಸೆಂಟ್ರಲ್ ಜೈಲ್ ಅಧೀಕ್ಷಕಿ ಕಾರು ಸ್ಫೋಟಿಸುವ ಬೆದರಿಕೆ

• **ಉದಯವಾಹಿನಿ, ಕಲಬುರಗಿ**

ಕಲಬುರಗಿ ಸೆಂಟ್ರಲ್ ಜೈಲು ಮುಖ್ಯ ಅಧೀಕ್ಷಕಿ ಅನಿತಾ ಅವರ ಕಾರು ಸ್ಫೋಟಿಸುವುದಾಗಿ ಅನಾಮಧೇಯ ವ್ಯಕ್ತಿಯಿಂದ ಆಡಿಯೋ ಸಂದೇಶ ಬಂದಿರುವುದು ಆತಂಕಕ್ಕೆ ಕಾರಣವಾಗಿದೆ. ಕಾರು ಸ್ಫೋಟಿಸುವ ಮೂಲಕ ಅನಿತಾ ಹತ್ಯೆಗೆ ಸಂಚು ಹೂಡಲಾಗಿದೆಯೇ ಎಂಬ ಅನುಮಾನ ಇದೀಗ ಬಲವಾಗಿದೆ. ಅಪರಿಚಿತ ವ್ಯಕ್ತಿಯೊಬ್ಬ ತನ್ನ ಕಾರನ್ನು ಸ್ಫೋಟಿಸುವುದಾಗಿ ಪೊಲೀಸ್ ಇನ್ಸ್‌ಪೆಕ್ಟರ್ ಮೂಲಕ ಆಡಿಯೋ ಸಂದೇಶ ರವಾನಿಸಿದ್ದಾನೆ ಎಂದು ಆರ್.ಅನಿತಾ ಗುರುವಾರ ತಿಳಿಸಿದ್ದಾರೆ. ಆದರೆ, ಈ ಬಗ್ಗೆ ಯಾವುದೇ ದೂರು ಬಂದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಯಾರೋ ನನ್ನ ಕಾರನ್ನು ಸ್ಫೋಟಿಸುವುದಾಗಿ ಪೊಲೀಸ್ ಇನ್ಸ್‌ಪೆಕ್ಟರ್‌ಗೆ ಆಡಿಯೋ ಸಂದೇಶ ಕಳುಹಿಸಿದ್ದಾರೆ. ನನಗೆ ವೈಯಕ್ತಿಕವಾಗಿ ಇದುವರೆಗೆ ಅಂತಹ ಯಾವುದೇ ಸಂದೇಶ ಬಂದಿಲ್ಲ. ಆದ್ದರಿಂದ ನಾನು ಯಾವುದೇ ಪೊಲೀಸ್ ದೂರು ನೀಡುವುದಿಲ್ಲ, ಬೆದರಿಕೆಯ ನಂತರ, ತಾನು ಈಗ ಇನ್ನೂ ಹೆಚ್ಚು ಜಾಗರೂಕರಾಗಿರುತ್ತೇನೆ ಎಂದು ಅನಿತಾ ಹೇಳಿದರು.

ಕಳೆದ ತಿಂಗಳು, ಅನಿತಾ ಅವರು ಜೈಲಿನ ಮುಖ್ಯ ಅಧೀಕ್ಷಕಿಯಾಗಿ ಅಧಿಕಾರ ವಹಿಸಿಕೊಂಡ ನಂತರ, ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಮೂವರು ಕೈದಿಗಳು ವಿಶೇಷ ಸೌಲಭ್ಯ ಪಡೆಯುತ್ತಿರುವ ಛಾಯಾಚಿತ್ರಗಳು ಮತ್ತು ವೀಡಿಯೊ ತುಣುಕುಗಳು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ನಂತರ ದಾಳಿ ನಡೆಸಲಾಯಿತು. ಕೈದಿಗಳಿಂದ ಸೆಲ್ ಫೋನ್, ಗುಟ್ಕಾ, ಸಿಗರೇಟ್ ಪ್ಯಾಕೆಟ್‌ಗಳನ್ನು ಮತ್ತು ಬೀಡಿಗಳನ್ನು ವಶಪಡಿಸಿಕೊಳ್ಳಲಾಗಿತ್ತು.

## ಸಿಟಿ ಕ್ಲಬ್ ಚುನಾವಣೆ: ರಾಜಕಾರಣಿಗಳ ರಂಗಪ್ರವೇಶ

• **ಉದಯವಾಹಿನಿ, ಚಿತ್ರದುರ್ಗ**

ನ.30ರಂದು ನಡೆಯಲಿರುವ ನಗರದ ಪ್ರತಿಷ್ಠಿತ ಸಿಟಿ ಇನ್‌ಸ್ಟಿಟ್ಯೂಟ್ ಆಡಳಿತ ಮಂಡಳಿ ಚುನಾವಣೆಗೆ ರಾಜಕಾರಣಿಗಳು ರಂಗಪ್ರವೇಶ ಮಾಡಿದ್ದಾರೆ. ತಮ್ಮ ಬೆಂಬಲಿಗರನ್ನು ಗೆಲ್ಲಿಸಿಕೊಳ್ಳಲು ಅಬ್ಬರದ ಪ್ರಚಾರ ನಡೆಸುತ್ತಿದ್ದು ಕುತೂಹಲ ಮೂಡಿಸಿದೆ. ಉಪಾಧ್ಯಕ್ಷ, ಕಾರ್ಯದರ್ಶಿ ಹಾಗೂ 7 ನಿರ್ದೇಶಕ ಸ್ಥಾನಗಳಿಗೆ ಮತದಾನ ನಿಗದಿಯಾಗಿದೆ. ಸದ್ಯ 456 ಜನ ಮತದಾನದ ಹಕ್ಕು ಪಡೆದಿದ್ದಾರೆ. ಒಂದೆಡೆ ಅಭ್ಯರ್ಥಿಗಳು ಅಬ್ಬರದ ಪ್ರಚಾರ ನಡೆಸುತ್ತಿದ್ದರೆ ಇನ್ನೊಂದೆಡೆ ಮತದಾನದಿಂದ ಅನರ್ಹಗೊಂಡವರು ಮತದಾನದ ಹಕ್ಕು ಪಡೆಯಲು ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಮತದಾರರನ್ನು ಸೆಳೆಯುವ ಕಾರ್ಯದಲ್ಲಿ ಸಚಿವರು, ಶಾಸಕರು, ಮಾಜಿ ಶಾಸಕರು, ವಿವಿಧ ಪಕ್ಷಗಳ ಮುಖಂಡರು ನೇರವಾಗಿ ಪಾಲ್ಗೊಂಡಿದ್ದಾರೆ. 2 ತಂಡಗಳ ನಡುವೆ ಹಣಾಹಣಿ ಏರ್ಪಟ್ಟಿದ್ದು ಸಭೆ, ಸಮಾರಂಭ, ಔತಣಕೂಟಗಳ ಮೂಲಕ ಮತದಾರರನ್ನು ಸೆಳೆಯುತ್ತಿದ್ದಾರೆ. ಅಭ್ಯರ್ಥಿಗಳು ಮತದಾರರಿಗೆ ಹಣ ಹಾಗೂ ದುಬಾರಿ ಉಡುಗೊರೆಗಳನ್ನೂ ನೀಡುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಸಿರಿಧಾನ್ಯ ಜಾಗೃತಿ ನಡಿಗೆಗೆ ಚಾಲನೆ

• **ಉದಯವಾಹಿನಿ ಕೊಪ್ಪಳ**

ಕೃಷಿ ಇಲಾಖೆ ವತಿಯಿಂದ ನಗರದಲ್ಲಿ ಸಿರಿಧಾನ್ಯ ನಡಿಗೆ ಮೂಲಕ ಪಾರಂಪರಿಕ ಆಹಾರ ಪದ್ಧತಿಗಳ ಅರಿವು ಮೂಡಿಸಲಾಯಿತು. ಗವಿಮಠದ ಆವರಣದಲ್ಲಿ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿ ನಡಿಗೆಗೆ ಚಾಲನೆ ನೀಡಿದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್, ಸಹಾಯಕ ಕೃಷಿ ನಿರ್ದೇಶಕ ಜೀವನಸಾಬ್ ಸೇರಿದಂತೆ ಕೃಷಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಪಾಲ್ಗೊಂಡಿದ್ದರು. ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಇದ್ದರು. ಗವಿಮಠ ಆವರಣದಿಂದ ಆರಂಭವಾದ ಸಿರಿಧಾನ್ಯ ನಡಿಗೆಯು ಗಡಿಯಾರ ಕಂಬ ಮತ್ತು ಜವಾಹರ ರಸ್ತೆ ಮಾರ್ಗವಾಗಿ ಅಶೋಕ ಸರ್ಕಲ್ ತನಕ ಸಾಗಿತು. ಈ ವೇಳೆ ನಮ್ಮ ನಡಿಗೆ ಸಿರಿಧಾನ್ಯಗಳ ಕಡೆಗೆ, ಸಿರಿಧಾನ್ಯ ಸಿಂಗಾರ ಆರೋಗ್ಯ ಬಂಗಾರ, ಸಿರಿಧಾನ್ಯಗಳ ತಾಕತ್ತು ಸಕಲ ಪೌಷ್ಠಿಕಾಂಶಗಳ ಸಂಪತ್ತು, ಸಿರಿಧಾನ್ಯ ಬೆಳೆ ಇರಲಿ ಪ್ರೋತ್ಸಾಹ ಧನ ತರಲಿ, ಬರಗಾರದಲ್ಲೂ ಬಂಗಾರ ಸಿರಿಧಾನ್ಯ, ಸಿರಿಧಾನ್ಯ ಬಳಸಿರಿ ಆರೋಗ್ಯದಲ್ಲಿ ಸಿರಿವಂತರಾಗಿ, ಸಜ್ಜೆ ತಿಂದವರು ಉತ್ಸಾಹದ ಕಹಳೆ ಊದುವರು ಎನ್ನುವ ಫಲಕಗಳನ್ನು ಪ್ರದರ್ಶಿಸಲಾಯಿತು.

## ಮಂಗನ ಕಾಯಿಲೆ ನಿಯಂತ್ರಣ: ಬದ್ಧತೆ ತೋರಿ

• **ಉದಯವಾಹಿನಿ ಸಾಗರ**

ಮಲೆನಾಡು ಪ್ರದೇಶದಲ್ಲಿ ಮಂಗನ ಕಾಯಿಲೆ ಹರಡದಂತೆ ತಡೆಗಟ್ಟುವ, ರೋಗಿಗಳಿಗೆ ಸಕಾಲದಲ್ಲಿ ಚಿಕಿತ್ಸೆ ನೀಡುವ ವಿಷಯದಲ್ಲಿ ವೈದ್ಯರು ಬದ್ಧತೆ ತೋರಬೇಕು' ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಕಿವಿಮಾತು ಹೇಳಿದರು. ಇಲ್ಲಿನ ಪ್ರವಾಸಿ ಮಂದಿರದಲ್ಲಿ ನಡೆದ ಮಂಗನ ಕಾಯಿಲೆ ತಡೆಗಟ್ಟುವಿಕೆ ಹಾಗೂ ನಿಯಂತ್ರಣ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರತಿ ವರ್ಷ ಡಿಸೆಂಬರ್‌ನಿಂದ ಮೇ ಅಂತ್ಯದವರೆಗೂ ಮಂಗನ ಕಾಯಿಲೆ ಹರಡುವ ಅವಧಿ. ಪ್ರಸಕ್ತ ವರ್ಷ ಮಳೆಗಾಲದಲ್ಲಿ ಅಧಿಕ ಪ್ರಮಾಣದಲ್ಲಿ ಮಳೆಯಾಗಿದ್ದು, ಬರಗಾಲ ಇಲ್ಲದಿರುವ ಕಾರಣ ಸತ್ತ ಮಂಗಗಳ ಉಣುಗುಗಳಿಂದ ಕಾಯಿಲೆಯ ವೈರಸ್ ಹರಡುವ ಸಾಧ್ಯತೆ ಕಡಿಮೆ ಇದೆ. ಹಾಗೆಂದು ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ನಿರ್ಲಕ್ಷ್ಯ ಮಾಡದೆ ರೋಗ ತಡೆಯಲು ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು' ಎಂದು ಅವರು ಸೂಚಿಸಿದರು. 'ಗ್ರಾಮೀಣ ಭಾಗದಲ್ಲಿ ಅರಣ್ಯವನ್ನು ಹಾದು ಹೋಗುವ ಶಾಲಾ ವಿದ್ಯಾರ್ಥಿಗಳು ಇರುವ ಪ್ರದೇಶವನ್ನು ಗುರುತಿಸಿ ವಿಶೇಷ ನಿಗಾ ವಹಿಸಬೇಕು. ಅಂತಹ ಭಾಗದ ಹತ್ತಿರದ ಶಾಲೆಗಳಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಬೇಕು' ಎಂದು ತಿಳಿಸಿದರು.

## ಸೇತುವೆ ಮೇಲಿಂದ ಕೃಷ್ಣಾ ನದಿಗೆ ಬಿದ್ದ ಕಾರು : ಸ್ಥಳದಲ್ಲೇ ಮೂವರು ದುರ್ಮರಣ

• **ಉದಯವಾಹಿನಿ ಬೆಳಗಾವಿ**

ನಿಯಂತ್ರಣ ತಪ್ಪಿ ಕಾರು ಒಂದು ಸೇತುವೆ ಮೇಲಿಂದ ಕೃಷ್ಣಾ ನದಿಗೆ ಬಿದ್ದ ಪರಿಣಾಮ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಮೂವರು ಸಾವನಪ್ಪಿದ್ದರೆ, ಉಳಿದ ಮೂವರಿಗೆ ಗಾಯಗಳಾಗಿರುವ ಘಟನೆ ಕೊಲ್ಹಾಪುರ-ಸಾಂಗ್ಲಿ ಹೆದ್ದಾರಿಯ ಅಂಕಲಿ ಸೇತುವೆ ಬಳಿ ಈ ಒಂದು ಘಟನೆ ನಡೆದಿದೆ. ಈ ಒಂದು ಅಪಘಾತದಲ್ಲಿ ಮೃತಪಟ್ಟವರನ್ನು ಪ್ರಸಾದ್ ಭಾಲಚಂದ್ರ ಖೇಡೇಕರ್ (35) ಅವರ ಪತ್ನಿ ಪ್ರೇರಣಾ ಪ್ರಸಾದ್ ಖೇಡೇಕರ್ ಹಾಗೂ ವೈಷ್ಣವಿ, ಸಂತೋಷ್ ನಾರ್ವೇಕರ್ ಎಂದು ಗುರುತಿಸಲಾಗಿದೆ.

ವ್ಯವಹಾರ ಕರ್ನಾಟಕ ಇನ್ನು ಕಾರಿನಲ್ಲಿದ್ದ ಉಳಿದವರಿಗೆ ಗಂಭೀರವಾಗಿ ಗಾಯಗಳಾಗಿದ್ದು, ಸಮರ್ಜಿತ್ ಪ್ರಸಾದ ಖೇಡೇಕರ್ (7) ವರದ ಸಂತೋಷ್ ನಾರ್ವೇಕರ್ (19) ಮತ್ತು ಸಾಕ್ಷಿ ಸಂತೋಷ್ ನಾರ್ವೇಕರ್ (42) ಎಂದು ಗುರುತಿಸಲಾಗಿದೆ. ಘಟನಾ ಸ್ಥಳಕ್ಕೆ ಜೈಸಿಂಗ್ ಪುರ ಪೊಲೀಸ್ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

# ಸರ್ಕಾರದ ಗಮನ ಸೆಳೆದ 'ಸಿಇಟಿ ಸಕ್ಷಮ್' ಕಾರ್ಯಕ್ರಮ

## • ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ 'ಸಿಇಟಿ ಸಕ್ಷಮ್' ಕಾರ್ಯಕ್ರಮದ ರೂವಾರಿ

• **ಉದಯವಾಹಿನಿ, ಬೆಳಗಾವಿ**

ಬಡ ಕುಟುಂಬಗಳ ಹಾಗೂ ಗ್ರಾಮೀಣ ಪ್ರದೇಶಗಳ ಸಾವಿರಾರು ವಿದ್ಯಾರ್ಥಿಗಳನ್ನು ಸಿಇಟಿ ಪರೀಕ್ಷೆ ಎದುರಿಸಲು ಸಶಕ್ತಗೊಳಿಸುವ 'ಸಿಇಟಿ ಸಕ್ಷಮ್' ಕಾರ್ಯಕ್ರಮ ಸರ್ಕಾರದ ಗಮನ ಸೆಳೆದಿದೆ. ಈ ಯೋಜನೆಗೆ 10 ಲಕ್ಷ ರೂಪಾಯಿ ಅನುದಾನ ಸಿಕ್ಕಿದೆ. ಸದ್ಯ ಬೆಳಗಾವಿ ಜಿಲ್ಲೆಯಲ್ಲಿ ಮಾತ್ರ ಸರ್ಕಾರಿ ಕಾಲೇಜು ವಿದ್ಯಾರ್ಥಿಗಳಿಗೆ ಈ ಕಾರ್ಯಕ್ರಮದಡಿ ಪ್ರಾಯೋಗಿಕ ತರಬೇತಿಯನ್ನು ನೀಡಲಾಗುತ್ತಿದೆ. ಬೆಳಗಾವಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು 'ಸಿಇಟಿ ಸಕ್ಷಮ್' ಕಾರ್ಯಕ್ರಮದ ರೂವಾರಿ.


ಈ ವಿನೂತನ ಮತ್ತು ಸೃಜನಾತ್ಮಕ ಕಾರ್ಯಕ್ರಮಕ್ಕೆ ರಾಜ್ಯ ಸರ್ಕಾರದ ಮೆಚ್ಚುಗೆ ಸಿಕ್ಕಿದೆ, ಜೊತೆಗೆ ಚಾಲೆಂಜ್ ಫಂಡ್ ಯೋಜನೆಯಡಿ 10 ಲಕ್ಷ ರೂಪಾಯಿ ಅನುದಾನ ಕೂಡ ಲಭಿಸಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವ್ಯಾಸಂಗ ಮಾಡುತ್ತಿರುವ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಮತ್ತು ಆರ್ಥಿಕವಾಗಿ ದುರ್ಬಲರಾಗಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಉನ್ನತಿಗಾಗಿ ಸಿಇಟಿ ಸಕ್ಷಮ್ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗಿದೆ. ಈ ಕಾರ್ಯಕ್ರಮಕ್ಕೆ ವಿದ್ಯಾರ್ಥಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

**ಕಾರ್ಯಕ್ರಮಕ್ಕೆ ರಾಜ್ಯ ಸರ್ಕಾರದ ಮೆಚ್ಚುಗೆ**

**ಏನಿದು ಸಿಇಟಿ ಸಕ್ಷಮ್ ಕಾರ್ಯಕ್ರಮ?:** ಬೆಳಗಾವಿ ಜಿಲ್ಲೆಯ ಎಲ್ಲಾ ಸರ್ಕಾರಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳಲ್ಲಿ ಕಲಿಯುತ್ತಿರುವ ಬಡ ಕುಟುಂಬಗಳ ಹಾಗೂ ಗ್ರಾಮೀಣ ಪ್ರದೇಶಗಳ ಸಾವಿರಾರು ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆ ಎದುರಿಸಲು ಸಶಕ್ತರಾಗುವಂತೆ ಮಾಡಲು ಹೊಸ, ಪ್ರಯೋಗಾತ್ಮಕ ಕಾರ್ಯಕ್ರಮ 'ಸಿಇಟಿ ಸಕ್ಷಮ್' ಅನ್ನು ಬೆಳಗಾವಿ ಜಿಲ್ಲಾ ಪಂಚಾಯತಿ ಸಿಇಒ ರಾಹುಲ್ ಶಿಂಧೆ ಆರಂಭಿಸಿದ್ದಾರೆ.

ಜಿಲ್ಲಾ ಪಂಚಾಯತಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಈ ವಿನೂತನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ವಿಜ್ಞಾನ ಪಿಯು ಕಾಲೇಜುಗಳ ಪ್ರಥಮ ಪಿಯುಸಿ



ಉದಯವಾಹಿನಿ ಚಿತ್ರ

ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳ 2ನೇ ಶನಿವಾರ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ 4ನೇ ಶನಿವಾರ ಸಿದ್ಧತಾ ಪರೀಕ್ಷೆಗಳನ್ನು ನಡೆಸಲಾಗುತ್ತದೆ.

ಈ ಮೂಲಕ ಸಿಇಟಿ-ನೀಟ್ ಪರೀಕ್ಷೆಗಳಿಗೆ ಅವರನ್ನು ಸಜ್ಜುಗೊಳಿಸುವುದು ಸಿಇಟಿ-ಸಕ್ಷಮ್ ಕಾರ್ಯಕ್ರಮವಾಗಿದೆ. ಇಂತಹ ಪ್ರಯೋಗಾತ್ಮಕ ಮತ್ತು ಸೃಜನಾತ್ಮಕ ಕಾರ್ಯಕ್ರಮದಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಅನುಕೂಲವಾಗುವಂತೆ ಅಗತ್ಯ ಅನುದಾನವನ್ನು ಒದಗಿಸಲು ಸರ್ಕಾರ ಚಾಲೆಂಜ್ ಫಂಡ್ ಸ್ಥಾಪಿಸಿರುತ್ತದೆ. ಇದರ ಮೂಲಕ ಈಗ ಕಾರ್ಯಕ್ರಮಕ್ಕೆ ಅನುದಾನ ಸಿಕ್ಕಿದೆ.

ಸಿಇಟಿ-ಸಕ್ಷಮ್ ವಿನೂತನ ಕಾರ್ಯಕ್ರಮದ ಮೂಲಕ ನಡೆಸಲಾಗುವ ಸಿದ್ಧತಾ ಪರೀಕ್ಷೆಗಳು ವಿದ್ಯಾರ್ಥಿಗಳ ಸಿಇಟಿ/ ನೀಟ್ ಪರೀಕ್ಷೆಗಳನ್ನು ಎದುರಿಸಲು ಸಾಮರ್ಥ್ಯ ಬಲಪಡಿಸುವುದಲ್ಲದೇ, ಭವಿಷ್ಯದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪರಿಣಿತಿಯನ್ನು ಮತ್ತು ಮಾನಸಿಕ ಸ್ಥೈರ್ಯವನ್ನು ಹೆಚ್ಚಿಸಲು ಸಹಕಾರಿಯಾಗಲಿವೆ. ಶಿವಮೊಗ್ಗ, ವಿಜಯಪುರ ಸೇರಿದಂತೆ ವಿವಿಧ ಜಿಲ್ಲೆಗಳ ಅಧಿಕಾರಿಗಳ ತಂಡಗಳು ಬೆಳಗಾವಿಗೆ ಭೇಟಿ ನೀಡಿ 'ಸಿಇಟಿ-ಸಕ್ಷಮ್' ಕಾರ್ಯಕ್ರಮದ ಮಾದರಿಯ ಬಗ್ಗೆ ಮಾಹಿತಿಯನ್ನು ಪಡೆದುಕೊಂಡಿರುತ್ತಾರೆ.

**ಕಟ್ಟಡ ತೆರವು ಕಾರ್ಯ ಬಾಕಿ**

**ಈ ಸಾಫ್ಟ್‌ವೇರ್ ಮೂಲಕ ಪ್ರತಿಯೊಂದು ವಿದ್ಯಾರ್ಥಿಯ ಪರ್ಫಾಮೆನ್ಸ್ ಒಂದು ಕಡೆ ಸಂಗ್ರಹಿಸಿ ಅದನ್ನು ವಿಶ್ಲೇಷಣೆಗೊಳಪಡಿಸುವ ಯೋಚನೆ ಇದೆ. ಜಿಲ್ಲಾ ಪಂಚಾಯತಿ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ಉಪನ್ಯಾಸಕರು ಸಿಇಟಿ-ಸಕ್ಷಮ್ ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ಜಾರಿಗೊಳಿಸುವ ಮೂಲಕ ಅದನ್ನು ಯಶಸ್ವಿಗೊಳಿಸುತ್ತಿದ್ದು, ಅವರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ತಿಳಿಸಿದ್ದಾರೆ.**

**ಈ ಪರಿಣಾಮಕಾರಿ ಕಾರ್ಯಕ್ರಮ ಜಾರಿಗೊಳಿಸಲು ಈ ಚಾಲೆಂಜ್ ಫಂಡ್ ಯೋಜನೆಯಡಿ ಸರ್ಕಾರವು 10 ಲಕ್ಷ ರೂಪಾಯಿ ಅನುದಾನವನ್ನು ಬಿಡುಗಡೆಗೊಳಿಸಿದೆ ಎಂದು ಸಿಇಒ ರಾಹುಲ್ ಶಿಂಧೆ ತಿಳಿಸಿದ್ದಾರೆ. ತಮ್ಮ ಕನಸಿನ ಯೋಜನೆಯಾಗಿರುವ 'ಸಿಇಟಿ-ಸಕ್ಷಮ್' ಅನುಷ್ಠಾನಕ್ಕೆ ಸರಕಾರವು ಅನುದಾನ ನೀಡಿರುವುದಕ್ಕೆ ಸಂತಸ ವ್ಯಕ್ತಪಡಿಸಿರುವ ಅವರು, ಮುಂಬರುವ ದಿನಗಳಲ್ಲಿ ಸಿಇಟಿ-ಸಕ್ಷಮ್ ಸಮರ್ಪಕ ಅನುಷ್ಠಾನ, ವಿಶ್ಲೇಷಣೆ ಹಾಗೂ ದತ್ತಾಂಶ ಸಂಗ್ರಹಕ್ಕೆ ವಿಶೇಷ ಸಾಫ್ಟ್‌ವೇರ್ ರೂಪಿಸಲಾಗುವುದು**

**–ಸಿಇಒ ರಾಹುಲ್ ಶಿಂಧೆ**

# ನಟಿ ದೀಪಿಕಾ ದಾಸ್, ತಾಯಿಗೆ ಬೆದರಿಕೆ



ನಿಮ್ಮ ಹೆಸರಿಗೆ ಕಳಂಕ ತರ್ತೀನಿ

ಕಿರುತೆರೆ ನಟಿ ದೀಪಿಕಾ ದಾಸ್ ತಾಯಿಗೆ ವ್ಯಕ್ತಿಯೋರ್ವನಿಂದ ಬೆದರಿಕೆ ಕರೆ ಬಂದಿದೆ. ಮಗಳು ಮತ್ತು ಅಳಿಯನ ಬಗ್ಗೆ ಅಪಪ್ರಚಾರ ಮಾಡುವುದಾಗಿ ಬೆದರಿಕೆ ಹಾಕುತ್ತಿದ್ದ ವ್ಯಕ್ತಿಯ ಮೇಲೆ ದೀಪಿಕಾ ದಾಸ್ ತಾಯಿ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪ್ರಕರಣ ದಾಖಲಾಗಿದೆ. ದೀಪಿಕಾ ದಾಸ್ ಮದುವೆಯ ಬಳಿಕ ಪತಿ ಜೊತೆ ವಿದೇಶಕ್ಕೆ ತೆರಳಿದ್ದಾರೆ. ಈ ವೇಳೆ, ಯಶವಂತ ಎಂಬವನು ದೀಪಿಕಾ ತಾಯಿಗೆ ಕರೆ ಮಾಡಿ, ಯಾಕೆ ನಿಮ್ಮ ಮಗಳಿಗೆ ಮದುವೆ ಮಾಡಿದ್ದೀರಿ ಆತ ಒಬ್ಬ ಮೋಸಗಾರ ರಿಯಲ್ ಎಸ್ಟೇಟ್ ಹೆಸರಲ್ಲಿ ಜನರಿಗೆ ಮೋಸ ಮಾಡಿದ್ದಾನೆ ಎಂದು ಹೇಳಿದ್ದನಂತೆ. ನನ್ನ ಅಳಿಯ ಹಾಗೆ ಮಾಡಿದ್ದರೆ ನೀವು ಕಾನೂನು ಕ್ರಮ ಕೈಗೊಳ್ಳಿ ಎಂದು ತಿಳಿಸಿದ್ರಂತೆ. ಅಷ್ಟಕ್ಕೂ ಸುಮ್ಮನಾಗದ ಯಶವಂತ ದೀಪಿಕಾಗೂ ಕರೆ ಮಾಡಿ, ನಿಮ್ಮ ಗಂಡ ಹಲವರಿಗೆ ಮೋಸ ಮಾಡಿದ್ದಾನೆಂದು ಹೇಳಿದ್ದಾನೆ. ಇದಕ್ಕೆ ದೀಪಕಾ, ನನ್ನ ಗಂಡ ಯಾರಿಗೂ ವಂಚನೆ ಮಾಡಿಲ್ಲ ಮಾಡಿದ್ದರೆ ಕಾನೂನಾತ್ಮಕವಾಗಿ ಕ್ರಮಕೈಗೊಳ್ಳಲು ಹೇಳಿದ್ದಾರೆ ಎಂದಿದ್ದಾರೆ. ಇದರಿಂದ ಕೋಪಕೊಂಡ ಯಶವಂತ ನಿಮ್ಮ ಹೆಸರಿಗೆ ಕಳಂಕ ತರುತ್ತೇನೆ ಎಂದು ಬೆದರಿಕೆ ಹಾಕಿದ್ದಾನೆ. ಅಲ್ಲದೇ ಅಪಪ್ರಚಾರ ಮಾಡದೇ ಇರೋದಕ್ಕೆ ಹಣ ನೀಡುವಂತೆ ಬೆದರಿಕೆ ಹಾಕಿದ್ದಾನೆ ಎನ್ನಲಾಗಿದೆ.



## ಪುಷ್ಪ 2ನಲ್ಲಿ ಸೊಂಟ ಬಳುಕಿಸಿದ ಶ್ರೀಲೀಲಾಗೆ ಸಂಭಾವನೆಯನ್ನೇ ಕೊಟ್ಟಿಲ್ವಾ

ಕನ್ನಡದ ನಟಿ ಶ್ರೀಲೀಲಾ ತೆಲುಗಿನ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಕಿಸ್ಸಿಕ್ ಸಾಂಗ್ ರಿಲೀಸ್ ಆಗಿ ಯೂಟ್ಯೂಬ್‌ನಲ್ಲಿ ಟ್ರೆಂಡಿಂಗ್‌ನಲ್ಲಿದೆ. ಪ್ರೆಸ್ ಮೀಟ್‌ವೊಂದರಲ್ಲಿ 'ಪುಷ್ಪ 2' ಚಿತ್ರದ ಸಾಂಗ್‌ನಲ್ಲಿ ಹೆಜ್ಜೆ ಹಾಕಲು ಸಂಭಾವನೆ ಬಗ್ಗೆ ಚರ್ಚೆನೇ ನಡೆದಿಲ್ಲ ಎಂದು ಶ್ರೀಲೀಲಾ ಹೇಳಿದ್ದಾರೆ. ಹಾಗಾದ್ರೆ ನಟಿಗೆ ಸಂಭಾವನೆಯನ್ನೇ ಕೊಟ್ಟಿಲ್ವಾ ಎಂದು ನೆಟ್ಟಿಗರಲ್ಲಿ ಚರ್ಚೆ ಶುರುವಾಗಿದೆ. 'ಕಿಸ್ಸಿಕ್' ಐಟಂ ಸಾಂಗ್ ಒಪ್ಪಿದ್ದೇಕೆ ಮತ್ತು ಸಂಭಾವನೆ ವಿಚಾರದ ಕುರಿತು ಶ್ರೀಲೀಲಾ ಮಾತನಾಡಿ, ಈ ಹಿಂದೆ ಅನೇಕ ಬಾರಿ ಐಟಂ ಹಾಡಿಗೆ ಹೆಜ್ಜೆ ಹಾಕಲು ಆಫರ್ ಬಂದಿತ್ತು. ಆದರೆ ನಾನು ಒಪ್ಪಿರಲಿಲ್ಲ. ಈ 'ಪುಷ್ಪ 2'ಗೆ ಒಪ್ಪಿಗೆ ನೀಡಲು ಕಾರಣವಿದೆ. ಅದಕ್ಕೆ ಡಿ.5ರಂದು ತಿಳಿಯಲಿದೆ ಎಂದಿದ್ದಾರೆ. ಐಟಂ ಹಾಡಿಗೆ ಭಾರೀ ಸಂಭಾವನೆ ಪಡೆದಿದ್ದಾರೆ ಎನ್ನಲಾದ ವಿಚಾರಕ್ಕೆ ನಟಿ ಪ್ರತಿಕ್ರಿಯಿಸಿ, ಈವರೆಗೂ ಸಂಭಾವನೆ ಬಗ್ಗೆ ಚರ್ಚೆ ಮಾಡಿಲ್ಲ. ಅವಕಾಶ ಬಂತು ಹೆಜ್ಜೆ ಹಾಕಿದ್ದೇನೆ.

## ಟೀಸರ್ ಅಲ್ಲ, ಟ್ರೈಲರ್ ಅಲ್ಲ; ಡಿ.2ಕ್ಕೆ ಬರಲಿದೆ 'ಯುಐ' ವಾರ್ನರ್



ರಿಯಲ್ ಸ್ಟಾರ್ ಉಪೇಂದ್ರ ನಟನೆಯ ಯುಐ ಸಿನಿಮಾದ ಅಪ್‌ಡೇಟ್‌ಗಾಗಿ ಕಾಯುತ್ತಿದ್ದ ಅಭಿಮಾನಿಗಳಿಗೆ ಸಿಹಿಸುದ್ದಿ ಸಿಕ್ಕಿದೆ. ಡಿ.2ರಂದು 'ಯುಐ' ಸಿನಿಮಾದ ವಾರ್ನರ್ ರಿಲೀಸ್ ಆಗಲಿದೆ. ನಟ ಉಪೇಂದ್ರ ಮತ್ತೆ ಅಭಿಮಾನಿಳ ತಲೆಗೆ ಹುಳ ಬಿಡುವ ಕೆಲಸ ಮಾಡಿದ್ದಾರೆ. 'ಯುಐ' ಸಿನಿಮಾದ ಟೀಸರ್ ಅಲ್ಲ, ಟ್ರೇಲರ್ ಅಲ್ಲ. ವಾರ್ನರ್ ಬಗ್ಗೆ ಅಪ್‌ಡೇಟ್ ಸಿಗಲಿದೆ ಎಂದು ಉಪೇಂದ್ರ ಸೋಶಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ. ಡಿ.2ರಂದು ಬೆಳಗ್ಗೆ 11:07 ವಾರ್ನರ್ ರಿಲೀಸ್ ಆಗಲಿದೆ.

ಉಪೇಂದ್ರ ನಟನೆಯ 'ಯುಐ' ಚಿತ್ರ ಬಗ್ಗೆ ಡಿಫರೆಂಟ್ ಅನೌನ್ಸ್ ಮಾಡಿದ್ದಾರೆ. ಇದೇ ಡಿಸೆಂಬರ್ 2ಕ್ಕೆ 'ಯುಐ' ಚಿತ್ರದ 'ವಾರ್ನರ್' ಝಲಕ್ ತೋರಿಸಲು ಉಪೇಂದ್ರ ಸಜ್ಜಾಗಿದ್ದಾರೆ. 'ವಾರ್ನರ್' ಎಂಬುದು ಟ್ರೈಲರ್‌ಗೆ ಉಪೇಂದ್ರ ಕರೆದಿರುವ ಹೊಸ ಪದವಾಗಿದೆ. ಈ ಮೂಲಕ ಭಾರೀ ನಿರೀಕ್ಷೆ ಹುಟ್ಟಿಸಿದ್ದಾರೆ. ಉಪೇಂದ್ರ ನಟಿಸಿ, ನಿರ್ದೇಶನ ಮಾಡಿರುವ 'ಯುಐ' ಸಿನಿಮಾ ಡಿ.20ರಂದು ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ. 'ಯುಐ' ವಿಸ್ಮಯದ ಜಗತ್ತಿನ ಸ್ಯಾಂಪಲ್ ತೋರಿಸಲು ಸಜ್ಜಾಗಿದ್ದಾರೆ. ಈಗಾಗಲೇ ಸಾಂಗ್ ಬೀಟ್ಸ್, ಟ್ರೋಲ್ ಆಗುತ್ತೆ ಎಂಬ ಝಲಕ್‌ನಿಂದ ಅಭಿಮಾನಿಗಳ ನಿರೀಕ್ಷೆ ದುಪ್ಪಟ್ಟು ಮಾಡಿದೆ. ಉಪೇಂದ್ರಗೆ ನಾಯಕಿಯಾಗಿ ಕೊಡಗಿನ ಬೆಡಗಿ ರೀಷ್ಮಾ ನಾಣಯ್ಯ ನಟಿಸಿದ್ದಾರೆ. ಲಹರಿ ಫಿಲಂಸ್ ಹಾಗೂ ವೀನಸ್ ಎಂಟರ್‌ಟೈನರ್ಸ್ ಮೂಲಕ ಮಹೋಹರ್ ನಾಯ್ಡು ಹಾಗೂ ಕೆಪಿ ಶ್ರೀಕಾಂತ್ ಅದ್ದೂರಿಯಾಗಿ ನಿರ್ಮಾಣ ಮಾಡಿದ್ದಾರೆ.

ಸಿನಿ ವಾಹಿನಿ



## ಧನುಷ್, ಐಶ್ವರ್ಯಾಗೆ ಡಿವೋರ್ಸ್ ಮಂಜೂರು ಮಾಡಿದ ಕೋರ್ಟ್



ಕಾಲಿವುಡ್ ನಟ ಧನುಷ್ ಮತ್ತು ಐಶ್ವರ್ಯಾ ರಜನಿಕಾಂತ್‌ಗೆ ಚೆನ್ನೈನ ಕೌಟುಂಬಿಕ ನ್ಯಾಯಾಲಯ ಡಿವೋರ್ಸ್ ಮಂಜೂರು ಮಾಡಿದೆ. ಈ ಮೂಲಕ 18 ವರ್ಷಗಳ ದಾಂಪತ್ಯಕ್ಕೆ ಅಂತ್ಯ ಹಾಡಿದ್ದಾರೆ.

2004ರ ನ.18ರಂದು ಧನುಷ್ ಮತ್ತು ಐಶ್ವರ್ಯಾ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದರು. ಕೆಲ ಮನಸ್ತಾಪಗಳಿಂದ 2022ರಲ್ಲಿ ಇಬ್ಬರೂ ದಾಂಪತ್ಯ ಜೀವನ ಅಂತ್ಯಗೊಳಿಸೋದಾಗಿ ಘೋಷಿಸಿದ್ದರು. ಬಳಿಕ ಕಾನೂನಾತ್ಮಕವಾಗಿ ಬೇರೆ ಆಗಲು ಕೋರ್ಟ್ ಮೊರೆ ಹೋಗಿದ್ದರು. ಈ ನ.21ರಂದು ಧನುಷ್ ಮತ್ತು ಐಶ್ವರ್ಯಾ ಕೌಟುಂಬಿಕ ನ್ಯಾಯಾಲಯದ ನ್ಯಾ.ಸುಭಾದೇವಿ ಮುಂದೆ ಹಾಜರಾಗಿದ್ದ ದಂಪತಿ, ಒಟ್ಟಿಗೆ ಬದುಕಲು ಸಾಧ್ಯವಿಲ್ಲ ಎಂದು ಡಿವೋರ್ಸ್ ಕುರಿತು ನಿರ್ಧಾರ ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಧನುಷ್, ಐಶ್ವರ್ಯಾಗೆ ಚೆನ್ನೈನ ಕೌಟುಂಬಿಕ ನ್ಯಾಯಾಲಯ ಡಿವೋರ್ಸ್ ಮಂಜೂರು ಮಾಡಿದೆ. ರಜನಿಕಾಂತ್ ಪುತ್ರಿ ಮತ್ತು ಧನುಷ್ ಒಂದಾಗುತ್ತಾರೆ ಎಂಬ ನಿರೀಕ್ಷೆಯಲ್ಲಿದ್ದ ಫ್ಯಾನ್ಸ್‌ಗೆ ಈ ವಿಚಾರ ಬೇಸರವುಂಟು ಮಾಡಿದೆ.

## ಸೆಟ್ಟೇರಿತು ಯುವ ರಾಜ್‌ಕುಮಾರ್ 2ನೇ ಚಿತ್ರ

ಪಿ.ಆರ್.ಕೆ ಪ್ರೊಡಕ್ಷನ್ಸ್, ಜಯಣ್ಣ ಫಿಲಂಸ್, ಕೆ.ಆರ್.ಜಿ.ಸ್ಟುಡಿಯೋಸ್ ಸಹಯೋಗದಲ್ಲಿ ಮೂಡಿಬರುತ್ತಿರುವ ಯುವ ರಾಜ್ ಕುಮಾರ್ ಅವರ ಬಹುನಿರೀಕ್ಷಿತ 'ಎಕ್ಕ' ಸಿನಿಮಾಗೆ (ನ.28) ಮುಹೂರ್ತವನ್ನು ಶ್ರೀ ಬಂಡೆ ಮಾಕಾಳಮ್ಮ ದೇವಸ್ಥಾನದಲ್ಲಿ ನೆರವೇರಿಸಿ, ಚಿತ್ರೀಕರಣವನ್ನು ಆರಂಭಿಸಿದೆ. ವಿಜಯ್ ಕಿರಗಂದೂರ್ ಅವರ ಪತ್ನಿ ಶ್ರೀಮತಿ ಶೈಲಜಾ ವಿಜಯ್ ಕ್ಲಾಪ್ ಮಾಡುವ ಮೂಲಕ 'ಎಕ್ಕ' ಚಿತ್ರಕ್ಕೆ ನಾಂದಿ ಹಾಡಲಾಯಿತು, ಮೊದಲ ಶಾಟ್ ಅನ್ನು ಡಾಲಿ ಧನಂಜಯ್ ನಿರ್ದೇಶಿಸಿದ್ದು, ನಿರ್ಮಾಪಕ ಕಾರ್ತಿಕ್ ಗೌಡ ಅವರ ತಾಯಿ ಶ್ರೀಮತಿ ವಿಜಯಲಕ್ಷ್ಮೀ ರಾಮಕೃಷ್ಣ ಕ್ಯಾಮೆರಾ ಬಟನ್ ಆನ್ ಮಾಡುವ ಮೂಲಕ ಚಾಲನೆ ನೀಡಿದರು.

ಕಾಶ್ಮೀರ, ಬೆಂಗಳೂರು, ಮೈಸೂರು, ದೆಹಲಿ, ಕೋಲ್ಕತ್ತಾ, ಮುಂಬೈ ಸೇರಿದಂತೆ ಹಲವಾರು ಸ್ಥಳಗಳಲ್ಲಿ 'ಎಕ್ಕ' ಚಿತ್ರದ ಚಿತ್ರೀಕರಣ ನಡೆಯುವುದಾಗಿ ತಂಡ ಇಂದು ತಿಳಿಸಿದೆ. ಈ ಚಿತ್ರದ ನಿರ್ದೇಶಕ ರೋಹಿತ್ ಪದಕಿ ಮಾತನಾಡಿ,



'ಎಕ್ಕ' ಒಂದು ಮೆಗಾ ಚಿತ್ರವಾಗಿದ್ದು, ಇದರ ಜವಾಬ್ದಾರಿ ಹೊತ್ತಿರುವ ಹೆಮ್ಮೆ ನನಗಿದೆ. ಚಿತ್ರದ ಎಲ್ಲಾ ನಿರ್ಮಾಪಕರು, ಕನ್ನಡ ಜನರು, ಯುವ ರಾಜ್ ಕುಮಾರ್ ಮತ್ತು ಅವರ ಅಭಿಮಾನಿಗಳ ಎಲ್ಲಾರ ನಂಬಿಕೆಯನ್ನು ಈ ಚಿತ್ರ ಉಳಿಸಲಿದೆ, ಜನರ ಮೇಲೆ ಆಳವಾದ ಭಾವನಾತ್ಮಕ ಪ್ರಭಾವ ಬೀರಲಿದೆ ಎಂದು ತಿಳಿಸಿದರು.

## ಇನ್ನೇರಡು ದಿನಗಳಲ್ಲಿ ಭಾರತ- ಪಾಕ್ ನಡುವೆ ಕ್ರಿಕೆಟ್ ಫೈಟ್

2025ರ ಫೆಬ್ರವರಿ-ಮಾರ್ಚ್‌ನಲ್ಲಿ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿಗೆ ಸಂಬಂಧಿಸಿದಂತೆ ಭಾರತ ಮತ್ತು ಪಾಕಿಸ್ತಾನದ ನಡುವಿನ ವಿವಾದ ಇದುವರೆಗೂ ಬಗೆಹರಿದಿಲ್ಲ. ಹೀಗಾಗಿ ಐಸಿಸಿ ಕೂಡ ಈ ಪಂದ್ಯಾವಳಿಯ ವೇಳಾಪಟ್ಟಿಯನ್ನು ಪ್ರಕಟಿಸಿಲ್ಲ. ಆದರೀಗ ಭಾರತ ಹಾಗೂ ಪಾಕಿಸ್ತಾನ ನಡುವಿನ ವಿವಾದವನ್ನು ಬಗೆಹರಿಸುವ ಸಲುವಾಗಿಯೇ ಐಸಿಸಿ, ನವೆಂಬರ್ 29 ರಂದು ಸಭೆ ನಡೆಸಲು ತೀರ್ಮಾನಿಸಿದೆ. ಈ ಸಭೆಯ ಬಳಿಕ ಪಂದ್ಯಾವಳಿಯ ವೇಳಾಪಟ್ಟಿಯನ್ನು ಪ್ರಕಟಿಸುವ ಸಾಧ್ಯತೆಗಳಿವೆ. ಆದರೆ ಅದಕ್ಕೂ ಮುನ್ನ ಅಂದರೆ ಕೇವಲ ಇನ್ನೇರಡು ದಿನಗಳಲ್ಲಿ ಭಾರತ ಮತ್ತು ಪಾಕಿಸ್ತಾನ ತಂಡಗಳ ನಡುವೆ ಕ್ರಿಕೆಟ್ ಪಂದ್ಯ ನಡೆಯಲಿದೆ.

**ದುಬೈನಲ್ಲಿ ಭಾರತ- ಪಾಕ್ ಫೈಟ್**

ವಾಸ್ತವವಾಗಿ ಪುರುಷರ ಅಂಡರ್-19 ಏಷ್ಯಾಕಪ್ ನವೆಂಬರ್ 29 ರಿಂದ ಡಿಸೆಂಬರ್ 8 ರವರೆಗೆ ಯುಎಇಯಲ್ಲಿ ನಡೆಯಲಿದೆ. ಈ ಟೂರ್ನಿಯಲ್ಲಿ ಭಾರತ, ಪಾಕಿಸ್ತಾನ, ಅಫ್ಘಾನಿಸ್ತಾನ, ಶ್ರೀಲಂಕಾ, ಬಾಂಗ್ಲಾದೇಶ, ಜಪಾನ್, ಯುಎಇ, ನೇಪಾಳ ಸೇರಿದಂತೆ ಒಟ್ಟು 8 ತಂಡಗಳು ಭಾಗವಹಿಸಲಿವೆ. 1989 ರಲ್ಲಿ ಪ್ರಾರಂಭವಾದ ಅಂಡರ್-19 ಏಷ್ಯಾಕಪ್‌ನ 11ನೇ ಆವೃತ್ತಿಯ ಟೂರ್ನಿ ನಡೆಯಲಿದ್ದು, ಸತತ ನಾಲ್ಕನೇ ಬಾರಿಗೆ ಯುಎಇ ಆತಿಥ್ಯ ವಹಿಸಲಿದೆ. ಈ ಟೂರ್ನಿಯಲ್ಲಿ ಭಾಗವಹಿಸುವ 8 ತಂಡಗಳನ್ನು ತಲಾ 4ರ ಎರಡು ಗುಂಪುಗಳಾಗಿ ವಿಂಗಡಿಸಲಾಗಿದೆ. ಭಾರತ, ಪಾಕಿಸ್ತಾನ, ಜಪಾನ್ ಮತ್ತು ಯುಎಇ ತಂಡಗಳು ಎ ಗುಂಪಿನಲ್ಲಿದ್ದರೆ, ಶ್ರೀಲಂಕಾ, ಬಾಂಗ್ಲಾದೇಶ, ಅಫ್ಘಾನಿಸ್ತಾನ ಮತ್ತು ನೇಪಾಳವನ್ನು ಬಿ ಗುಂಪಿನಲ್ಲಿ ಸ್ಥಾನ ಪಡೆದಿವೆ.



ಅಂಡರ್-19 ಏಷ್ಯಾಕಪ್‌ಗೆ ಟೀಂ ಇಂಡಿಯಾ: ಆಯುಷ್ ಮ್ಹಾತ್ರೆ, ವೈಭವ್ ಸೂರ್ಯವಂಶಿ, ಸಿ ಆಂಡ್ರೆ ಸಿದ್ಧಾರ್ಥ್, ಮೊಹಮ್ಮದ್ ಅಮನ್ (ನಾಯಕ), ಕಿರಣ್ ಚೋರ್ಮಲೆ (ಉಪನಾಯಕ), ಪ್ರಣಬ್ ಪಂತ್, ಹರ್ವಂಶ್ ಸಿಂಗ್ ಪಂಗಾಲಿಯಾ (ವಿಕೆಟ್ ಕೀಪರ್), ಅನುರಾಗ್ ಕಾವ್ಡೆ (ವಿಕೆಟ್ ಕೀಪರ್), ಹಾರ್ದಿಕ್ ರಾಜ್, ಮೊಹಮ್ಮದ್ ಅನನ್, ಸಮರ್ತ್ ಕಾರ್ತಿಕೇಯ, ನಾಗರಾಜ್, ಯುಧಾಜಿತ್ ಗುಹಾ, ಚೇತನ್ ಶರ್ಮಾ, ನಿಖಿಲ್ ಕುಮಾರ್.

ನಾನ್ ಟ್ರಾವೆಲಿಂಗ್ ರಿಸರ್ವ್: ಸಾಹಿಲ್ ಪರಾಖ್, ನಮನ್ ಪುಷ್ಪಕ್, ಅನ್ಮೋಲ್ಜೀತ್ ಸಿಂಗ್, ಪ್ರಣವ್ ರಾಘವೇಂದ್ರ, ಡಿ ದೀಪೇಶ್.

### ಭಾರತದ ವೇಳಾಪಟ್ಟಿ

**ಭಾರತ ಮತ್ತು ಪಾಕಿಸ್ತಾನ ತಂಡಗಳು ಒಂದೇ ಗುಂಪಿನಲ್ಲಿರುವುದರಿಂದ ಎರಡೂ ತಂಡಗಳು ಗುಂಪು ಹಂತದಲ್ಲೇ ಮುಖಾಮುಖಿಯಾಗಲಿವೆ. ಭಾರತ ಮತ್ತು ಪಾಕಿಸ್ತಾನ ತಂಡಗಳ ನಡುವಿನ ಈ ಪಂದ್ಯ ನವೆಂಬರ್ 30 ರಂದು ದುಬೈ ಮೈದಾನದಲ್ಲಿ ನಡೆಯಲಿದೆ. ಈ ಪಂದ್ಯ ಭಾರತೀಯ ಕಾಲಮಾನ ಬೆಳಗ್ಗೆ 10.30ಕ್ಕೆ ನಡೆಯಲಿದೆ. ಇದರ ನಂತರ, ಭಾರತ ತಂಡವು ಡಿಸೆಂಬರ್ 2 ರಂದು ಶಾರ್ಜಾದಲ್ಲಿ ಜಪಾನ್ ತಂಡವನ್ನು ಎದುರಿಸಲಿದೆ. ಆ ನಂತರ ಭಾರತ ತನ್ನ ಕೊನೆಯ ಗುಂಪು ಹಂತದ ಪಂದ್ಯವನ್ನು ಯುಎಇ ತಂಡದ ವಿರುದ್ಧ ಡಿಸೆಂಬರ್ 4 ರಂದು ಆಡಲಿದೆ.**

## ಆಫ್ರಿಕಾ ವಿರುದ್ಧ ಕೇವಲ 42 ರನ್‌ಗಳಿಗೆ ಶ್ರೀಲಂಕಾ ಆಲೌಟ್

ಶ್ರೀಲಂಕಾ ತಂಡ ಸದ್ಯ ದಕ್ಷಿಣ ಆಫ್ರಿಕಾ ಪ್ರವಾಸದಲ್ಲಿದೆ. ಉಭಯ ತಂಡಗಳ ನಡುವೆ 2 ಟೆಸ್ಟ್ ಪಂದ್ಯಗಳ ಸರಣಿ ನಡೆಯುತ್ತಿದೆ. ಸರಣಿಯ ಮೊದಲ ಪಂದ್ಯ ಕಿಂಗ್ಸ್‌ಮೀಡ್ ಡರ್ಬನ್‌ನಲ್ಲಿ ನಡೆಯುತ್ತಿದೆ.

ಈ ಪಂದ್ಯಕ್ಕೆ ಮಳೆ ಅಡ್ಡಿಪಡಿಸುತ್ತಿರುವ ಕಾರಣ ಮೊದಲ ದಿನ ಕೇವಲ 20.4 ಓವರ್‌ಗಳನ್ನು ಮಾತ್ರ ಆಡಲಾಗಿತ್ತು. ಆದರೆ ಎರಡನೇ ದಿನದಾಟದಲ್ಲಿ ಆಟ ಮುಂದುವರೆದಿದ್ದು ದಕ್ಷಿಣ ಆಫ್ರಿಕಾ 191 ರನ್‌ಗಳಿಗೆ ತನ್ನ ಮೊದಲ ಇನ್ನಿಂಗ್ಸ್ ಮುಗಿಸಿತ್ತು. ಇದಾದ ಬಳಿಕ ಇನ್ನಿಂಗ್ಸ್ ಆರಂಭಿಸಿದ ಶ್ರೀಲಂಕಾ ತಂಡ, ಆಫ್ರಿಕಾ ಬೌಲರ್‌ಗಳ ದಾಳಿಗೆ ನಲುಗಿ ಕೇವಲ 42 ರನ್‌ಗಳಿಗೆ ಆಲೌಟ್ ಆಗಿದೆ.

**ಲಂಕಾ ದಹನ:** ಆಫ್ರಿಕಾ ಬೌಲರ್‌ಗಳ ದಾಳಿಗೆ ಬೆದರಿದ ಸಿಂಹಳೀಯರು ಮೊದಲ ಇನಿಂಗ್ಸ್‌ನಲ್ಲಿ ಕೇವಲ 13.5 ಓವರ್‌ಗಳಲ್ಲಿ 42 ರನ್ ಗಳಿಗೆ ಆಲೌಟ್ ಆಗಿದೆ. ಆಫ್ರಿಕಾ ಪರ ಮಾರಕ ದಾಳಿ ನಡೆಸಿದ ವೇಗಿ ಮಾರ್ಕೊ ಯಾನ್ಸನ್ ಏಕಾಂಗಿಯಾಗಿ 7 ಲಂಕಾ ಬ್ಯಾಟ್ಸ್‌ಮನ್‌ಗಳನ್ನು ಪೆವಿಲಿಯನ್ ಗಟ್ಟಿದರು. ಮಾರ್ಕೊ ಯಾನ್ಸನ್ ಕೇವಲ 6.5 ಓವರ್ ಬೌಲ್ ಮಾಡಿ 13 ರನ್ ನೀಡಿ 7 ವಿಕೆಟ್ ಪಡೆದರು. ಮಾರ್ಕೊ ಯಾನ್ಸನ್ ಅವರಲ್ಲದೆ, ಜೆರಾಲ್ಡ್ ಕೊಯೆಟ್ಜಿ ಕೂಡ 2 ವಿಕೆಟ್ ಪಡೆದರೆ, ಕಗಿಸೊ ರಬಾಡ 1 ವಿಕೆಟ್ ಪಡೆದರು.

ಮೊದಲ ಇನ್ನಿಂಗ್ಸ್‌ನಲ್ಲಿ ಶ್ರೀಲಂಕಾ ತಂಡವು ಕೇವಲ 13.5 ಓವರ್‌ಗಳಲ್ಲಿ ಅಂದರೆ 83 ಎಸೆತಗಳಲ್ಲಿ ಆಲೌಟ್ ಆಗಿತ್ತು, ಇದರೊಂದಿಗೆ ಟೆಸ್ಟ್ ಕ್ರಿಕೆಟ್‌ನಲ್ಲಿ ಅತಿ ಕಡಿಮೆ ಎಸೆತಗಳಲ್ಲಿ ಆಲೌಟ್ ಆದ ಎರಡನೇ ತಂಡ ಎಂಬ ಬೇಡದ ದಾಖಲೆಗೆ ಕೊರಳೊಡ್ಡಿದೆ. ಇದಕ್ಕೂ ಮುನ್ನ 1924ರಲ್ಲಿ ಇಂಗ್ಲೆಂಡ್ ವಿರುದ್ಧ ಎಡ್ಜ್‌ಬಾಸ್ಟನ್‌ನಲ್ಲಿ ದಕ್ಷಿಣ ಆಫ್ರಿಕಾ ತಂಡ 75 ಎಸೆತಗಳಲ್ಲಿ 30 ರನ್‌ಗಳಿಗೆ ಆಲೌಟ್ ಆಗಿತ್ತು. ಅಂದರೆ ಟೆಸ್ಟ್ ಕ್ರಿಕೆಟ್‌ನಲ್ಲಿ 100 ವರ್ಷಗಳ ನಂತರ ಈ ಘಟನೆ ಮರುಕಳಿಸಿದೆ.

### ಲಂಕಾ ತಂಡದ ಹೀನಾಯ ಪ್ರದರ್ಶನ

ಅತಿ ಕಡಿಮೆ ಎಸೆತಗಳಲ್ಲಿ ಆಲೌಟ್ ಆಗುವುದರ ಜೊತೆಗೆ ಲಂಕಾ ತಂಡ ತನ್ನ ಟೆಸ್ಟ್ ಕ್ರಿಕೆಟ್ ಇತಿಹಾಸಿದಲ್ಲಿ ಅತ್ಯಂತ ಕಡಿಮೆ ಸ್ಕೋರ್‌ಗೆ ಆಲೌಟ್ ಆದ ಬೇಡದ ದಾಖಲೆಯನ್ನು ತನ್ನ ಖಾತೆಗೆ ಹಾಕಿಕೊಂಡಿದೆ. ಇದಕ್ಕೂ ಮುನ್ನ 1994ರಲ್ಲಿ ಪಾಕಿಸ್ತಾನ ವಿರುದ್ಧ ಶ್ರೀಲಂಕಾ ತಂಡ 71 ರನ್‌ಗಳಿಗೆ ಆಲೌಟ್ ಆಗಿತ್ತು. ಇದೇ ವೇಳೆ ಲಂಕಾ ತಂಡ ಟೆಸ್ಟ್‌ನಲ್ಲಿ 50 ರನ್‌ಗಳ ಗಡಿ ಮುಟ್ಟದೆ ಆಲೌಟ್ ಆಗಿರುವುದು ಇದೇ ಮೊದಲು. ಮತ್ತೊಂದೆಡೆ, ದಕ್ಷಿಣ ಆಫ್ರಿಕಾ ಮೊದಲ ಬಾರಿಗೆ ಇಷ್ಟು ಕಡಿಮೆ ಸ್ಕೋರ್‌ಗೆ ಎದುರಾಳಿ ತಂಡವನ್ನು ಆಲೌಟ್ ಮಾಡಿದ ಸಾಧನೆಯನ್ನು ಮಾಡಿದೆ. ಇದಕ್ಕೂ ಮುನ್ನ 2013ರಲ್ಲಿ ದಕ್ಷಿಣ ಆಫ್ರಿಕಾ, ನ್ಯೂಜಿಲೆಂಡ್ ತಂಡವನ್ನು 45 ರನ್‌ಗಳಿಗೆ ಆಲೌಟ್ ಮಾಡಿದ್ದು, ಇದುವರೆಗಿನ ದಾಖಲೆಯಾಗಿತ್ತು.



## ನಡುವೆ ಒಪ್ಪಂದ: ಚಾಂಪಿಯನ್ಸ್ ಟ್ರೋಫಿ ನಡೆಯುವುದೆಲ್ಲಿ ಎಂಬುದು ಬಹಿರಂಗ

ಚಾಂಪಿಯನ್ಸ್ ಟ್ರೋಫಿ ಚರ್ಚೆ ಮುಂದುವರೆದಿದೆ. ಒಂದೆಡೆ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಟೂರ್ನಿಯನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಲ್ಲ ಎಂದರೆ, ಮತ್ತೊಂದೆಡೆ ಭಾರತೀಯ ಕ್ರಿಕೆಟ್ ಮಂಡಳಿ ಪಾಕ್‌ನಲ್ಲಿ ಟೂರ್ನಿ ಆಡಲು ನಿರಾಕರಿಸಿದೆ. ಹೀಗಾಗಿಯೇ ಮುಂಬರುವ ಚಾಂಪಿಯನ್ಸ್ ಟ್ರೋಫಿ ಎಲ್ಲಿ ನಡೆಯಲಿದೆ ಪ್ರಶ್ನೆಯೊಂದು ಹುಟ್ಟಿಕೊಂಡಿತ್ತು. ಈ ಪ್ರಶ್ನೆಗೆ ಇದೀಗ ಪಾಕಿಸ್ತಾನ್ ತಂಡದ ಮಾಜಿ ಆಟಗಾರ ರಶೀದ್ ಲತೀಫ್ ಉತ್ತರ ನೀಡಿದ್ದಾರೆ

ಪಾಕಿಸ್ತಾನದ ಮಾಜಿ ನಾಯಕ ರಶೀದ್ ಲತೀಫ್ ಪ್ರಕಾರ, ಚಾಂಪಿಯನ್ಸ್ ಟ್ರೋಫಿ 2025 ಅನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಲಾಗುತ್ತದೆ. ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ), ಪಾಕಿಸ್ತಾನ ಕ್ರಿಕೆಟ್ ಮಂಡಳಿ (ಪಿಸಿಬಿ) ಮತ್ತು ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ನಡುವೆ ಈಗಾಗಲೇ ಒಪ್ಪಂದವಾಗಿದೆ ಎಂದು ಅವರು ತಿಳಿಸಿದ್ದಾರೆ. ಈ ಒಪ್ಪಂದ ದ ಪ್ರಕಾರ, ಪಾಕಿಸ್ತಾನದಲ್ಲೇ ಚಾಂಪಿಯನ್ಸ್ ಟ್ರೋಫಿ ನಡೆಯಲಿದೆ. ಆದರೆ ಭಾರತದ ಪಂದ್ಯಗಳನ್ನು ದುಬೈನಲ್ಲಿ ಆಡಲಾಗುತ್ತದೆ. ಅದರಂತೆ ಟೀಮ್ ಇಂಡಿಯಾದ ಎಲ್ಲಾ ಪಂದ್ಯಗಳಿಗೆ ದುಬೈನ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ಆತಿಥ್ಯವಹಿಸಲಿದೆ ಎಂದು ಅವರು ಖಾಸಗಿ ಚಾನೆಲ್ ಮೂಲಕ ಬಹಿರಂಗಪಡಿಸಿದ್ದಾರೆ. ಪಾಕಿಸ್ತಾನ್ ಕ್ರಿಕೆಟ್ ಮಂಡಳಿಯು ಈಗಾಗಲೇ ಹೈಬ್ರಿಡ್ ಮಾದರಿಗೆ ಒಪ್ಪಿಗೆ ಸೂಚಿಸಿದೆ. ಈ ಮೂಲಕ ಚಾಂಪಿಯನ್ಸ್ ಟ್ರೋಫಿ ಆಯೋಜನೆಯ ಹಕ್ಕು ಕೈ ತಪ್ಪದಂತೆ ನೋಡಿಕೊಂಡಿದೆ.



ಹೀಗಾಗಿ ಭಾರತ ತಂಡ ಪಾಕ್‌ಗೆ ಬಂದು ಆಡುವುದಿಲ್ಲ. ಬದಲಾಗಿ ದುಬೈಗೆ ತೆರಳಲಿದೆ. ಇನ್ನು ಭಾರತದ ವಿರುದ್ಧದ ಪಂದ್ಯಗಳಿಗಾಗಿ ಪಾಕಿಸ್ತಾನ್ ಸೇರಿದಂತೆ ಕೆಲ ತಂಡಗಳು ದುಬೈಗೆ ತೆರಳಲಿದೆ ಎಂದು ರಶೀದ್ ಲತೀಫ್ ತಿಳಿಸಿದ್ದಾರೆ. ಹಾಗೆಯೇ ಈ ಒಪ್ಪಂದದ ಪ್ರಕಾರ, ಭಾರತ ತಂಡವು ಸೆಮಿಫೈನಲ್‌ಗೆ ಪ್ರವೇಶಿಸಿದರೆ ಆ ಪಂದ್ಯ ಕೂಡ ದುಬೈನಲ್ಲೇ ನಡೆಯಲಿದೆ.

## ವಿರಾಟ್ ಕೊಹ್ಲಿ ಜೊತೆಗಿನ ಕಿರಿಕ್‌ಗೆ ಭಾರೀ ಬೆಲೆ ತೆತ್ತ 'ಮ್ಯಾಂಗೊ' ನವೀನ

ಗುಜರಾತ್ ಟೈಟಾನ್ಸ್ ವಿರುದ್ಧದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಸೋತಾಗ ನವೀನ್ ಉಲ್ ಹಕ್ ಸೋಷಿಯಲ್ ಮೀಡಿಯಾದಲ್ಲಿ ಮಾವಿನ ಹಣ್ಣಿನ ಫೋಟೋ ಹಂಚಿಕೊಂಡು, ಸ್ವೀಟ್ ಮ್ಯಾಂಗೊ ಎಂದು ಆರ್‌ಸಿಬಿಯ ಕಾಲೆಳೆದಿದ್ದರು. ಇದಾದ ಬಳಿಕ ಅಫ್ಘಾನ್ ಆಟಗಾರನಿಗೆ ಮ್ಯಾಂಗೊ ನವೀನ ಎಂಬ ಟ್ಯಾಗ್ ಲೈನ್ ಸೃಷ್ಟಿಯಾಯಿತು. ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-17 ರಲ್ಲಿ ಸಖತ್ ಸದ್ದು ಮಾಡಿದ್ದ ಅಫ್ಘಾನಿಸ್ತಾನ್ ಆಟಗಾರ ನವೀನ್ ಉಲ್ ಹಕ್‌ಗೆ ಈ ಬಾರಿ ಅದೃಷ್ಟ ಕೈ ಕೊಟ್ಟಿದೆ. ಐಪಿಎಲ್ 2025ರ ಮೆಗಾ ಹರಾಜಿನಲ್ಲಿ 2 ಕೋಟಿ ರೂ. ಮೂಲ ಬೆಲೆಯೊಂದಿಗೆ ಕಾಣಿಸಿಕೊಂಡಿದ್ದ ನವೀನ್ ಅವರ ಖರೀದಿಗೆ ಈ ಬಾರಿ ಯಾವುದೇ ಫ್ರಾಂಚೈಸಿ ಆಸಕ್ತಿ ತೋರಿಸಿಲ್ಲ ಎಂಬುದು ವಿಶೇಷ.



ಇದಕ್ಕೆ ಒಂದು ಕಾರಣ ಈ ಹಿಂದಿನ ಘಟನೆ ಎಂದು ವಿಶ್ಲೇಷಿಸಲಾಗುತ್ತಿದೆ. ನಡುವಣ ಪಂದ್ಯದ ವೇಳೆ ನವೀನ್ ಉಲ್ ಹಕ್ ವಿರಾಟ್ ಕೊಹ್ಲಿ ಜೊತೆ ಕಿರಿಕ್ ಮಾಡಿಕೊಂಡಿದ್ದರು. ಇದಾದ ಬಳಿಕ ಅಫ್ಘಾನ್ ಆಟಗಾರ ಕಿಂಗ್ ಕೊಹ್ಲಿ ಅಭಿಮಾನಿಗಳ ಕೆಂಗಣ್ಣಿಗೆ ಗುರಿಯಾಗಿದ್ದರು. ಅಲ್ಲದೆ ಕಳೆದ ಸೀಸನ್‌ನಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಪಂದ್ಯದ ವೇಳೆ ನವೀನ್ ಉಲ್ ಹಕ್ ವಿರುದ್ಧ ಅಭಿಮಾನಿಗಳಿಂದ ಮೂದಲಿಕೆ ಕೂಡ ಕೇಳಿ ಬಂದಿತ್ತು. ಇದು ಲಕ್ನೋ ಫ್ರಾಂಚೈಸಿಯ ಮೇಲೂ ಪರೋಕ್ಷ ಪರಿಣಾಮ ಬೀರಿದೆ ಎಂದು ಹೇಳಲಾಗುತ್ತಿದೆ. ಇದೇ ಕಾರಣದಿಂದ ಈ ಬಾರಿ ಲಕ್ನೋ ಸೂಪರ್ ಜೈಂಟ್ಸ್ ಕೂಡ ನವೀನ್ ಉಲ್ ಹಕ್ ಅವರನ್ನು ಕೈ ಬಿಟ್ಟಿದೆ. ಅತ್ತ ಉಳಿದ ಫ್ರಾಂಚೈಸಿಗಳ ಕೂಡ ನವೀನ್ ಅವರನ್ನು ಮೂಲ ಬೆಲೆಗೆ ಖರೀದಿಸಲು ಮುಂದಾಗಲಿಲ್ಲ. ಇನ್ನು ಕೊನೆಯ ಸುತ್ತಿನ ಶಾರ್ಟ್ ಲಿಸ್ಟ್ ಪಟ್ಟಿಯಲ್ಲೂ ನವೀನ್ ಉಲ್ ಹಕ್ ಸ್ಥಾನ ಪಡೆದಿರಲಿಲ್ಲ. ಅಂದರೆ ಕಳೆದ ಸೀಸನ್‌ನಲ್ಲಿ 10 ಪಂದ್ಯಗಳಲ್ಲಿ 14 ವಿಕೆಟ್ ಕಬಳಿಸಿದ್ದ ನವೀನ್ ಈ ಬಾರಿ ಯಾವುದೇ ಫ್ರಾಂಚೈಸಿಯ ಹಿಟ್ ಲಿಸ್ಟ್‌ನಲ್ಲಿರಲಿಲ್ಲ ಎಂಬುದು ಸ್ಪಷ್ಟ. ಹೀಗಾಗಿಯೇ ಇದೀಗ ಮಾಡಿದ್ದುಣ್ಣೋ ಮಹಾರಾಯ ಎಂಬ ಗಾದೆಯ ಮೂಲಕ ನವೀನ್ ಉಲ್ ಹಕ್ ಅವರನ್ನು ವಿರಾಟ್ ಕೊಹ್ಲಿ ಅಭಿಮಾನಿಗಳು ಕಾಲೆಳೆಯುತ್ತಿದ್ದಾರೆ. ಅತ್ತ ಎರಡು ಸೀಸನ್‌ಗಳ ಮೂಲಕ 18 ಪಂದ್ಯಗಳನ್ನಾಡಿರುವ ನವೀನ್ ಮಾಡಿದ ತಪ್ಪಿಗೆ ಪ್ರಾಯಶ್ಚಿತ ಪಡುತ್ತಿರಬಹುದೇನೋ

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966